ಸಂಪುಟ: 14 Volume | ಸಂಚಿಕೆ: 24 Issue | ಪುಟಗಳು 08 Pages | ಮಂಗಳವಾರ 28 ಏಪ್ರಿಲ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ನಾವು ಬಿಡುಗಡೆ, ಸ್ವಾತಂತ್ರ್ಯ ಪಡೆಯಬೇಕಾದದ್ದು ಅಜ್ಞಾನದಿಂದ, ಅಧರ್ಮದಿಂದ.

–ಬಿ.ಎಂ.ಶ್ರೀ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

ಹರ್ಷ.ಪಿ.ಎಸ್ ಅವರಿಗೆ ಪಿಎಚ್.ಡಿ ಪದವಿ 6
ಸಾಮೂಹಿಕ ವಿವಾಹ ಕಾರ್ಯಕ್ರಮ 7
ಮೀಸಲಾತಿ ಕಸಿದುಕೊಂಡ ಕಾಂಗ್ರೆಸ್ 8



ವಿಶ್ವ ಬೌದ್ಧ ಮಹಾ ಸಮ್ಮೇಳನ ಸಮಿತಿ, ಉಪಾಸಿಕ ಅಂಡ್ ಉಪಾಸಕ ಚಾರಿಟಬಲ್ ಟ್ರಸ್ಟ್ (ರಿ) ಹಾಗೂ ಇಂಟರ್ನ್ಯಾಷನಲ್ ಬುದ್ದಿಸ್ಟ್ ಮಾಂಕ್ಸ್ ಚಾರಿಟಬಲ್ ಟ್ರಸ್ಟ್ (ರಿ), ಚಾಮರಾಜನಗರದ ಉತ್ತವಳ್ಳಿಯ ಪಂಚಶೀಲ ಬೆಟ್ಟದ ನಳಂದ ಜ್ಞಾನ ಮತ್ತು ಅಧ್ಯಯನ ಕೇಂದ್ರವು ಸದಾಶಿವ ನಗರದ ನಾಗಸೇನಾ ಬುದ್ಧ ವಿಹಾರದಲ್ಲಿ ಆಯೋಜಿಸಿದ್ದ ವಿಶ್ವ ಬೌದ್ಧ ಮಹಾ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿ, 888 ಅಡಿ ಎತ್ತರದ ಭಗವಾನ್ ಬುದ್ದರ ಮೂರ್ತಿ ನಿರ್ಮಾಣ ಯೋಜನೆಗೆ ಚಾಲನೆ ನೀಡಿ, ಪಂಚಶೀಲ ಪಾದಯಾತ್ರೆಯ ಪ್ರಾರಂಭೋತ್ಸವವನ್ನು ಉದ್ಘಾಟಿಸಿದರು.

## ಪಂಚಮಸಾಲಿ ಪೀಠದ ಜಟಾಪಟಿ

**ದಾವಣಗೆರೆ:** ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿಗಳನ್ನು ಉಚ್ಚಾಟಿಸಿದ್ದ ಮೂವರು ಟ್ರಸ್ಟಿಗಳನ್ನೇ ಸಂಘ ಈಗ ಉಚ್ಚಾಟಿಸಿದೆ. ಇವರಿಗೆ ಅಧಿಕಾರವೇ ಇಲ್ಲ ಎಂದು ಟ್ರಸ್ಟಿಗಳು ವಾದಿಸಿದ್ದಾರೆ. 2026ರ ಏಪ್ರಿಲ್ 13 ರಿಂದ ಜಾರಿಗೆ ಬರುವಂತೆ ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಟ್ರಸ್ಟ್ನ ಪ್ರಧಾನ ಧರ್ಮದರ್ಶಿ ಬಿ.ಸಿ. ಉಮಾಪತಿ, ಚಂದ್ರಶೇಖರ್ ಪೂಜಾರ್ ಮತ್ತು ಜ್ಯೋತಿ ಪ್ರಕಾಶ್ ಅವರನ್ನು ಉಚ್ಚಾಟನೆ ಮಾಡಲಾಗಿದೆ ಎಂದು ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ರಾಜ್ಯಾಧ್ಯಕ್ಷ ಸೋಮನಗೌಡ ಎಂ. ಪಾಟೀಲ್ ಹೇಳಿದ್ದಾರೆ.



ಹಾವೇರಿ ಜಿಲ್ಲೆ ರಾಣೆಬೆನ್ನೂರಿನ ಈಡಿಗ ಸಮುದಾಯದ ಪೀಠಾಧಿಪತಿಗಳು ಹಾಗೂ ಅತಿ ಹಿಂದುಳಿದ ವರ್ಗಗಳ ಮಠಾಧೀಶರುಗಳ ವೇದಿಕೆಯ ಅಧ್ಯಕ್ಷರೂ ಆದ ಶ್ರೀ ಪ್ರಣವಾನಂದ ಸ್ವಾಮೀಜಿ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಸೋಮವಾರ ಭೇಟಿ ಮಾಡಿ, ಸಮಾಲೋಚನೆ ನಡೆಸಿದರು.

## ಜನಗಣತಿಗೆ ವಿದ್ಯಾರ್ಥಿಗಳು: ದೂರು

**ಬಳ್ಳಾರಿ:** ಜನಗಣತಿಗೆ ನಿಯೋಜನೆಗೊಂಡ ಕೆಲವು ಗಣತಿದಾರರು, ತಮ್ಮ ಬದಲು ವಿದ್ಯಾರ್ಥಿಗಳನ್ನು ಮನೆಮನೆ ಗಣತಿಗೆ ಕಳಿಸುತ್ತಿರುವುದು ಬೆಳಕಿಗೆ ಬಂದಿದೆ. ಈ ಕುರಿತು ಪೋಷಕರು ದೂರಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 4 ಲಕ್ಷ ಮನೆಗಳಿವೆ. ಏ.16 ರಿಂದ ಗಣತಿದಾರರು ಮನೆಮನೆ ಭೇಟಿ ನೀಡಿ ಸ್ಮಾರ್ಟ್ಫೋನ್ಗಳ ಮೂಲಕ ಡಿಜಿಟಲ್ ದತ್ತಾಂಶ ಸಂಗ್ರಹಿಸುತ್ತಿದ್ದಾರೆ. ದತ್ತಾಂಶ ಸಂಗ್ರಹಕ್ಕೆ ಶಿಕ್ಷಕರು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರನ್ನು ಒಳಗೊಂಡಂತೆ 2,798 ಗಣತಿದಾರರು ಮತ್ತು 473 ಮೇಲ್ವಿಚಾರಕರನ್ನು ನೇಮಿಸಲಾಗಿದೆ.

## ಕಾಯಕ ಮಹತ್ವವನ್ನು ಸಾರಿದ್ದ ಬಸವಣ್ಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಶ್ರೀಮಂತ ಬಡವ, ಹೆಣ್ಣು ಗಂಡು, ಮೇಲು ಕೀಳು, ಉಚ್ಚ ನೀಚ ತಾರತಮ್ಯಗಳನ್ನು ತೊಲಗಿಸುವ ಒಂದು ದಿವ್ಯಮಂತ್ರವಾಗಿ ಬಸವಣ್ಣನವರು ಸಾರಿದ್ದು ಏಕದೇವೋಪಾಸನೆ ಮತ್ತು ಕಾಯಕ ಮಹತ್ವ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಪ್ರತಿಪಾದಿಸಿದ್ದಾರೆ.

ಬಸವ ವೇದಿಕೆ ವತಿಯಿಂದ ತಮಗೆ ಬಸವಶ್ರೀ ಪ್ರಶಸ್ತಿ ಘೋಷಣೆ ಮಾಡಿರುವುದಕ್ಕೆ ವೇದಿಕೆಗೆ ಪತ್ರ ಬರೆದು ಧನ್ಯವಾದ ತಿಳಿಸಿ, ಸದ್ಯದ ಸಂದರ್ಭದಲ್ಲಿ ವಚನಕಾರರ ಮಹತ್ವ ಹಾಗೂ ಪ್ರಾಮುಖ್ಯತೆ ಬಗ್ಗೆ ಒತ್ತಿ ಹೇಳಿದ್ದಾರೆ. ಅವರು ಜನರಿಂದ, ಜನರಿಗಾಗಿ ಜನರ ಮಹಾಮನೆಯನ್ನು ಕಟ್ಟಿ ಬಿಜ್ಜಳನ ಅರಮನೆಯನ್ನು ತೃಣವಾಗಿ ಭಾವಿಸಿದವರು. ಹಾಗೆ ನಡೆದ ಕಲ್ಯಾಣ



ಕ್ರಾಂತಿಯಲ್ಲಿ ಸಾವಿರಾರು ಶರಣ ಶರಣೆಯರನ್ನು ತಮ್ಮ ತಮ್ಮ ಅನುಭವ, ಅನುಭಾವದಿಂದ ರಚಿಸಿದ ವಚನಗಳು ಕನ್ನಡದ ಸಾಹಿತ್ಯ ಲೋಕವನ್ನು ವಿಸ್ತರಿಸಿ ಸಂಸ್ಕೃತ ಮತ್ತು ಸಂಸ್ಕಾರವನ್ನು ಪ್ರಚುರಗೊಳಿಸಿದ ವಿಶಿಷ್ಟ ಸಾಹಿತ್ಯವಾಗಿದೆ ಎಂದು ಮಾಜಿ ಪ್ರಧಾನಿಗಳು ಬಣ್ಣಿಸಿದ್ದಾರೆ.

## ಉಗ್ರರ ಪುಸ್ತಕ ಬಿಡುಗಡೆ ಬೇಡ: ಸಂಸದ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

2020ರ ದೆಹಲಿ ದಂಗೆ ಪ್ರಕರಣದಲ್ಲಿ ಯುಎಪಿಎ ಕಾಯ್ದೆಯಡಿ ತಿಹಾರ್ ಜೈಲಿನಲ್ಲಿರುವ ಉಗ್ರ ಉಮರ್ ಖಾಲಿದ್ ಕುರಿತ ಪುಸ್ತಕ ಬಿಡುಗಡೆಗೆ ರಾಜ್ಯ ಸರ್ಕಾರ ಅವಕಾಶ ನೀಡಬಾರದು ಎಂದು ಸಂಸದ ಪಿ.ಸಿ ಮೋಹನ್ ಹೇಳಿದ್ದಾರೆ.

ಕಾರ್ಯಕ್ರಮಕ್ಕೆ ಅನುಮತಿ ನೀಡದಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ಮನವಿ ಮಾಡಿದ ನಂತರ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ದೇಶದ್ರೋಹಿ ಉಮರ್ ಖಾಲಿದ್ 2020 ರ ದೆಹಲಿ ದಂಗೆಯ ಪ್ರಮುಖ ಆಪಾದಿತ. ಅಂದು ನಡೆದ ಸ್ಫೋಟದಲ್ಲಿ ಸಾಕಷ್ಟು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಆಸ್ತಿ–ಪಾಸ್ತಿಗೆ



ಹಾನಿಯಾಗಿದೆ. ಇಂದಿಗೂ ಜೈಲು ಶಿಕ್ಷೆ ಅನುಭವಿಸುತ್ತಿರುವ ಆರೋಪಿಯನ್ನು ವೈಭವೀಕರಿಸುವ ಅಗತ್ಯವೇನು? ಎಂದು ಪ್ರಶ್ನಿಸಿದ್ದಾರೆ. ದೊಮ್ಮಲೂರಿನ ಬೆಂಗಳೂರು ಇಂಟರ್ ನ್ಯಾಷನಲ್ ಸೆಂಟರ್ನಲ್ಲಿ ಹಮ್ಮಿಕೊಂಡಿರುವ ಪುಸ್ತಕ ಬಿಡುಗಡೆಗೆ ಅವಕಾಶ ಸಿಗಬಾರದು. ಕಾರ್ಯಕ್ರಮ ನಡೆಯಬಾರದು. ಈ ಸಂಬಂಧ ಪೊಲೀಸ್ ಆಯುಕ್ತರಿಗೆ ಮನವಿ ಸಲ್ಲಿಸಿದ್ದೇವೆ ಎಂದಿದ್ದಾರೆ.

# ಅಲ್ಲಿ ಪಟ್ಟು ಇಲ್ಲಿ ಇಕ್ಕಟ್ಟು

## ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಸಂಚಲನ | ಡಿಸಿಎಂ ತಂತ್ರ ಸಿಎಂ ಬಣಗಳ ಷಡ್ಯಂತ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಷಯ ದಿಕ್ಕೊಂದು ತಿರುವು ಪಡೆಯುತ್ತಿದೆ. ಡಿಸಿಎಂ ಡಿಕೆ ಶಿವಕುಮಾರ್, ಡಿಕೆ ಸುರೇಶ್ ಪಟ್ಟಕ್ಕಾಗಿ ಉಡ ಪಟ್ಟು ಹಿಡಿದಿದ್ದು, ದೆಹಲಿಗೆ ಪ್ರವಾಸ ಮಾಡಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಜೊತೆಗೆ ಸುದೀರ್ಘವಾಗಿ ಮಾತುಕತೆ ನಡೆಸಿದ್ದರು. ಡಿಕೆಶಿ ಸಹೋದರರ ಈ ಕಸರತ್ತು ನಡುವೆ ಸಿಎಂ ಸಿದ್ದರಾಮಯ್ಯ ಬಣ ಜಾಗೃತವಾಗಿದೆ.

**ದೆಹಲಿಗೆ ಹೊರಟರು:** ಸಿದ್ದರಾಮಯ್ಯ ಆಪ್ತರು ದೆಹಲಿ ಪ್ರವಾಸಕ್ಕೆ ಸಿದ್ದರಾಗಿದ್ದಾರೆ. ಸೋಮವಾರ ಸಂಜೆ ಸಚಿವ ಎಚ್ ಸಿ ಮಹದೇವಪ್ಪ ದೆಹಲಿಗೆ ತೆರಳಲಿದ್ದಾರೆ. ಸಂಜೆ 4:30ಕ್ಕೆ ದೆಹಲಿಗೆ ತೆರಳಿರೋ ಸಮಾಜ ಕಲ್ಯಾಣ ಇಲಾಖೆಯ ಸಚಿವ ದೆಹಲಿಯಲ್ಲೇ ವಾಸ್ತವ್ಯ ಹೂಡಲಿದ್ದು, ಕೇಂದ್ರ ಸಚಿವರ ಜೊತೆ ಸಭೆಯಲ್ಲಿ ಭಾಗಿಯಾಗಿಲಿದ್ದಾರೆ.

**ಸತೀಶ್ ಕೂಡ ಠಿಕಾಣಿ:** ಇನ್ನು ಸಚಿವ ಸತೀಶ್ ಜಾರಕಿಹೊಳಿ ಅವರು ದೆಹಲಿಯಲ್ಲೇ ಬೀಡು ಬಿಟ್ಟಿದ್ದಾರೆ. ಅವರು ಅಹಿಂದ ಹೋರಾಟ ಹಾಗೂ ಸಾಧನೆಗೆ ಸಂಬಂಧಿಸಿದಂತೆ ವಿಚಾರ ಸಂಕಿರಣದಲ್ಲಿ ಭಾಗಿಯಾಗಿದ್ದರು. ಇದರ ಬೆನ್ನಲ್ಲೇ ಅವರು ದೆಹಲಿಗೆ ತೆರಳಿದ್ದಾರೆ. ಸದ್ಯ ನಡೆಯುತ್ತಿರುವ ರಾಜಕೀಯ ಬೆಳವಣಿಗೆ ಬಗ್ಗೆ ವರಿಷ್ಠರಿಗೆ ತಿಳಿಸಲಿದ್ದಾರೆ ಎನ್ನಲಾಗಿದೆ.



ನಮ್ಮ ನಮ್ಮ ಕೆಲಸ ಮಾಡಿಕೊಂಡು ಹೋಗೋಣ ಫಲಾಪಲ ಭಗವಂತನಿಗೆ ಬಿಡೋಣ ಅಂತಾರೆ. ಅದೇ ರೀತಿ ಡಿಕೆಶಿವಕುಮಾರ್ ಕೂಡ ಕೆಲಸ ಮಾಡಿಕೊಂಡು ಹೋಗ್ತಾ ಇದ್ದಾರೆ. ಅನೇಕ ಅಭಿವೃದ್ಧಿ ಕೆಲಸ ಮಾಡಿದ್ದಾರೆ ಡಿಕೆ ಶಿವಕುಮಾರ್. ಅವರಿಗೆ ಒಂದು ಸ್ಥಾನ ಮಾನ ಸಿಗಲಿ ಅಂತ ನನ್ನೂ ಸೇರಿದಂತೆ ಅನೇಕರ ಆಸೆ. ಅವರ ಶ್ರಮಕ್ಕೆ ಹೈ ಕಮಾಂಡ್ ಪ್ರತಿಫಲ ಕೊಡಬೇಕು.

–ರಂಗನಾಥ್
ಕಾಂಗ್ರೆಸ್ ಶಾಸಕ ಕುಣಿಗಲ್

### ಮೇ 4ಕ್ಕೆ ಏನಾಗಲಿದೆ?

ಮೇ 4ಕ್ಕೆ ಪಂಚ ರಾಜ್ಯಗಳ ಚುನಾವಣಾ ಫಲಿತಾಂಶ ಬರಲಿದೆ. ಈ ಹಿನ್ನೆಲೆಯಲ್ಲಿ ಭವಿಷ್ಯದ ವಣಿಗೆ ಏನು ಎನ್ನುವುದು ಕುತೂಹಲಕ್ಕೆ ಕಾರಣ. ಸದ್ಯ ದೆಹಲಿ ಮಟ್ಟದಲ್ಲಿ ಸಾಕಷ್ಟು ಬೆಳವಣಿಗೆಗಳು ನಡೆಯುತ್ತಿವೆ. ಆದರೆ, ಮೇ 4 ರ ಬಳಿಕ ಇವೆಲ್ಲವೂ ರಾಜ್ಯಕ್ಕೆ ಶಿಫ್ಟ್ ಅಗುವ ಸಾಧ್ಯತೆ ಇದೆ. ಡಿಕೆ ಶಿವಕುಮಾರ್ ಬಣ ಈ ನಿಟ್ಟಿನಲ್ಲಿ ಸಿದ್ಧತೆ ಮಾಡಿಕೊಂಡಿದೆ.

### ಹೇಳಿಕೆಯ ಒಳಾರ್ಥ?

ಡಿಕೆಶಿವಕುಮಾರ್ ಅವರು ಪದೇ ಪದೆ ದೆಹಲಿಗೆ ಭೇಟಿ ನೀಡುತ್ತಿದ್ದಾರೆ. ಏತನ್ಮಧ್ಯೆ ಏನೇನು ತೀರ್ಮಾನ ಆಗಿವೆಯೋ ಅದು ಚಾಲ್ತಿಗೆ ಬರಲಿದೆ ಎಂದು ನೀಡಿರುವ ಹೇಳಿಕೆ ಮತ್ತೆ ನಾಯಕತ್ವ ಬದಲಾವಣೆಯ ಮುನ್ಸೂಚನೆ ಎಂದೇ ವ್ಯಾಖ್ಯಾನಿಸಲಾಗುತ್ತಿದೆ. ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸಿದ್ದು, ಸುದೀರ್ಘ ಅವಧಿಯಲ್ಲಿ ಉಭಯ ನಾಯಕರ ನಡುವಿನ ಮಾತುಕತೆ ಚರ್ಚೆಗೆ ಗ್ರಾಸವಾಗಿದೆ.

### ಎಲ್ರೂ ಮಾಡೋ ರಾಜ್ಕೀಯ

ಡಿಕೆ ಸಹೋದರರ ಹೈಕಮಾಂಡ್ ಭೇಟಿ ವಿಚಾರವಾಗಿ ಹಾಗೂ ಪವರ್ ಶೇರಿಂಗ್ ಫೈಟ್ ಬಗ್ಗೆ ಮಾತನಾಡಿದ ಗೃಹ ಸಚಿವ ಡಾ. ಜಿ ಪರಮೇಶ್ವರ್, ನಾವೆಲ್ಲಾ ಮಾಡುವುದೇ ರಾಜಕೀಯ. ಇದರಲ್ಲಿ ಬೆಳವಣಿಗೆ ಏನಿದೆ? ರಾಜಕಾರಣ ಎಂಬ ವ್ಯಾಖ್ಯಾನದಲ್ಲೇ ಅದೆಲ್ಲಾ ಬಂದು ಬಿಡುತ್ತದೆ. ಪ್ರತ್ಯೇಕವಾಗಿ ರಾಜಕೀಯ ಅನ್ನೋದು ಏನು ಇಲ್ಲ ಎಂದು ಎಂದು ಪತ್ಯೇಕವಾಗಿ ವಿಶ್ಲೇಷಿಸಿದ್ದಾರೆ.

## ಮುಖ್ಯಮಂತ್ರಿಯ ಪಟ್ಟ ಮೈತ್ರಿಗೆ ಬಹಳ ಕಷ್ಟ

• ಮಲ್ಲಮ್ಮ ನುಡಿ ವಾರ್ತೆ ಹಾಸನ

ಜಿಲ್ಲೆಯಲ್ಲಿ ಮೈತ್ರಿ ಪಕ್ಷಗಳ ಮುಖಂಡರು ಸಾರ್ವಜನಿಕವಾಗಿ ನೀಡುತ್ತಿರುವ ಹೇಳಿಕೆ–ಪ್ರತಿ ಹೇಳಿಕೆಗಳು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಜೆಡಿಎಸ್ ರಜತ ಮಹೋತ್ಸವ ಹಿನ್ನೆಲೆಯಲ್ಲಿ ನಡೆದಿದ್ದ ಜನತಾ ಸಮಾವೇಶದಲ್ಲಿಯೂ ಎಚ್.ಡಿ.ಕುಮಾರಸ್ವಾಮಿ ಮತ್ತೊಮ್ಮೆ ಸಿಎಂ ಆಗಬೇಕು ಎಂಬುದು ಜೆಡಿಎಸ್ ಅಭಿಲಾಷೆ ಎಂಬ ಹೇಳಿಕೆ ನೀಡಿ ಚರ್ಚೆ ಹುಟ್ಟುಹಾಕಿದ್ದ ನಿಖಿಲ್ ಕುಮಾರಸ್ವಾಮಿ ಪದೇ ಪದೆ ಈ ವಿಷಯ ಪ್ರಸ್ತಾಪಿಸುತ್ತಿರುವುದು ಬಿಜೆಪಿ ಪಾಳೆಯದಲ್ಲಿ ನುಂಗಲಾರದ ಬಿಸಿತುಪ್ಪವಾಗಿದೆ. ರಾಷ್ಟ್ರೀಯ ಪಕ್ಷವಾಗಿ ಮುಂದಿನ 2028ರ ಸಿಎಂ ಅಭ್ಯರ್ಥಿ ಯಾರು ಎಂಬುದು ಹೈಕಮಾಂಡ್ ತೀರ್ಮಾನಿಸಬೇಕು, ಮೈತ್ರಿ ಪಕ್ಷ ಜೆಡಿಎಸ್ ಜತೆ ಚರ್ಚೆಯಾಗಬೇಕು. ಅಂತಹ ಯಾವುದೇ ಸಭೆ, ಬೆಳವಣಿಗೆ ಆಗದಿರುವ ಸಂದರ್ಭದಲ್ಲಿ ಸಿಎಂ ವಿಷಯ ಪ್ರಸ್ತಾಪ ಸಲ್ಲದು ಎಂಬುದು ಬಿಜೆಪಿ ಮುಖಂಡರ ವಾದ.

## ಎಂಟು ಜಿ.ಪಂ ಕ್ಷೇತ್ರ ಮರು ವಿಂಗಡಣೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು


ರಾಜ್ಯ ಸರ್ಕಾರವು ಆಡಳಿತಾತ್ಮಕ ಅನುಕೂಲಕ್ಕಾಗಿ ರಾಜ್ಯದ ಎಂಟು ಜಿಲ್ಲೆಗಳ ಜಿಲ್ಲಾ ಪಂಚಾಯತಿ ಕ್ಷೇತ್ರಗಳ ಗಡಿಗಳನ್ನು ಮರುವಿಂಗಡಣೆ ಮಾಡಿದೆ. ಚುನಾಯಿತ ಸದಸ್ಯರ ಸಂಖ್ಯೆಯನ್ನು ನಿಗದಿಪಡಿಸಿ ನೂತನ ಅಧಿಸೂಚನೆಯನ್ನು ಹೊರಡಿಸಿದೆ.

ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಹಾಸನ, ಉತ್ತರ ಕನ್ನಡ, ಯಾದಗಿರಿ, ಬೀದರ್ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಜಿ.ಪಂ. ಕ್ಷೇತ್ರಗಳ ಗಡಿಗಳನ್ನು ಮರು ವಿಂಗಡಣೆ ಮಾಡಲಾಗಿದೆ. ಈ ಹಿಂದೆ ಹೊರಡಿಸಲಾಗಿದ್ದ ಅಧಿಸೂಚನೆಯ ಬಳಿಕ ಹಲವು ಭೌಗೋಳಿಕ ಹಾಗೂ ಆಡಳಿತಾತ್ಮಕ ಬದಲಾವಣೆಗಳಾಗಿದ್ದವು. ಪ್ರಮುಖವಾಗಿ, ನಗರಾಭಿವೃದ್ಧಿ ಇಲಾಖೆಯು ಕೆಲವು ಪ್ರದೇಶಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತಿಸಿತ್ತು. ಕಂದಾಯ ಇಲಾಖೆಯು ಮಾಗಡಿ ಮತ್ತು ನೆಲಮಂಗಲ ತಾಲ್ಲೂಕುಗಳ ಭೌಗೋಳಿಕ ಗಡಿಗಳನ್ನು ಪುನರ್ ರಚನೆ ಮಾಡಿತ್ತು. ಈ ಬದಲಾವಣೆಗಳಿಂದಾಗಿ ಭೌಗೋಳಿಕ ವ್ಯಾಪ್ತಿಗೆ ಅನುಗುಣವಾಗಿ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಗಡಿಗಳನ್ನು ಪರಿಷ್ಕರಿಸುವುದು ಅನಿವಾರ್ಯವಾಗಿತ್ತು.

## ಸಿಲಿಂಡರ್ ಗ್ಯಾಸ್ ಸೋರಿಕೆ: ಉರಿದ ಮನೆ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ಸಿಲಿಂಡರ್ ಸೋರಿಕೆಯ ಬೆಂಕಿ ಅವಘಡಕ್ಕೆ ಬೆಳ್ಳಿ, ಬಂಗಾರ ಸೇರಿದಂತೆ ಲಕ್ಷಾಂತರ ಮೌಲ್ಯದ ಸಾಮಾಗ್ರಿಗಳು ಸುಟ್ಟು ಭಸ್ಮವಾದ ಘಟನೆ ಪಟ್ಟಣದಲ್ಲಿ ನಡೆದಿದೆ. ಪಟ್ಟಣದ 4ನೇ ವಾರ್ಡಿನ ಕೆಂಚಮ್ಮ ಗುಡಿ ಬಳಿಯ ಹರಿಜನ ಕಾಲೊನಿಯಲ್ಲಿರುವ ಜಿ.ಯಲ್ಲಪ್ಪ ಎಂಬುವವರ ಶೆಡ್ಡಿನ ಮನೆಯಲ್ಲಿ ಸೋಮವಾರ ಬೆಳಿಗ್ಗೆ 9ಗಂಟೆಗೆ ಗ್ಯಾಸ್ ಸಿಲಿಂಡರ್ ಸೋರಿಕೆಯಾಗಿದೆ. ಸೋರಿಕೆಯಿಂದ ಉದ್ಭವಗೊಂಡ ಬೆಂಕಿ ಧಗಧಗನೇ ಉರಿಯಲು ಆರಂಭಿಸಿದೆ. ಮನೆಯಲ್ಲಿದ್ದ ಯಲ್ಲಪ್ಪ ಅವರ ಪತ್ನಿ ಲಲಿತಮ್ಮ, ಮೂರು ಜನ ಮಕ್ಕಳು ಕೂಡಲೇ ಎಚ್ಚೆತ್ತುಕೊಂಡು ತಗಡಿನ ಶೆಡ್ ನಿಂದ ಹೊರಗಡೆ ಬಂದಿದ್ದಾರೆ. ನಂತರ ಬೆಂಕಿ ಶೆಡ್ ತುಂಬಾ ಆವರಿಸಿಕೊಂಡು, ಟಿ.ವಿ, ಫ್ರಿಡ್ಜ್, 1 ಲಕ್ಷ ನಗದು ಹಣ, ನಾದು ತೊಲೆ ಬೆಳ್ಳಿ, ಎರಡು ತೊಲೆ ಬಂಗಾರ, ದವನಧಾನ್ಯ, ಪಾತ್ರೆಗಳು, ಮಂಚ, ಬಟ್ಟೆ ಸೇರಿದಂತೆ ನಾನಾ ಸಾಮಾಗ್ರಿಗಳು ಸುಟ್ಟು ಭಸ್ಮವಾಗಿವೆ. ಘಟನೆಯಲ್ಲಿ ಶೆಡ್ ಸಂಪೂರ್ಣವಾಗಿ ಸುಟ್ಟು ಕರಕಲವಾಗಿದೆ. ನಷ್ಟಕೊಳಗಾದ ನಿವಾಸಿ ಜಿ.ಯಲ್ಲಪ್ಪ ಮಾತನಾಡಿ,



ನಾನು ಬಡವನಾಗಿದ್ದು, ಸರ್ಕಾರದ ಮಟ್ಟದಲ್ಲಿ ನಷ್ಟಪರಿಹಾರ ಒದಗಿಸಿಕೊಡಬೇಕೆಂದು ಮನವಿ ಮಾಡಿದ್ದಾರೆ.

**ತಾಯಿ ಮಕ್ಕಳು ಪ್ರಾಣಾಪಾಯದಿಂದ ಪಾರು**

ಶೆಡ್‌ನಲ್ಲಿದ್ದ ತಾಯಿ, ಮಕ್ಕಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನಾ ಸ್ಥಳಕ್ಕೆ ಗಂಗಾವತಿ ಅಗ್ನಿ ಶಾಮಕದಳದವರು ಭೇಟಿ ನೀಡಿ, ಬೆಂಕಿ ನಂದಿಸಿದ್ದಾರೆ. ಅಷ್ಟರೊಳಗೆ ಲಕ್ಷಾಂತರ ಮೌಲ್ಯದ ಬೆಳ್ಳಿ, ಬಂಗಾರ ಸೇರಿದಂತೆ ನಾನಾ ಸಾಮಾಗ್ರಿಗಳು ಬೆಂಕಿಗಾಹುತಿಯಾಗಿವೆ.

### ಶಾಸಕರಿಂದ ಪರಿಹಾರ ಘೋಷಣೆ

ಶಾಸಕ ಜೆ.ಎನ್.ಗಣೇಶ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರ ನಷ್ಟಕ್ಕೊಳಗಾದ ಯಲ್ಲಪ್ಪ ಕುಟುಂಬಕ್ಕೆ ಸ್ಥಳದಲ್ಲೇ 25 ಸಾವಿರ ನಗದು ಪರಿಹಾರ ನೀಡಿ, ಮುಂದಿನ ದಿನದಲ್ಲಿ ಮನೆ ಕಟ್ಟಿಸಿಕೊಡುವ ಭರವಸೆ ನೀಡಿದ್ದಾರೆ. ವಾಡ್ ಮಾಜಿ ಸದಸ್ಯ ಕೆ.ಎಸ್. ಚಾಂದ್ ಬಾಷಾ ಪ್ರತಿಕ್ರಿಯಿಸಿ, ಸಂತ್ರಸ್ತರ ಮನೆ ನಿರ್ಮಾಣಕ್ಕಾಗಿ 50 ಚೀಲ ಸಿಮೆಂಟ್, 25 ಸಾವಿರ ನೀಡಲಾಗುವುದು ಎಂದಿದ್ದಾರೆ.

## ವಿದ್ಯಾರ್ಥಿನಿ ಪರಿಶ್ರಮಕ್ಕೆ ಸಿಕ್ಕ ಪ್ರತಿಫಲ

• ಪರಶುರಾಮ ಕರಣಂ, ಭಾಲ್ಕಿ

ಶಿಕ್ಷಣವು ವ್ಯಕ್ತಿಯ ಜೀವನವನ್ನು ರೂಪಿಸುವ ಅತ್ಯಂತ ಮಹತ್ವದ ಅಂಶವಾಗಿದೆ. ವಿಶೇಷವಾಗಿ 10ನೇ ತರಗತಿ ವಿದ್ಯಾರ್ಥಿಗಳಿಗೆ ಇದು ಮಹತ್ವದ ಹಂತವಾಗಿದ್ದು, ಅವರ ಭವಿಷ್ಯದ ದಾರಿಯನ್ನು ನಿರ್ಧರಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಇಂತಹ ಹಂತದಲ್ಲಿ ಅನುಷ್ಕಾ ಲೋಯ ವಿದ್ಯಾರ್ಥಿನಿ ಉತ್ತಮ ಅಂಕಗಳನ್ನು ಗಳಿಸಿರುವುದು ಅವಳ ಪರಿಶ್ರಮ, ನಿಷ್ಠೆ ಮತ್ತು ಸಂಕಲ್ಪದ ಪ್ರತೀಕವಾಗಿದೆ.

ಈ ವಿದ್ಯಾರ್ಥಿನಿ ತನ್ನ ವಿದ್ಯಾಭ್ಯಾಸದತ್ತ ಸದಾ ಶ್ರದ್ಧೆ ತೋರಿದ್ದಾಳೆ. ಪ್ರತಿದಿನವೂ ನಿಯಮಿತವಾಗಿ ಪಾಠಗಳನ್ನು ಓದಿ, ಶಿಕ್ಷಕರ ಮಾರ್ಗದರ್ಶನವನ್ನು ಅನುಸರಿಸಿ, ಸಮಯವನ್ನು ಸರಿಯಾಗಿ ಹಂಚಿಕೊಂಡಿದ್ದಾಳೆ. ಅವಳಿಗೆ ಎದುರಾದ ಸವಾಲುಗಳನ್ನು ಧೈರ್ಯದಿಂದ ಎದುರಿಸಿ, ತನ್ನ ಗುರಿಯತ್ತ ಮುಂದುವರಿದಳು. ಅವಳ ಈ ಪ್ರಯತ್ನಗಳು ಅವಳಿಗೆ ಉತ್ತಮ ಫಲಿತಾಂಶವನ್ನು ತಂದಿವೆ. ಕುಟುಂಬದ ಬೆಂಬಲವೂ ಅವಳ ಸಾಧನೆಗೆ ಮುಖ್ಯ ಕಾರಣವಾಗಿದೆ. ಪರಿಶ್ರಮ ಮತ್ತು ನಿಯಮಿತತೆ ಇದ್ದರೆ ಯಾವುದೇ ಗುರಿಯನ್ನು ಸಾಧಿಸಬಹುದು ಎಂಬುದನ್ನು ಈ ವಿದ್ಯಾರ್ಥಿನಿ ತೋರಿಸಿದ್ದಾಳೆ. ಅವಳ ಯಶಸ್ಸು ಇನ್ನಷ್ಟು ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ. ಒಟ್ಟಿನಲ್ಲಿ, ಈ ವಿದ್ಯಾರ್ಥಿನಿಯ ಸಾಧನೆ ನಮ್ಮೆಲ್ಲರಿಗೂ ಸಂತೋಷವನ್ನುಂಟುಮಾಡುವುದರ ಜೊತೆಗೆ, ಪರಿಶ್ರಮದ ಮಹತ್ವವನ್ನು ಮತ್ತೊಮ್ಮೆ ನೆನಪಿಸುತ್ತದೆ.




### ಶಿಕ್ಷಕರ ಸಹಕಾರ, ಪೋಷಕರ ಪ್ರೋತ್ಸಾಹ

ಪೋಷಕರು ಅವಳಿಗೆ ಪ್ರೇರಣೆ ನೀಡಿ, ಅವಳ ಓದಿಗೆ ಅಗತ್ಯವಾದ ಎಲ್ಲಾ ಸೌಲಭ್ಯಗಳನ್ನು ಒದಗಿಸಿದ್ದಾರೆ. ಶಿಕ್ಷಕರೂ ಸಹ ಅವಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸಿ, ಉತ್ತಮ ಮಾರ್ಗದರ್ಶನ ನೀಡಿದ್ದಾರೆ. ಇಂಗ್ಲಿಷ್ 124, ಕನ್ನಡ 98, ಹಿಂದಿ 100, ಗಣಿತ 97, ವಿಜ್ಞಾನ 97, ಸಮಾಜ ವಿಜ್ಞಾನ 96 ಒಟ್ಟು 612 ಅಂಕಗಳನ್ನು ಪಡೆದು 97.92 ./. ಶಾಲೆಗೆ ಕೀರ್ತಿಯನ್ನು ಹೆಚ್ಚಿಸಿದ್ದಾಳೆ. ಈ ಸಾಧನೆ ಇತರ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ.

**ಅಲ್ಲಮನ ತಾತ್ವಿಕತೆ, ಬಸವಣ್ಣನ ಕ್ರಿಯಾಶೀಲತೆ, ಅಂಬಿಗರ ಚೌಡಯ್ಯನ ಆಕ್ರೋಶ ಬೇಕಾಗಿದೆ: ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ**

# ಇಟಗಾ ಗ್ರಾಮದಲ್ಲಿ ಜಗಜ್ಯೋತಿ ಬಸವೇಶ್ವರ ಮೂರ್ತಿ ಅನಾವರಣ




• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:**

12ನೇ ಶತಮಾನದಲ್ಲಿಯೇ ಸಾಮಾಜಿಕ, ರಾಜಕೀಯ, ಧಾರ್ಮಿಕ ಹಾಗೂ ಕಾಯಕ ಕ್ರಾಂತಿಗೆ ನಾಂದಿ ಹಾಡಿದ ಜಗಜ್ಯೋತಿ ಬಸವೇಶ್ವರರು ಜಗತ್ತು ಕಂಡ ಅಪ್ರತಿಮ ಹೋರಾಟಗಾರ, ಸಮಾಜ ಸುಧಾರಕ, ಧಾರ್ಮಿಕ ಗುರು ಹಾಗೂ ಕ್ರಾಂತಿಕಾರ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು. ತಾಲೂಕಿನ ಇಟಗಾ ಗ್ರಾಮದಲ್ಲಿ ಜಗ ಜ್ಯೋತಿ ಬಸವೇಶ್ವರರ ಅಶ್ವರೂಢ ಮೂರ್ತಿ ಅನಾವರಣ ಹಾಗೂ 893ನೇ ಬಸವ ಜಯಂತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಚನಗಳ ಮೂಲಕ ಬಸವಣ್ಣನವರ ಅಂದಿನ ಜಾತಿ ವ್ಯವಸ್ಥೆ, ಮೇಲು, ಕೀಳು, ಬಡವ, ಶ್ರೀಮಂತ, ಅಕ್ಷರಸ್ಥ, ಅನಕ್ಷರಸ್ಥ, ಗಂಡು, ಹೆಣ್ಣು ಎನ್ನುವ ಭೇದ ಭಾವಗಳನ್ನು ತೊಡೆದು ಹಾಕಿ ಸಮಾನತೆ ಸಾರಿದರು. ಎಲ್ಲ ಸಮುದಾಯದ ವ್ಯಕ್ತಿಗಳನ್ನೊಳಗೊಂಡ ಅನುಭವ ಮಂಟಪ ಸ್ಥಾಪಿಸಿದರು. ಇದುವೇ ಜಗತ್ತಿನ ಮೊದಲ ಸಂಸತ್ ಆಗಿದೆ. ಆ ಮೂಲಕ ಇಡೀ ಸಾಮಾಜಿಕ, ರಾಜಕೀಯ, ಧಾರ್ಮಿಕ ವ್ಯವಸ್ಥೆಯನ್ನು ಬದಲಿಸುವ ಪ್ರಯತ್ನ ಮಾಡಿದರೆಂದು ಹೇಳಿದರು. ಜಾಹೀರಾಬಾದ್ ಮಲ್ಲಯ್ಯಾಗಿರಿಯ ಪೂಜ್ಯ ಡಾ. ಬಸವಲಿಂಗ ಅವಧೂತರು, ಹಾಗೂ ಕಲ್ಮುಡ ಹಾಗೂ ಸೊಂತ ಆಶ್ರಮದ ಪೀಠಾಧಿಪತಿಗಳಾದ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಕಾರ್ಯಕ್ರಮ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಬಸವೇಶ್ವರ ಯುವ ಮಂಡಳಿ ಅಧ್ಯಕ್ಷ ಆನಂದಸಾಗರ ನಾರಾಯಣಪುರ, ಈಶ್ವರಯ್ಯ ಸ್ವಾಮಿ, ಸುಭಾಷ ಚೌಧರಿ, ಮಲ್ಲಿಕಾರ್ಜುನ ಮೈಲುರ್, ಸಿದ್ದಪ್ಪ ಕಲ್ಲುರ್, ಭದ್ರಪ್ಪ ಯಾದವ, ನಾಗರಾಜ ನಾರಾಯಣಪುರ, ಸುರೇಶ ಪಂಚಾಳ, ಮಾಣಿಕ ಚೌಧರಿ, ಗೋಪಾಲ ರೆಡ್ಡಿ, ಶ್ರೀನಿವಾಸ ರೆಡ್ಡಿ, ನೀಲಕಂಠ ಇಸ್ಲಾಂಪುರೇ, ಚಂದ್ರಕಾಂತ ನಾರಾಯಣಪುರ್, ಆಕಾಶ ಅನಾದೆ, ದಿಲೀಪ್ ಚೀನಕೇರಿ ಸೇರಿದಂತೆ ಶ್ರೀ ಬಸವೇಶ್ವರ ಯುವಕ ಮಂಡಳಿಯ ಪದಾಧಿಕಾರಿಗಳು ಹಾಗೂ ಬಸವಾಭಿಮಾನಿಗಳು ಉಪಸ್ಥಿತರಿದ್ದರು.

# ಶಶಿ ಹೊಸಳ್ಳಿಯವರನ್ನು ಬಿಜೆಪಿ ಪಕ್ಷ ಉಚ್ಚಾಟಿಸಲಿ: ಜಾಬಶೆಟ್ಟಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಮಹಾನಗರ ಪಾಲಿಕೆ ಸದಸ್ಯರು ಹಾಗೂ ಬಿಜೆಪಿ ನಗರ ಘಟಕದ ಅಧ್ಯಕ್ಷ ಶಶಿಧರ ಹೊಸಳ್ಳಿ ಅವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟಿಸಬೇಕೆಂದು ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರು ಹಾಗೂ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರ ವಿರುದ್ಧ ಶಶಿಧರ ಹೊಸಳ್ಳಿ ಅವರು ಅವಹೇಳನಕಾರಿ ಮಾತನಾಡಿರುವುದು ಅಕ್ಷಮ್ಯ ಅಪರಾಧ. ಅಂಥವರ ಬಗ್ಗೆ ಮಾತನಾಡುವಾಗ ಮೈ ಮೇಲೆ ಎಚ್ಚರವಿರಬೇಕು. ಈ ಭಾಗಕ್ಕೆ 371(ಜೆ) ವಿಧಿ ಜಾರಿಗೆ ತಂದವರು, ಬರೀ ರೈಲ್ವೆಯ ಸಮಯ ಬದಲಿಸಿ ಎಂದ ಮಾತ್ರಕ್ಕೆ ಹೊಸದೊಂದು ಬೀದರ್-ಯಶವಂತಪುರ ರೈಲನ್ನು ಪ್ರಾರಂಭಿಸಿದವರು ಡಾ. ಖರ್ಗೆ ಅವರು.

ಅವರ ಬಗ್ಗೆ ಮಾತನಾಡುವಷ್ಟು ಶಶಿ ದೊಡ್ಡವರಲ್ಲ. ಹೀಗಾಗಿ ಅವರಿಗೆ ಆ ಪಕ್ಷದ ಹಿರಿಯರು ಬುದ್ಧಿವಾದ ಹೇಳಬೇಕು. ಇಂಥ ಮಾತುಗಳನ್ನು ಪುನಃ ಆಡದಂತೆ ಎಚರಿಕೆ ನೀಡಬೇಕೆಂದು ಒತ್ತಾಯಿಸಿದರು.

ಶಶಿಧರ ಹೊಸಳ್ಳಿ ಅವರು ಈ ಹಿಂದೆ ಸಹ ರಾಜ್ಯದ ಗೃಹ ಮಂತ್ರಿ ಡಾ. ಜಿ. ಪರಮೇಶ್ವರ ಅವರ ಬಗ್ಗೆ ಅವಹೇಳನಕಾರಿ ಮಾತನಾಡಿದ್ದರು. ಬಾಯಿಗೆ ಬಂದಂತೆ ಮಾತನಾಡುವುದು. ಆಮೇಲೆ ವಿಷಾದ ವ್ಯಕ್ತಪಡಿಸುವುದು ಶೋಭೆ ತರುವಂಥದ್ದಲ್ಲ. ಹಾಗಾಗಿ ಅವರ ಈ ನಡೆಯನ್ನು ಜಿಲ್ಲಾ ಕಾಂಗ್ರೆಸ್ ಪಕ್ಷ ಉಗ್ರವಾಗಿ ಖಂಡಿಸುತ್ತದೆ ಎಂದರು.

ಮಹಾನಗರ ಪಾಲಿಕೆ ಅಧ್ಯಕ್ಷ ಮಹಮ್ಮದ್ ಗೌಸುದ್ದಿನ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಂಜಯ ಜಾಗಿರದಾರ, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಮಾಜಿ ಹಿರಿಯ ಮುಖಂಡರಾದ ಮನ್ನಾನ್ ಸೇಠ್, ಎಸ್.ಸಿ ಮೋರ್ಚಾ ಅಧ್ಯಕ್ಷ ಸಂಜು ಡಿ.ಕೆ, ಪಕ್ಷದ ಪ್ರಧಾನ ಕಾರ್ಯದರ್ಶಿಗಳಾದ ಎಮ್.ಎ ಸಮಿ, ದತ್ತಾತ್ರಿ ಮೂಲಗೆ, ವಿನೋದ ಅಪ್ಪೆ, ಜಾರ್ಜ್ ಫರ್ನಾಂಡಿಸ್ ಪತ್ರಿಕಾಗೋಷ್ಠಿಯಲ್ಲಿದ್ದರು.




# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ಹಿಂದುಳಿದ ವರ್ಗಗಳಿಗೆ ಪ್ರತಿಯೊಂದು ಪಕ್ಷದವರು ಆದ್ಯತೆ ನೀಡಬೇಕು

ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕುಗಳು ದೊರೆಯಬೇಕು ಎಂಬುದು ಸಂವಿಧಾನದ ಆಶಯ. ಆದರೆ ವಾಸ್ತವದಲ್ಲಿ ಹಿಂದುಳಿದ ವರ್ಗಗಳು, ದಲಿತರು, ಅಲ್ಪಸಂಖ್ಯಾತರು, ರೈತರು, ಕಾರ್ಮಿಕರು ಹಾಗೂ ಆರ್ಥಿಕವಾಗಿ ದುರ್ಬಲ ವರ್ಗಗಳು ಇನ್ನೂ ಸಮಾನ ಅವಕಾಶಗಳಿಂದ ವಂಚಿತರಾಗಿದ್ದಾರೆ. ಇವರ ಅಭಿವೃದ್ಧಿಯಿಲ್ಲದೆ ದೇಶದ ಸಮಗ್ರ ಪ್ರಗತಿ ಸಾಧ್ಯವಿಲ್ಲ.

ರಾಜಕೀಯ ಪಕ್ಷಗಳು ಚುನಾವಣೆಯ ಸಮಯದಲ್ಲಿ ಮಾತ್ರ ಹಿಂದುಳಿದ ವರ್ಗಗಳ ಬಗ್ಗೆ ಮಾತನಾಡದೆ, ವರ್ಷಪೂರ್ತಿ ಅವರ ಸಮಸ್ಯೆಗಳ ಪರಿಹಾರಕ್ಕೆ ಬದ್ಧವಾಗಿರಬೇಕು. ಶಿಕ್ಷಣ, ಉದ್ಯೋಗ, ಆರೋಗ್ಯ, ವಸತಿ, ಕುಡಿಯುವ ನೀರು, ಭೂಹಕ್ಕು, ಸಾಮಾಜಿಕ ನ್ಯಾಯ ಇವುಗಳ ಕಡೆ ವಿಶೇಷ ಗಮನ ನೀಡಬೇಕು. ಕೇವಲ ಭರವಸೆಗಳಲ್ಲ, ನೈಜ ಕಾರ್ಯರೂಪಕ್ಕೆ ತರಬೇಕು.

ಹಿಂದುಳಿದ ವರ್ಗಗಳ ಯುವಕರಿಗೆ ಉದ್ಯೋಗಾವಕಾಶ, ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ, ಮಹಿಳೆಯರಿಗೆ ಸುರಕ್ಷತೆ ಮತ್ತು ಸ್ವಾವಲಂಬನೆ, ರೈತರಿಗೆ ಬೆಳೆರಕ್ಷಣೆ ಹಾಗೂ ನ್ಯಾಯಯುತ ಬೆಲೆ ಒದಗಿಸುವುದು ಸರ್ಕಾರ ಮತ್ತು ರಾಜಕೀಯ ಪಕ್ಷಗಳ ಮೊದಲ ಕರ್ತವ್ಯವಾಗಬೇಕು.

ಜಾತಿ, ಮತ, ಹಣದ ಆಧಾರದ ರಾಜಕೀಯಕ್ಕಿಂತ ಜನಸೇವೆ ಮುಖ್ಯವಾಗಬೇಕು. ಪ್ರತಿಯೊಂದು ಪಕ್ಷವೂ ಸಮಾಜದ ಕೊನೆಯ ವ್ಯಕ್ತಿಯ ಅಭಿವೃದ್ಧಿಯನ್ನು ಗುರಿಯಾಗಿಸಿಕೊಂಡಾಗ ಮಾತ್ರ ನಿಜವಾದ ಪ್ರಜಾಪ್ರಭುತ್ವ ಬಲವಾಗುತ್ತದೆ.

ಹೀಗಾಗಿ ಹಿಂದುಳಿದ ವರ್ಗಗಳಿಗೆ ಆದ್ಯತೆ ನೀಡುವುದು ಕೇವಲ ರಾಜಕೀಯ ಲಾಭಕ್ಕಾಗಿ ಅಲ್ಲ, ಅದು ಸಾಮಾಜಿಕ ನ್ಯಾಯ ಮತ್ತು ರಾಷ್ಟ್ರ ನಿರ್ಮಾಣದ ಮೂಲ ಕರ್ತವ್ಯವಾಗಿದೆ. ಎಲ್ಲ ಪಕ್ಷಗಳೂ ಇದನ್ನು ಮನಗಂಡು ಕಾರ್ಯನಿರ್ವಹಿಸಬೇಕು.

# ಕಲೆ ಮನಸ್ಸನ್ನು ಹಗುರುಗೊಳಿಸುತ್ತದೆ: ಹಾರಕೂಡ ಶ್ರೀ



• **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ**

ಕಲೆಯಿಂದ ಮನುಷ್ಯನ ಮನಸ್ಸು ಹಗುರಗೊಂಡು ಆನಂದದ ಅಲೆಯಲ್ಲಿ ತೇಲಿಬರುವಂತಾಗುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಜೈ ಭವಾನಿ ಕಲೆ ಮತ್ತು ಸಾಂಸ್ಕೃತಿಕ ಮಹಿಳಾ ಸಂಘ ಹಾರಕೂಡ ತಾಂಡ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಜಿಲ್ಲಾಮಟ್ಟದ ಸಾಂಸ್ಕೃತಿಕ ಕಲಾ ಕಮ್ಮಟದ ಉದ್ಘಾಟನಾ ಸಮಾರಂಭದ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಮನುಷ್ಯನಲ್ಲಿ ಸಕ್ರೀಯವಾದ ಆಲೋಚನಾ ಶಕ್ತಿ ಮತ್ತು ಸೃಜನಶೀಲತೆ ಬೆಳೆಯಲು ಕಲೆ ಮಹತ್ವದ ಪಾತ್ರ ವಹಿಸುತ್ತದೆ.

ಶಿಲ್ಪ ಕಲೆ, ಚಿತ್ರಕಲೆ, ಸಂಗೀತ ನೃತ್ಯ, ಗಾಯನ, ವಾದ್ಯ ನುಡಿಸುವುದು ಹೀಗೆ ಅನೇಕ ಬಗೆಯ ಕಲೆಗಳು ಮನುಷ್ಯ ಜೀವನವನ್ನು ಸುಂದರಗೊಳಿಸುತ್ತವೆ.

ಈ ನಿಟ್ಟಿನಲ್ಲಿ ಹಾರಕೂಡ ತಂಡಾದ ಜೈಭವಾನಿ ಮಹಿಳಾ ಸಂಘ ಹಾಗೂ ಕನ್ನಡ ಮತ್ತು ಸಾಂಸ್ಕೃತಿ ಇಲಾಖೆಯಿಂದ ಆಯೋಜಿಸಿದ ಜಿಲ್ಲಾ ಮಟ್ಟದ ಸಂಸ್ಕೃತಿಕ ಕಲಾ ಕಮ್ಮಟ, ನಮ್ಮ ಸಂಸ್ಕೃತಿಯ ಭವ್ಯ ಚಿತ್ರಣವನ್ನು ಸಮಾಜಕ್ಕೆ ಮುಟ್ಟಿಸುವಲ್ಲಿ ಯಶಸ್ವಿ ಹೆಜ್ಜೆ ಇಡುವಂತಾಗಲಿ ಹಾಗೂ ಸರ್ವರಲ್ಲಿ ಕಲಾತ್ಮಕ ಬದುಕಿನ ಸಾಂಸ್ಕೃತಿಕ ಪ್ರಜ್ಞೆ ಮೂಡುವಂತಾಗಲಿ ಎಂದು ಶುಭ ಹಾರೈಸಿದರು.

ಕಾಡಾ ಅಧ್ಯಕ್ಷರಾದ ಬಾಬು ಹೊನ್ನ ನಾಯಕ, ಮಲ್ಲಿನಾಥ ಹಿರೇಮಠ ಹಾರಕೂಡ, ಚನ್ನವೀರ ಜಮಾದಾರ, ಧನಸಿಂಗ ರಾಠೋಡ, ಭಾರತ ಬಾಯಿ, ಬಸವರಾಜ ರಾಠೋಡ, ನಾಮದೇವ ರಾಠೋಡ, ದಿಲೀಪ ಸ್ವಾಮಿ ರಾಜೇಶ್ವರ, ಲಕ್ಷ್ಮಣ ಚೌಹಾಣ, ಕವಿತಾ ಸುನಿಲ, ವಿಜಯಲಕ್ಷ್ಮಿ ಚವ್ಹಾಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ವಿಜಯಲಕ್ಷ್ಮಿ ಚವ್ಹಾಣ ಸ್ವಾಗತಿಸಿದರು. ಕುಮಾರಿ ರಾಜಶ್ರೀ ದಿಲೀಪ ಕುಮಾರಸ್ವಾಮಿ ಪ್ರಾರ್ಥನೆ ಹಾಡಿದರು. ಕುಮಾರಿ ಶ್ರೇಯಾ ಸುನಿಲ ನಾಡಗೀತೆ ಪ್ರಸ್ತುತಪಡಿಸಿದರು. ಪ್ರೇಮಸಿಂಗ ಚವ್ಹಾಣ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಬಂಜಾರ ನೃತ್ಯ, ಬಂಜಾರ ಭಜನೆ, ತಮಟೆ ವಾದನ, ಹುಲಿಕುಣಿತ, ಮಹಿಳೆಯರಿಂದ ಡೊಳ್ಳು ಕುಣಿತ, ಕೋಲಾಟ ಪ್ರದರ್ಶನ ಮಾಡಲಾಯಿತು. ಕಾರ್ಯಕ್ರಮಕ್ಕೂ ಮೊದಲು ಬಂಜಾರ ನೃತ್ಯದೊಂದಿಗೆ ಹಾರಕೂಡ ಪೂಜ್ಯರಿಗೆ ವೇದಿಕೆಗೆ ಬರಮಾಡಿಕೊಳ್ಳಲಾಯಿತು.

# ಜ್ಞಾನ ದರ್ಶನ ಪ್ರೌಢ ಶಾಲೆಗೆ 100% ಫಲಿತಾಂಶ

**ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:**

ಪಟ್ಟಣದ ಜ್ಞಾನಮೃತ ಶಿಕ್ಷಣ ಸಂಸ್ಥೆಯ ವಿದ್ಯಾ ವಿಜ್ಞಾನ ಪ್ರಾಥಮಿಕ ಹಾಗೂ ಜ್ಞಾನ ದರ್ಶನ ಪ್ರೌಢ ಶಾಲೆಯ ಕನ್ನಡ ಮಾಧ್ಯಮ ಶಾಲೆಯು ಉತ್ತಮ ಫಲಿತಾಂಶ ನೀಡಿದೆ. 2025-26ನೇ ಸಾಲಿನ 10ನೇ ತರಗತಿಯ ಫಲಿತಾಂಶ ಪ್ರಕಟಗೊಂಡಿದ್ದು, ಜ್ಞಾನ ದರ್ಶನ ಕನ್ನಡ ಮಾಧ್ಯಮ ಶಾಲೆಯು ಶೇಕಡಾ 100% ರಷ್ಟು ಫಲಿತಾಂಶದೊಂದಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಒದಗಿಸುವ ಮೂಲಕ ಶೈಕ್ಷಣಿಕ ವರ್ಷದಲ್ಲಿ ಹತ್ತನೇ ತರಗತಿಯಲ್ಲಿ ಅತ್ಯುತ್ತಮ ಫಲಿತಾಂಶವನ್ನು ಪಡೆದುಕೊಂಡಿದೆ. ಈ ವರ್ಷ 10ನೇ ತರಗತಿಯ ಒಟ್ಟು 28 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಆಗ್ರಶ್ರೇಣಿಯಲ್ಲಿ 06 ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಿದ್ದು ವಿಶೇಷವಾಗಿದೆ. ಶಾಲೆಗೆ ರಶ್ಮಿ ತಂದೆ ಜಗದೀಶ 616(98.56%) ಪ್ರಥಮ ಸ್ಥಾನ ಪಡೆದರೆ, ಸಂಗೀತಾ ತಂದೆ ಓಂನಾಥ 596 (95.36%) ದ್ವಿತೀಯ ಸ್ಥಾನ ಪಡೆದಿದ್ದಾಳೆ, ಭಾಗ್ಯವಂತಿ ಎಸ್. 559 (89.44%) ದೀನಾ ಎಲ್. 531(84.96%) ಫಲಕನಾಜ್ ಎಂ. 526 (84.16%) ಅಭಿಷೇಕ ಬಿ. 526 (84.16%) ಚೇತನಾ ಎಸ್. 477 (76.32%) ಅಶ್ವಿನ್ ಎ. 428 (68.48%) ಅಂಕಿತರೆಡ್ಡಿ ಡಿ. 427 (68.32%) ನಾಗರೆಡ್ಡಿ ಎಸ್. 401 (64.16%) ಶ್ವೇತಾ ಕೆ. 383 (61.28%) ಗಂಗೋತ್ರಿ ಎಸ್. 368 (57.60%) ಕಾಂಚನಾ ಎನ್. 340 (54.40%) ಮಲಿಹಾ ಫಾತಿಮಾ ಎಂ. 329 (52.64%) ಶಶಾಂಕರೆಡ್ಡಿ ಎಸ್. 327 (52.32%) ವಿದ್ಯಾ ಸಾಗರ್ ಜಿ. 326 (52.16%) ದತ್ತು ಕೆ. 321 (51.36%) ಮನೋಹರ್ ಪಿ. 320 (51.20%) ಅಂಕಗಳು ಪಡೆದು ರಾಜ್ಯಕ್ಕೆ ಹತ್ತನೇ ಸ್ಥಾನ ಪಡೆಯುವುದರ ಮೂಲಕ ಜ್ಞಾನ ದರ್ಶನ ಕನ್ನಡ ಮಾಧ್ಯಮ ಶಾಲೆಗೆ ಹಾಗೂ ಪೋಷಕರಿಗೆ ಕೀರ್ತಿ ತಂದಿದ್ದಾರೆಂದು ಮುಖ್ಯ ಗುರುಗಳು ಮತ್ತು ಆಡಳಿತ ಮಂಡಳಿಯವರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷೆ ಶೈಲಜಾ ಜಿ. ಹುಡಗೆ, ಕಾರ್ಯದರ್ಶಿ ಕರುಣಾ ಧಾನಪ, ಕೋಶಾಧ್ಯಕ್ಷೆ ಪದ್ಮಾವತಿ ಧನಸಿರಿ, ಆಡಳಿತಾಧಿಕಾರಿ ಚಂದ್ರಶೇಖರ್ ಧಾನಪ, ಸಹ ಕಾರ್ಯನಿರ್ವಾಹಕ ಅಶೋಕ ಪುರಿ, ಮುಖ್ಯ ಶಿಕ್ಷಕ ಮಹಾದೇವ ಗುಜ್ಜರ್ ಸಂತಸ ಹಂಚಿಕೊಂಡಿದ್ದು, ಈ ಭಾಗದಲ್ಲಿ ಅತ್ಯುತ್ತಮ ಹಾಗೂ ಮೌಲ್ಯಯುತ ಶಿಕ್ಷಣವನ್ನು ಗ್ರಾಮೀಣ ವಿದ್ಯಾರ್ಥಿಗಳಿಗೆ ನೀಡುವ ಮೂಲಕ ಯಶಸ್ಸು ಸಿಕ್ಕಿರುವುದು ಬಹಳ ಸಂತೋಷ ನೀಡಿದೆ. ನಮ್ಮ ಶಾಲೆ ಶೇಕಡಾ 100% ರಷ್ಟು ಫಲಿತಾಂಶ ಗಳಿಸುವಲ್ಲಿ ಹಗಲಿರುಳು ಶ್ರಮಿಸಿದ ವಿದ್ಯಾರ್ಥಿಗಳಿಗೆ, ಎಲ್ಲಾ ಭೋದಕ ಮತ್ತು ಸಿಬ್ಬಂದಿ ವೃಂದದವರಿಗೆ ಈ ಮೂಲಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.





# ಶಾಂತಿನಿಕೇತನ ಪ್ರೌಢ ಶಾಲೆಗೆ ಶೇ. 91.22 % ಫಲಿತಾಂಶ







**ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ:**

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಇಲ್ಲಿನ ಶಾಂತಿನಿಕೇತನ ಪ್ರೌಢ ಶಾಲೆಗೆ 91.22 % ಫಲಿತಾಂಶ ಬಂದಿದ್ದು ಅರ್ಜುನ ರಮೇಶ 577(92.32) ಅಮನ. ರಾಜಪ್ಪಾ 565 (90.4) ಸಿದ್ದಲಿಂಗ ರಾಮಣ್ಣಾ 563(90.08) ವೈಶಾಲಿ ಮಂಜುನಾಥ 558(89.28) ಲಕ್ಷ್ಮಿಕಾಂತ ರೇವಪ್ಪಾ 552(88.32) ಅರ್ಪಿತಾ ರಾಜಕುಮಾರ 547 (87.52) ವಿನಾಯಕ ಅಶೋಕ 543 (86.88) ಗೌರಿ ವೆಂಕಟ 533 (85.28) ಸೇರಿ 8 ವಿದ್ಯಾರ್ಥಿಗಳು ಅಗ್ರಶ್ರೇಣಿಯಲ್ಲಿ 22 ಪ್ರಥಮ 22 ದ್ವಿತೀಯ ದರ್ಜೆಯಲ್ಲಿ ಪಾಸಾಗಿ. ವಿದ್ಯಾರ್ಥಿಗಳ ಸಾಧನೆಗೆ. ಸಹಾಯಕ ಆಯುಕ್ತರು ಹಾಗೂ ಶಾಂತಿನಿಕೇತನ ಶಿಕ್ಷಣ ಸಂಸ್ಥೆ ಯ ಅಧ್ಯಕ್ಷರಾಗಿರುವ ಪ್ರಕಾಶ ಕುದರಿ. ಕಾರ್ಯದರ್ಶಿಗಳಾದ ರಮೇಶ ಸುಲ್ಫಿ ಹಾಗೂ ಆಡಳಿತ ಮಂಡಳಿ ಅಧಿಕಾರಿ ವರ್ಗದವರು ಮುಖ್ಯ ಗುರುಗಳು ಮತ್ತು ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

**ಬಸವಕಲ್ಯಾಣ :-** ತಾಲೂಕಿನ ಕೋಹಿನೂರ ಗ್ರಾಮದಲ್ಲಿ ಮಹಾತ್ಮ ಬಸವೇಶ್ವರರ 9ನೇ ಜಾತ್ರಾ ಮಹೋತ್ಸವ ನಿಮಿತ್ಯ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ವಿಶ್ವಗುರು ಬಸವಣ್ಣನವರ ರಥಕ್ಕೆ ಪೂಜೆ ಸಲ್ಲಿಸಿ, ರಥೋತ್ಸವಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಪೂಜ್ಯಶ್ರೀ ಶ್ರೀ ಗೋಣಿ ರುದ್ರೇಶ್ವರ ಸ್ವಾಮಿಗಳು, ಮಲ್ಲಿನಾಥ ಹಿರೇಮಠ ಹಾರಕೂಡ, ಪ್ರಭುಶ್ರೀ ಮಾತಾಜಿ, ಶಿವಶರಣಪ್ಪ ಸಂತಾಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).



# ಉಪರಾಷ್ಟ್ರಪತಿ ರಾಧಾಕೃಷ್ಣನ್ ಬಿಜೆಪಿಯಿಂದ ಹೊರ ಬಂದಿಲ್ಲ : ಅರಳಿ ಟೀಕೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಉಪರಾಷ್ಟ್ರಪತಿ ರಾಧಾಕೃಷ್ಣನ್ ಅವರು ಖರ್ಗೆ ಅವರ ಬಗ್ಗೆ ಮಾತನಾಡುವ ಮೂಲಕ ಬಿಜೆಪಿ ಪಕ್ಷದಲ್ಲಿದ್ದಂತೆ ತೋರುತ್ತಿದೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯರಾದ ಅರವಿಂದ ಕುಮಾರ ಅರಳಿ ಟೀಕಿಸಿದರು.



ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಇತ್ತೀಚೆಗೆ ಭಾಲ್ಕಿಯಲ್ಲಿ ನಡೆದ ಅನುಭವ ಮಂಟಪದ ಅಧ್ಯಕ್ಷರಾದ ಪೂಜ್ಯ ಡಾ. ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವದಲ್ಲಿ ಭಾಗಿಯಾದ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರ ಬಗ್ಗೆ ಮಾತನಾಡುವ ಮೂಲಕ ತಾನೋರ್ವ ಬಿಜೆಪಿಯಲ್ಲಿದ್ದಂತೆ ತೋರಿಸಿಕೊಂಡಿರುವರು. ದೇಶದ ರಾಷ್ಟ್ರಪತಿ, ಉಪರಾಷ್ಟ್ರಪತಿ ಹಾಗೂ ರಾಜ್ಯಪಾಲರು ಯಾವುದೇ ಪಕ್ಷದ ಪರವಾಗಿ ಮಾತನಾಡಬಾರದು ಎಂದರು. ಮಹಾನಗರ ಪಾಲಿಕೆ ಸದಸ್ಯ ಶಶಿಧರ ಹೊಸಳ್ಳಿ ಅವರ ಬಗ್ಗೆ ಮಾತನಾಡಿದ ಅರಳಿ, ಡಾ. ಖರ್ಗೆಯವರ ಬಗ್ಗೆ ಅವಹೇಳನಕಾರಿ ಮಾತನಾಡಿದ ಹೊಸಳ್ಳಿ ವಿರುದ್ಧ ರಾಜ್ಯ ಸರ್ಕಾರ ಸುಮೋಟೊ ಕೇಸ್ ದಾಖಲಿಸಬೇಕು. ಇಲ್ಲ ಎಂದರೆ ನಮ್ಮ ಪಕ್ಷದ ಯಾರೊಬ್ಬರು ಕಾರ್ಯಕರ್ತರು ಅವರ ವಿರುದ್ಧ ಠಾಣೆಯಲ್ಲಿ ಕೇಸ್ ದಾಖಲಿಸಬೇಕೆಂದು ಅರಳಿ ಒತ್ತಾಯಿಸಿದರು. ಮಾಜಿ ವಿಧಾನ ಪರಿಷತ್ ಸದಸ್ಯರಾದ ಕೆ. ಪುಂಡಲಿಕರಾವ, ಮಹಾನಗರ ಪಾಲಿಕೆ ಅಧ್ಯಕ್ಷ ಮಹಮ್ಮದ್ ಗೌಸೋದ್ದಿನ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಂಜಯ ಜಾಗಿರದಾರ, ಮನ್ನಾನ್ ಸೇಠ್, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಮಹಾನಗರ ಪಾಲಿಕೆ ಸದಸ್ಯ ಪ್ರಶಾಂತ ದೊಡ್ಡಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ ಪತ್ರಿಕಾಗೋಷ್ಠಿಯಲ್ಲಿದ್ದರು.

# ಕುಡಿಯುವ ನೀರಿನ ಬಗ್ಗೆ ಬೇಟಿ ನೀಡಿ ಪರಿಶೀಲನೆ ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ: - ತಾಲ್ಲೂಕಿನ ಅಲಗೂಡ ಹಾಗೂ ಚಿಟ್ಟಾ ತಾಂಡ ಗ್ರಾಮಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ. ಗಿರೀಶ ಬದೋಲೆ ರವರು ಭೇಟಿನೀಡಿ ಕುಡಿಯುವ ನೀರಿನ ಬಗ್ಗೆ ಪರಿಶೀಲನೆ ನಡೆಸಿದರು. ಗ್ರಾಮಕ್ಕೆ ಭೇಟಿನೀಡಿದ ಅವರು ನೀರಿನ ಮೂಲ ಮತ್ತು ಖಾಸಗಿ ವ್ಯಕ್ತಗಳಿಂದ ಬಾಡಿಗೆಗೆ ಪಡೆದುಕೊಂಡು ಕೊಳವೆ ಬಾವಿ ಮತ್ತು ಬಾವಿಗಳು ಪರಿಶೀಲಿಸಿದರು. ನಂತರ ಅವಶ್ಯಕತೆ ಇದ್ದಕಡೆ ನೀರು ಸರಬರಾಜು ಮಾಡಿ ಹಾಗೂ ನೀರು ಎಲ್ಲಿಯು ಪೋಲ ಆಗದಂತೆ ನೋಡಿಕೊಳ್ಳಬೇಕು ಮತ್ತು ಯಾವುದೇ ಕಾರಣಕ್ಕೂ ಆಲಗೂಡ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಗ್ರಾಮಸ್ಥರಿಗೆ ನೀರಿನ ಸಮಸ್ಯೆ ಆಗದಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ತಾ.ಪಂ.ಕಾ.ನಿ.ಅ.ರಮೇಶ ಸುಲ್ಪಿ ಸರ್, ತಾ.ಪಂ.ಸ.ನಿ.(ನರೇಗಾ) ಮಹ್ಮದ್ ಸಲೀಂ ಸರ್, ಎಇಇ ಶಿವರಾಜ ಪಲ್ಲೇರಿ, ಪಿಡಿಒ ಸುನೋಚನಾ ಬಂಡೆ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಎಐಸಿಸಿ ಅಧ್ಯಕ್ಷ ಖರ್ಗೆ ಬಗ್ಗೆ ಬಳಸಿದ ಪದಕ್ಕೆ ವಿಷಾದ

ಮಲ್ಲಮ್ಮ ನುಡಿ ವಾರ್ತೆ

ಬೀದರ್ ಏ 27: ಕೆಲವು ದಿವಸಗಳ ಹಿಂದೆ ರಾಷ್ಟ್ರದ ಪ್ರಗತಿಪರ ಚಿಂತಕರು, ಅಭಿವೃದ್ಧಿಯೇ ತಮ್ಮ ಉಸಿರಾಗಿರಿಸಿಕೊಂಡ ದೇಶದ ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರಾದ ಡಾ ಮಲ್ಲಿಕಾರ್ಜುನ ಖರ್ಗೆ ಅವರು ಕೆಲವೊಂದು ಪದ ಬಳಿಸಿರುವ ಹಿನ್ನಲೆಯಲ್ಲಿ ಬಿಜೆಪಿ ಯುವ ಮೋರ್ಚಾದಿಂದ ಬೀದರ ನಗರದಲ್ಲಿ ಪ್ರತಿಭಟನೆ ಮಾಡುವ ಸಂಧರ್ಭದಲ್ಲಿ ಆವೇಶಭರಿತವಾಗಿ



ಹೋರಾಟದ ಮುಂಚೂಣಿಯ ಸನ್ನಿವೇಶದಲ್ಲಿ ನಾನು ಕೆಲವು ಪದಗಳು ಬಳಸಿರುವುದು ತುಂಬಾ ವಿಷಾದಕರ ಸಂಗತಿಯಾಗಿದೆ ಎಂದು ಬಿಜೆಪಿ ನಗರ ಮಂಡಲದ ಅಧ್ಯಕ್ಷರು ಹಾಗೂ ಮಹಾನಗರ ಪಾಲಿಕೆ ಸದಸ್ಯರಾದ ಶಶಿಧರ ಹೊಸಳ್ಳಿ ಹೇಳಿರುವರು.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಡಾ. ಖರ್ಗೆ ಅವರಲ್ಲಿ ಈ ವಿಚಾರವಾಗಿ ಕ್ಷೆ ಮೆ ಕೋರಿ, ಈ ವಿಷಯವನ್ನು ಇಲ್ಲಿಗೆ ಮುಕ್ತಾಯಗೊಳಿಸಲು ಕಾಂಗ್ರೆಸ್ ಮುಖಂಡರಲ್ಲಿ ಮನವಿ ಮಾಡಿಕೊಳ್ಳುವುದಾಗಿ ಹೊಸಳ್ಳಿ ತಿಳಿಸಿದ್ದಾರೆ.

ಕರ್ನಾಟಕ ಅರಣ್ಯ ಇಲಾಖೆ
**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಅರಣ್ಯ ತರಬೇತಿ ಕೇಂದ್ರ ನೌಬಾದ, ಬೀದರ**
ಮಿಂಚಂಚೆ ವಿಳಾಸ: acffgtcbidar@yahoo.in

ಸಂಖ್ಯೆ: ಅ.ತ.ಕೇ/ನೌ.ಬೀ/ಹೊರಗುತ್ತಿಗೆ/ಇ-ಟೆಂಡರ್/ಸಿಆರ್- /2026-27 ದಿನಾಂಕ:24 /04/2026

**ಅಲ್ಪಾವಧಿ ಸಂಕ್ಷಿಪ್ತ ದ್ವಿಲಕೋಟೆ ಟೆಂಡರ್ ಪ್ರಕಟಣೆ (ಇ-ಟೆಂಡರ್ ಮೂಲಕ)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 2000ರ ಅನ್ವಯ ಈ ಮೂಲಕ ಸಾರ್ವಜನಿಕರ ಅವಗಾಹನೆಗೆ ತಿಳಿಯಪಡಿಸುವುದೇನೆಂದರೆ ಈ ಕೆಳಕಂಡ ಅನುಸೂಚಿಯಲ್ಲಿ ನಮೂದಿಸಿರುವಂತೆ 2026-27ನೇ ಸಾಲಿಗೆ ಬೀದರ ಅರಣ್ಯ ತರಬೇತಿ ಕೇಂದ್ರ ಕಛೇರಿಗಳಿಗೆ ಅಗತ್ಯವಿರುವ ಗಣಕಯಂತ್ರ ನಿರ್ವಾಹಕರು, ವಾಹನ ಚಾಲಕರು, ರಾತ್ರಿ ಕಾವಲುಗಾರ ಹಾಗೂ ಕಸಗೂಡಿಸುವವರ ಸೇವೆಯನ್ನು ಹೊರಗುತ್ತಿಗೆ (Outsource) ಮೂಲಕ ಪಡೆಯಲು ಇ-ಟೆಂಡರ್ ಆಹ್ವಾನಿಸಲಾಗಿದ್ದು, **ರೂ. 17.13 ಲಕ್ಷಗಳಲ್ಲಿ** ಇ-ಟೆಂಡರ್ ವೆಬ್ ಸೈಟ್ ಸಂಖ್ಯೆ:http://kppp.karnataka.gov.in ರ ಮೂಲಕ ಟೆಂಡರ್ ದಾಖಲಿಸಲು **ದಿನಾಂಕ: 24/04/2026 ರಿಂದ ದಿನಾಂಕ: 02/05/2026 ಅಪರಹ್ನ 04:00 ಗಂಟೆಯ ವರೆಗೆ ಆಹ್ವಾನಿಸಲಾಗಿದೆ.** ತಾಂತ್ರಿಕ ಬಿಡ್‌ಗಳನ್ನು **ದಿ:04/05/2026ರಂದು ಅಪರಹ್ನ 04:00ರ ನಂತರ ತೆರೆಯಲಾಗುವುದು.** ತಾಂತ್ರಿಕ ಬಿಡ್‌ನಲ್ಲಿ ಯಶಸ್ವಿಯಾದ ಟೆಂಡರ್‌ಗಳ ಆರ್ಥಿಕ ಬಿಡ್‌ಗಳನ್ನು ದಿ:05/05/2026 ರಂದು ಅಪರಹ್ನ 04:00ರ ನಂತರ ತೆರೆಯಲಾಗುವುದು.
ಹೆಚ್ಚಿನ ವಿವರಗಳಿಗಾಗಿ ಕಛೇರಿ ಕೆಲಸದ ದಿನಗಳಂದು ಕಛೇರಿ ಸಮಯದಲ್ಲಿ ಸಂಪರ್ಕಿಸಿ ಪಡೆಯಬಹುದು ಅಥವಾ ದೂರವಾಣಿ ಸಂಖ್ಯೆ: 9481990307 ಕ್ಕೆ ಕರೆ ಮಾಡಿ ಪಡೆಯಬಹುದು.

**ಸಹಿ/- ಪ್ರಾಂಶುಪಾಲರು**
**ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು,**
**ಅರಣ್ಯ ತರಬೇತಿ ಕೇಂದ್ರ ನೌಬಾದ, ಬೀದರ**

ವಾ.ಸಾ.ಸಂ.ಇ/ಬೀದರ/22/ಕೆ.ಎಸ್.ಎಂ.ಸಿ.&ಎ/2026-27

# ಅವರಾದ ಗ್ರಾಮದಲ್ಲಿ ನಿಜಶರಣ ಶ್ರೀ ಅಂಬಿಗರ ಚೌಡಯ್ಯನವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ಜಯಂತ್ಯುತ್ಸವ



**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜಿಲ್ಲೆಯ ಜೇವರ್ಗಿ ತಾಲೂಕಿನ ಅವರಾದ ಗ್ರಾಮದಲ್ಲಿ ನಿಜಶರಣ ಶ್ರೀ ಅಂಬಿಗರ ಚೌಡಯ್ಯನವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ಜಯಂತೋತ್ಸವ ಕಾರ್ಯಕ್ರಮವನ್ನು ಏಪ್ರಿಲ್ 26ರಂದು (ರವಿವಾರ) ಅದ್ದೂರಿಯಾಗಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಂಗವಾಗಿ ಬೆಳಗ್ಗೆ 10 ಗಂಟೆಗೆ ಜೇವರ್ಗಿ ಶ್ರೀರಂಗಪಟ್ಟಣ ಮುಖ್ಯರಸ್ತೆಯ ಶ್ರೀ ವಿಠ್ಠಲ್ ಹೇರೂರ್ ವೃತ್ತದಿಂದ ಅವರಾದ ಗ್ರಾಮದ ಕೋಲಿ ಭವನದವರೆಗೆ ನಿಜಶರಣ ಅಂಬಿಗರ ಚೌಡಯ್ಯನವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಗೆ ಶ್ರೀಮತಿ ಶೋಭಾ ಬಾಣಿ ಹಾಗೂ ಶ್ರೀ ಶಿವಾಜಿ ಮೆಟಗಾರ್ ಚಾಲನೆ ನೀಡಲಿದ್ದಾರೆ.

ನಂತರ ಬೆಳಗ್ಗೆ 11 ಗಂಟೆಗೆ ಪರಮ ಪೂಜ್ಯ ಶ್ರೀ ಕೊಟ್ರೇಶ್ವರ ಶಿವಯೋಗಿಗಳು ಅವರ ಸಾನ್ನಿಧ್ಯದಲ್ಲಿ ಮೂರ್ತಿ ಪ್ರತಿಷ್ಠಾಪನೆ ನೆರವೇರಲಿದೆ. ಮಧ್ಯಾಹ್ನ 12 ಗಂಟೆಗೆ ನಡೆಯುವ ವೇದಿಕೆ ಕಾರ್ಯಕ್ರಮಕ್ಕೆ ಶ್ರೀ ವಾಸುದೇವ ಶಿವಾಚಾರ್ಯರು ಹಾಗೂ ಶ್ರೀ ವೇದಮೂರ್ತಿ ಶಿವಯ್ಯ ಸ್ವಾಮಿ ಹಿರೇಮಠ ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮವನ್ನು ಜೇವರ್ಗಿ ಶಾಸಕ ಡಾ. ಅಜಯ್ ಧರ್ಮಸಿಂಗ್ ಉದ್ಘಾಟಿಸಲಿದ್ದು, ವಿಧಾನ ಪರಿಷತ್ ಸದಸ್ಯ ಶ್ರೀ ತಿಪ್ಪಣ್ಣಪ್ಪ ಕಮಕನೂರ ಜ್ಯೋತಿ ಬೆಳಗಿಸಲಿದ್ದಾರೆ. ಇದೇ ವೇಳೆ ದೊಡ್ಡಪ್ಪಗೌಡ ಪಾಟೀಲ, ಶಿವರಾಜ ಪಾಟೀಲ, ಡಾ. ಮಲ್ಲಿಕಾರ್ಜುನ್ ಮುಕ್ಕಾ, ಶಿವಶರಣಪ್ಪ ಕೋಬಾಳ, ವಸಂತ ನರಿಬೋಳ, ಶಂಕರ್ ಕಟ್ಟಿಸಂಗಾವಿ, ಶರಣಬಸಪ್ಪ ದೊಡ್ಮನಿ, ಶ್ರೀಮಂತ ಮಾವನೂರ ಸೇರಿದಂತೆ ಹಲವು ರಾಜಕೀಯ ಮುಖಂಡರು, ಹೋರಾಟಗಾರರು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ಧ್ವಜಾರೋಹಣವನ್ನು ತಾಲೂಕು ಕೋಲಿ ಸಮಾಜದ ಹಿರಿಯ ಮುಖಂಡರು ನೆರವೇರಿಸಲಿದ್ದು, ಕಾರ್ಯಕ್ರಮದ ನೇತೃತ್ವವನ್ನು ಶ್ರೀ ಶಿವಲಿಂಗಪ್ಪ ಕಿನ್ನೂರ ವಹಿಸಲಿದ್ದಾರೆ.

ಗ್ರಾಮದ ಸಮಸ್ತ ನಾಗರಿಕರು ಹಾಗೂ ಕೋಲಿ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಆಯೋಜಕರು ಮನವಿ ಮಾಡಿದ್ದಾರೆ ಎಂದು ಗ್ರಾಮ ಘಟಕದ ಅಧ್ಯಕ್ಷ ವಿಶ್ವಾರಾಧ್ಯ ತಳವಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರಿಗಳು ಗೈರು ಹಾಜರ ಸಾರ್ವಜನಿಕರಿಗೆ ತೊಂದರೆ



• **ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು**

ತಾಲ್ಲೂಕಿನ ಲೋಕೋಪಯೋಗಿ ಇಲಾಖೆ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕಛೇರಿಯಲ್ಲಿ ಅಧಿಕಾರಿಗಳ ಗೈರುಹಾಜರಿ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ.

ಕಛೇರಿಗೆ ವಿವಿಧ ಕಾಮಗಾರಿಗಳ ವಿಚಾರವಾಗಿ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕಾಗಿ ಭೇಟಿ ನೀಡುವ ಜನರು ಅಧಿಕಾರಿಗಳು ಲಭ್ಯವಿಲ್ಲದೇ ನಿರಾಶರಾಗಿ ಹಿಂದಿರುಗಬೇಕಾದ ಪರಿಸ್ಥಿತಿ ಉಂಟಾಗಿದೆ. ಕಛೇರಿ ವೇಳೆಯಲ್ಲಿಯೇ ಅಧಿಕಾರಿಗಳು ಗೈರಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಸ್ಥಳೀಯರು ಹಾಗೂ ಗುತ್ತಿಗೆದಾರರು ಹೇಳುವಂತೆ, ರಸ್ತೆ, ಸೇತುವೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಮಾಹಿತಿ ಪಡೆಯಲು ಮತ್ತು ದೂರು ಸಲ್ಲಿಸಲು ಕಛೇರಿಗೆ ಭೇಟಿ ನೀಡಿದಾಗ ಸರಿಯಾದ ಪ್ರತಿಕ್ರಿಯೆ ಸಿಗುತ್ತಿಲ್ಲ. ಇದರಿಂದ ಕಾಮಗಾರಿಗಳ ಪ್ರಗತಿ ಕುಂಠಿತವಾಗುತ್ತಿದೆ ಎಂಬ ಆತಂಕ ವ್ಯಕ್ತವಾಗಿದೆ.

ಸಂಬಂಧಿತ ಅಧಿಕಾರಿಗಳು ಕಛೇರಿಯಲ್ಲಿ ನಿಯಮಿತವಾಗಿ ಹಾಜರಿದ್ದು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ನಾಗರಿಕರು ಆಗ್ರಹಿಸಿದ್ದಾರೆ. ಮೇಲಧಿಕಾರಿಗಳು ಕೂಡಲೇ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂಬ ಒತ್ತಾಯ ಹೆಚ್ಚಾಗಿದೆ.

# ಬೊಮ್ಮಗುಡ್ಡ: ಸರ್ಕಾರಿ ಪ್ರೌಢಶಾಲೆಗೆ ಶೇ.97.67%

**ಮಲ್ಲಮ್ಮ ನುಡಿ ವಾರ್ತೆ ಹುಣಸಗಿ:**

ತಾಲೂಕಿನ ಬೊಮ್ಮಗುಡ್ಡ ಸರಕಾರಿ ಪ್ರೌಢಶಾಲೆಗೆ ಈ ಬಾರಿ ಫಲಿತಾಂಶ ಬಂದಿದ್ದು, ಕು.ಕಾವೇರಿ ಅಮರಗುಂಡ ಅಗ್ನಿ ಶೇ.93.60% ಪ್ರತಿಶತ ಅಂಕ ಪಡೆದು ಪ್ರಥಮ, ಕು.ಪ್ರಭು ಹಣಂತ್ರಾಯ ಅಗ್ನಿ 93.44% ಪ್ರತಿಶತ ಅಂಕದೊಂದಿಗೆ ದ್ವಿತೀಯ, ಕು.ಜಗದೇವಿ ಚಂದ್ರಣ್ಣ ಗುಳಬಾಳ ಮತ್ತು ಕು.ಶಾಂತಮ್ಮ ಬಸಲಿಂಗಪ್ಪ ಗುಳಬಾಳ 90.40% ಪ್ರತಿಶತ ಅಂಕ ಪಡೆದು ತೃತೀಯ ಸ್ಥಾನದೊಂದಿಗೆ ಉತ್ತೀರ್ಣರಾಗಿದ್ದು, ಸದರಿ ಶಾಲೆಯಿಂದ ಪರೀಕ್ಷೆ ಬರೆದ 43 ವಿದ್ಯಾರ್ಥಿಗಳಲ್ಲಿ 42ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶಾಲಾ ಫಲಿತಾಂಶ 97.67% ಪ್ರತಿಶತ ಆಗಿದ್ದು, ವಿದ್ಯಾರ್ಥಿಗಳ ಸಾಧನೆಗೆ ಎಸ್.ಡಿ.ಎಮ್.ಸಿ. ಅಧ್ಯಕ್ಷರು, ಉಪಾಧ್ಯಕ್ಷರು, ಊರಿನ ಪ್ರಮುಖರು, ಮುಖ್ಯಗುರುಗಳು ಹಾಗೂ ಶಾಲಾ ಶಿಕ್ಷಕವೃಂದ ಅಭಿನಂದಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೆಂಗಳಿ ಸರಕಾರಿ ಪ್ರೌಢಶಾಲೆಗೆ ಶೇ.90 ಫಲಿತಾಂಶ



**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಜಿಲ್ಲೆಯ ಚಿತ್ತಾಪುರ ತಾಲೂಕಿನ ತೆಂಗಳಿ ಸರಕಾರಿ ಪ್ರೌಢಶಾಲೆಯು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.90 ಫಲಿತಾಂಶ ದಾಖಲಿಸಿ ಗಮನ ಸೆಳೆದಿದೆ. ಪರೀಕ್ಷೆಗೆ ಹಾಜರಾದ 49 ವಿದ್ಯಾರ್ಥಿಗಳ ಪೈಕಿ 43 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶಾಲೆಯ ಶೈಕ್ಷಣಿಕ ಸಾಧನೆಯನ್ನು ಮತ್ತಷ್ಟು ಮೆರೆದಿದ್ದಾರೆ. ವಿದ್ಯಾರ್ಥಿಗಳಲ್ಲಿ ಭಾಗ್ಯಶ್ರೀ 544 ಅಂಕಗಳು (87%) ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಮಹೇಶ್ ಹಾಗೂ ಪ್ರಿಯಾ ತಲಾ 518 ಅಂಕಗಳು (83%) ಪಡೆದು ಉತ್ತಮ ಸಾಧನೆ ತೋರಿದ್ದಾರೆ. ಜೊತೆಗೆ ನಿಖಿಲ್ ಕೂಡ 83 ಶೇಕಡಾ ಅಂಕಗಳನ್ನು ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಮುಖ್ಯ ಶಿಕ್ಷಕಿ ಸೇವಂತಾ ಚವ್ಹಾಣ ಅಭಿನಂದನೆ ಸಲ್ಲಿಸಿದ್ದು, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮದ ಮುಖಂಡರು ಸಂತಸ ವ್ಯಕ್ತಪಡಿಸಿದ್ದಾರೆ. ಶಿಕ್ಷಕರ ಪರಿಶ್ರಮ, ವಿದ್ಯಾರ್ಥಿಗಳ ನಿರಂತರ ಶ್ರಮ ಹಾಗೂ ಪೋಷಕರ ಸಹಕಾರದಿಂದ ಈ ಉತ್ತಮ ಫಲಿತಾಂಶ ಸಾಧ್ಯವಾಗಿದೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

# ಮೇ 10ರಂದು ಸಿಎಂ ಆಗಮನ: ಜಿ.ಹರೀಶ್ ಸ್ಥಳ ಪರಿಶೀಲನೆ




**ಮಲ್ಲಮ್ಮ ನುಡಿ ವಾರ್ತೆ ಮುದಗಲ್**

ಮೆ.10ರಂದು ರಾಜ್ಯದ ಮುಖ್ಯ ಮಂತ್ರಿ ಸಿದ್ದರಾಮಯ್ಯ ಮದುವೆ ಕಾರ್ಯಕ್ರಮಕ್ಕೆ ಆಗಮಿಸುವ ನಿಮಿತ್ಯ, ಪೋಲಿಸ ಇಲಾಖೆಯಿಂದ ಶಾಂತಿ–ಸುವ್ಯವಸ್ಥೆ, ಭದ್ರತೆ, ನೀಡುವ ಉದ್ದೇಶದಿಂದ ಸಪ್ತಗಿರಿ ನಿವಾಸದ ಮದುವೆ ದಿಬ್ಬಣ ಸ್ಥಳ, ಎಲಿಪ್ಯಾಡ್ ನಿಲುಗಡೆ ಸ್ಥಳ ಸೇರಿದಂತೆ ವಿವಿಧ ಸ್ಥಳಗಳನ್ನು ಶನಿವಾರ ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್ ಸ್ಥಳ ಪರಿಶೀಲನೆ ಮಾಡಿದರು.

ಮಾಜಿ ಶಾಸಕ, ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಡಿ.ಎಸ್ ಹೂಲಗೇರಿಯವರ ಸುಪುತ್ರಿಯ ಮದುವೆ ಮುದ್ಗಲ್ ಪಟ್ಟಣದ ನಿವಾಸದಲ್ಲಿ ಜರುಗುತ್ತದೆ. ಪೋಲಿಸ ಇಲಾಖೆಯಿಂದ ಸಾಮಾನ್ಯವಾಗಿ ಶಾಂತಿ–ಸುವ್ಯವಸ್ಥೆ, ಭದ್ರತೆ, ಟ್ರಾಫಿಕ್ ನಿರ್ವಹಣೆ ಕಾಪಾಡುವ ನಿಟ್ಟಿನಲ್ಲ ಎಲಿಫ್ಯಾಡ್ ನಿಲುಗಡೆ ಸ್ಥಳ, ಮದುವೆ ಮಂಟಪ, ಪಾರ್ಕಿಂಗ್ ಸ್ಥಳ, ಸಾರ್ವಜನಿಕರ ಊಟ ಮಾಡುವ ಸ್ಥಳ ಸೇರಿದಂತೆ ವಿವಿಧ ಸ್ಥಳಗಳನ್ನು ಜಿ. ಹರೀಶ (ಖಕ) ಪರಿಶೀಲನೆ ಮಾಡಿದರು. ಡಿವೈಎಸ್ಪಿ ದತ್ತಾತ್ರೇ ಕಾರ್ನಾಡ್, ಪಿಎಸ್ ಐ ವೆಂಕಟೇಶ ಮಾಡಿಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಶಂಕರಗೌಡ ಪಾಟೀಲ್, ತಮ್ಮಣ್ಣ ಗುತ್ತೇದಾರ, ಅರುಣ ಕುಮಾರ್, ಶಾಲಂ ಸಿಂಧನೂರ, ಕರಿ ಬಸವನಗೌಡ, ಸತೀಶ್ ಭೋವಿ, ರಾಘವೇಂದ್ರ ಕುದುರಿ, ಕೃಷ್ಣ ಚಲವಾದಿ, ನ್ಯಾಮತ್ ಖಾದ್ರಿ, ಹೆಚ್ ಸಿ ಅಮರೇಶ ಇದ್ದರು.

# ಗೋವಂಶ ರಕ್ಷಣೆಗೆ ಕಠಿಣ ಕಾನೂನು ಕ್ರಮಕ್ಕೆ ಆಗ್ರಹಿಸಿ: ಮನವಿ




• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ:**

ಗೋವಂಶ ಸಂರಕ್ಷಣೆ ಹಾಗೂ ಗೋವಧೆ ನಿಷೇಧಕ್ಕೆ ಕಠಿಣ ಕಾನೂನು ತರಬೇಕು ಎಂದು ಆಗ್ರಹಿಸಿ ಸೋಮವಾರ ಹುಣಸಗಿ ತಹಶೀಲ್ದಾರರ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು. ರಾಷ್ಟ್ರಪತಿ, ಪ್ರಧಾನಮಂತ್ರಿ, ರಾಜ್ಯಪಾಲರು ಹಾಗೂ ಮುಖ್ಯಮಂತ್ರಿಗಳಿಗೆ ಉದ್ದೇಶಿಸಿದ ಮನವಿ ಪತ್ರವನ್ನು ತಹಶೀಲ್ದಾರರ ಪರವಾಗಿ ಶಿರೆಸ್ತೇದಾರ ರಂಗಪ್ಪನಾಯಕ ದೂದೆಕೊಂಡ ಅವರಿಗೆ ಸಲ್ಲಿಸಲಾಯಿತು. ಸಾಮಾಜಿಕ ಕಾರ್ಯಕರ್ತ ಬಸವರಾಜ್ ಮೇಲಿನಮನಿ ಮಾತನಾಡಿ, ದೇಶಾದ್ಯಂತ ನಡೆಯುತ್ತಿರುವ ಗೋ ಸಮ್ಮಾನ ಅಭಿಯಾನದ ಭಾಗವಾಗಿ ಈ ಮನವಿ ಸಲ್ಲಿಸಲಾಗಿದೆ ಎಂದರು. ಗ್ರಾಮೀಣ ಜೀವನ ಮತ್ತು ಕೃಷಿಯಲ್ಲಿ ಗೋವಿನ ಮಹತ್ವವನ್ನು ಉಳಿಸಬೇಕೆಂದು ಹೇಳಿದರು. ಗೋಹತ್ಯೆ ಸಂಪೂರ್ಣ ನಿಷೇಧಕ್ಕೆ ಕಾನೂನು ತಿದ್ದುಪಡಿ ಮಾಡಬೇಕು. ದೇಶಿ ಗೋವಂಶವನ್ನು ರಾಷ್ಟ್ರಮಾತೆ ಎಂದು ಘೋಷಿಸಬೇಕು ಎಂದು ಅವರು ಒತ್ತಾಯಿಸಿದರು. ಜೊತೆಗೆ ಗೋ ಕಳ್ಳಸಾಗಣೆ ಮತ್ತು ಹತ್ಯೆಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದರು. ಈ ಸಂದರ್ಭದಲ್ಲಿ ಬಸವರಾಜ್ ಜಿ. ಸಜ್ಜನ್, ಶರಣಗೌಡ ಗೆಣ್ಣೂರ್, ಅಮರೇಶ ವೈಲಿ, ಬಾಲರಾಜ್ ಕುಪ್ಪಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿಶ್ವ ಕಾರ್ಮಿಕರ ದಿನಾಚರಣೆ ಕರಪತ್ರ ಬಿಡುಗಡೆ: ಸಂಜುಕುಮಾರ ಸಿಂಧೆ



**ಮಲ್ಲಮ್ಮ ನುಡಿ ವಾರ್ತೆ ಬೀದರಃ**

ಬೀದರ ನಗರದ ಡಾ, ಬಿ ಆರ್ ಅಂಬೇಡ್ಕರ ವೃತ್ತದ ಹತ್ತಿರ ಇರುವ ಕರ್ನಾಟಕ ಸಾಂಸ್ಕೃತಿಕ ಸಭಾಂಗಣದಲ್ಲಿ ಮೇ 1 ರಂದು ಬೆಳಗ್ಗೆ 10–30 ಗಂಟೆಯಿಂದ ಕರುನಾಡು ಕಟ್ಟಡ ಇತರೆ ನಿರ್ಮಾಣ ಕಾರ್ಮಿಕರ ಹಾಗೂ ಗಿಲಾವ ಕಾರ್ಮಿಕರ ಸಂಘ ಬೀದರ ವತಿಯಿಂದ ನಡೆಯಲಿರುವ ವಿಶ್ವಕಾರ್ಮಿಕರ ದಿನಾಚರಣೆ ಹಾಗೂ ಹಿರಿಯ ಕಾರ್ಮಿಕರಿಗೆ ಈ ವರ್ಷ ಎಸ್ ಎಸ್ ಎಲ್ ಸಿ ಮತ್ತು ಪಿ ಯು ಸಿ ಪರೀಕ್ಷೆಯಲ್ಲಿ ಆಗ್ರಶ್ರೇಣಿಯಲ್ಲಿ ಪಾಸಾಗಿರುವ ಕಾರ್ಮಿಕರ ಮಕ್ಕಳಿಗೆ ಗೌರವ ಸನ್ಮಾನ ಹಾಗೂ ಕಾರ್ಮಿಕರ ಸಾಹಿತ್ಯ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕುರಿತು ಇಂದು 27–4–2026 ರಂದು ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ ವೃತ್ತದಲ್ಲಿ ಕಾರ್ಯಕ್ರಮದ ಕರಪತ್ರಗಳನ್ನು ಬಿಡುಗಡೆ ಮಾಡಿಲಾಯಿತು. ಕಾಯಕವೇ ಕೈಲಾಸವೆಂದು ದುಡಿಮೆಯಲ್ಲಿ ಜೀವನ ನಡೆಸುವ ಕಾರ್ಮಿಕರ ಜೀವನಕ್ಕೆ ಎಂಟು ಗಂಟೆ ದುಡಿಮೆ ದುಡಿಮೆಗೆ ತಕ್ಕವೇತನ ವಾರದ ರಜೆ ಹಾಗೂ ಸರ್ಕಾರದಿಂದ ವಿವಿಧ ಯೋಜನೆಗಳು, ಜಾರಿಗೆ ಇರುವುದರಿಂದ ಕಾರ್ಮಿಕ ಮಕ್ಕಳು ಉನ್ನತ ಶಿಕ್ಷಣ ಮತ್ತು ಉನ್ನತ ಹುದ್ದೆಯನ್ನು ಪಡೆದುಕೊಳ್ಳುತ್ತಿದ್ದಾರೆ. ವಯೋವೃದ್ಧ ಕಾರ್ಮಿಕರಿಗೆ ಪಿಂಚಣಿ ಹಾಗೂ ಕಾರ್ಮಿಕರಿಗೆ ಮನೆ ಕಟ್ಟಿಕೊಳ್ಳಲು ಸಹಾಯಧನ ಸರ್ಕಾರ ನೀಡುತ್ತಿದೆ. ಕಾರ್ಮಿಕರು ತಮ್ಮ ಸಭೆ ಸಮಾರಂಗಳನ್ನು ಮಾಡಿಕೊಳ್ಳಬೇಕ್ಕಾದರೆ ಜಿಲ್ಲೆಗೊಂದು ಜಿಲ್ಲೆಯ ಎಲ್ಲಾ ತಾಲ್ಲೂಕಿಗೊಂಡು ಕಾರ್ಮಿಕರ ಸಾಂಸ್ಕೃತಿಕ ಭವನ ಅವಶ್ಯವಾಗಿದೆ. ಆ ನಿಟ್ಟಿನಲ್ಲಿ ಕಾರ್ಮಿರ ಕಲ್ಯಾಣ ಮಂಟಪಗಳನ್ನು ನಿರ್ಮಾಣ ಮಾಡಲು ಕಾರ್ಮಿಕ ಸಂಘದ ಮೂಲಕ ಕಾರ್ಯಕ್ರಮವನ್ನು ಮಾಡಿ ರಾಜ್ಯ ಮತ್ತು ಕೇಂದ್ರ ಸರ್ಕಾರ ಮೇಲೆ ಒತ್ತಡವನ್ನು ಹಾಕಿ ಕಾರ್ಮಿಕರ ಕಲ್ಯಾಣ ಮಂಟಪವನ್ನು ನಿರ್ಮಾಣ ಮಾಡಿಕೊಳ್ಳಬೇಕ್ಕಾಗಿದೆ. ಆ ನಿಟ್ಟಿನಲ್ಲಿ ಜಿಲ್ಲೆಯಲ್ಲಿರುವ ಎಲ್ಲಾ ನಮ್ಮ ಕಾರ್ಮಿಕ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಮಿಕರಮದಲ್ಲಿ ಭಾಗವಹಿಸಲು ಪತ್ರಿಕಾ ಪ್ರಕಟಣೆ ಮೂಲಕ ಕರುನಾಡು ಕಟ್ಟಡ ಇತರ ನಿರ್ಮಾಣ ಕಾರ್ಮಿಕರ ಹಾಗೂ ಗಿಲಾವ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷನಾದ ನಾನು ಶ್ರೀ ಸಂಜುಕುಮಾರ ಸಿಂಧೆ ಪದಾಧಿಕಾರಿಗಳಾದ ರವಿ ಗುತ್ತೇದಾರ ನರಸಿಂಗ ಅಮಲಾಪೂರು, ಸಾಹಿತಿಗಳಾದ ಡಾ. ಸುಬ್ಬಣ್ಣ ಕರಕನಳ್ಳಿ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ( ದಿ. ಲಕ್ಷ್ಮೀ ನಾರಾಯಣ ನಾಗವಾರ ಸ್ಥಾಪಿತ) ಕಲಬುರ್ಗಿ ವಿಭಾಗೀಯ ಸಂಚಾಲಕ ಉಮೇಶಕುಮಾರ ಸೋರಳ್ಳಿಕರ್, ಕಾರ್ಮಿಕ ಮುಖಂಡರಾದ ಶರಣಪ್ಪ, ಶಿವಕುಮಾರ್ ಯಾದ್ಲಾಪುರ, ಸಂಜು, ಸುನೀಲ್ ಕುಮಾರ್, ಬಂದಗೆ ಪಂಡಾರಿನಾಥ್, ತುಕಾರಾಮ್ ಮಿರ್ಜಾಪುರ (ಕೆ ) ತುಕಾರಾಮ್ ಬಸತಪುರ, ಯವನ್, ಲಕ್ಷುಮಣ ಶಹಾಪುರ ಗೇಟ್, ನರಸಿಂಗ್ ಚಿದ್ರಿ ಅಶೋಕ್ ವಿದ್ಯಾನಗರ, ನಿವೃತ ಪೊಲೀಸ್ ಅಧಿಕಾರಿ ಬಸವರಾಜ ಮೀತಾರೆ ಮುಂತಾದವರು ಕರಪತ್ರ ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿದ್ದರು

# ಶ್ರೀ ಕನ್ನಿಕಾ ಪರಮೇಶ್ವರಿ ಭವ್ಯ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ:–ಗಂಗಾವತಿ ಶ್ರೀ ಕನ್ನಿಕಾ ಪರಮೇಶ್ವರಿ ಭವ್ಯ ಮೆರವಣಿಗೆ. ನಾಡಿನ ಸಾಂಸ್ಕೃತಿಕ ಅನಾವರಣ ಮೆರವಣಿಗೆಯ ಉದ್ದಕ್ಕೂ ಜೈ ವಾಸವಿ ಉದ್ಘೋಷ

ಭಕ್ತಿ ಭಾವ ಮೂಡಿಸಿದ ಶ್ರೀ ವಾಸವಿ ಆರತಿ. ಗಂಗಾವತಿ.ನಗರದ ಆರ್ಯವೈಶ್ಯ ಸಮಾಜ.ಶ್ರೀ ವಾಸವಿ ಮಹಿಳಾ ಮಂಡಳಿ. ವಾಸವಿ ಯುವಜನ ಸಂಘ ಇವರ ನೇತೃತ್ವದಲ್ಲಿ ರವಿವಾರದಂದು ಜರುಗಿದ ಶ್ರೀ ಕನ್ನಿಕಾ ಪರಮೇಶ್ವರಿ ಜಯಂತೋತ್ಸವದ ಪ್ರಯುಕ್ತ ಸಂಜೆ ಜರುಗಿದ ಶ್ರೀ ವಾಸವಿ ಮಾತೆಯ ಭವ್ಯ ಮೆರವಣಿಗೆ ನಾಡಿನ ಸಾಂಸ್ಕೃತಿಕ ಅನಾವರಣಕ್ಕೆ ಸಾಕ್ಷಿಯಾಗಿತ್ತು.

ಸಕಲ ವಾದ್ಯ ವೈಭವ ಬೆಂಗಳೂರಿನ ನೆಲ್ಡಾವ್ ಕಲಾ ಕೇಂದ್ರದ ನವ ಶಕ್ತಿ ದೇವತೆಗಳ ವೈಭವದ ನೃತ್ಯ ನೆರೆದ ಜನಸ್ತೋಮವನ್ನು ಆಕರ್ಷಿಸುವಲ್ಲಿ ಸಫಲತೆ ಹೊಂದಿದ್ದು. ಈ ಸಂದರ್ಭದಲ್ಲಿ ಮೆರವಣಿಗೆಯ ಉದ್ದಕ್ಕೂ ಜೈ ವಾಸವಿ ಸಮಾಜ ಬಾಂಧವರ ಉದ್ಘಾಷ ಬಾನೆತ್ತರಕ್ಕೆ ತಲುಪುವಂತೆ ಭಾಸವಾಯಿತು. ಬಳಿಕ ಗಾಂಧಿ ವೃತ್ತದಲ್ಲಿ ಕಾವ್ಯ ಕುಂಜ. ಅರಗಿಣಿ ಹಾಡಿಗೆ ಗಾಂಧಿ ಪ್ರತಿಮೆ ಬಳಿ ದೇವಿಯ ಚಿತ್ರವನ್ನು ಬಿಡಿಸಿದ ಕಲಾವಿದ ಶ್ರೀಮತಿಸಿಎಂ ರಾಧಿಕಾ ಅವರ ಕುಂಚ ಆಕರ್ಷಣೆ ವಾಗಿ ಮೂಡಿಬಂದಿತು. ಸಮಾಜದ ಅಧ್ಯಕ್ಷ ರೂಪಾರಾಣಿ ಲಕ್ಷ್ಮಣ್ ರಾಯಚೂರು ಅವರ ಉತ್ಸಾಹ ಕ್ರಿಯಾಶೀಲತೆಯಿಂದಾಗಿ ಸಮಾಜದ ಮಹಿಳೆಯರು ದಾರಿ ಉದ್ದಕ್ಕೂ ಸೊಗಸಾದ ಹೆಜ್ಜೆಯನ್ನು ಹಾಕುವುದರ ಮೂಲಕ ತಮ್ಮ ಕ್ರಿಯಾಶೀಲತೆಯನ್ನು ವ್ಯಕ್ತಪಡಿಸಿದರು. ಬಳಿಕ ವಾಸವಿ ಆರತಿ ಧಾರ್ಮಿಕ ಪೂಜಾ ಕಾರ್ಯಕ್ರಮವನ್ನು ದೇವಸ್ಥಾನದ ಪ್ರಧಾನ ಅರ್ಚಕ ದಿಗಂಬರ್ ಭಟ್ ಜೋಶಿ. ಹಾಗೂ ಋತಿಜ್ಜರ್ ತಂಡದವರು ಸಾಂಗತವಾಗಿ ನಡೆಸಿಕೊಟ್ಟರು. ಒಟ್ಟಾರೆ ಕಳೆದ ವರ್ಷದ ಮಾದರಿಯಲ್ಲಿ ಈ ವರ್ಷ ಶ್ರೀ ಕನ್ನಿಕಾ ಪರಮೇಶ್ವರಿ ಜಯಂತೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವಲ್ಲಿ ಗಂಗಾವತಿ ಆರ್ಯವೈಶ್ಯ ಸಮಾಜ ಆಸ್ತಿಕ ಬಾಂಧವರಲ್ಲಿ ಶ್ರದ್ಧೆ ಭಕ್ತಿ ಮೂಡಿಸುವಲ್ಲಿ ಸಫಲತೆಗೊಳಿಸಿದರು...

ಬಾಕ್ಸ್.. ಭಾರತದ ಭವ್ಯ ಪರಂಪರೆಯನ್ನು ಉಳಿಸಿ ಬೆಳಸುವ ಕಾರ್ಯವಾಗಬೇಕು.. ಮಾಜಿ ಶಾಸಕ ಪರಣ್ಣ ಮು ನವಳ್ಳಿ .

ವಾಸವಿ ಆರತಿ ಸಮಾರಂಭಕ್ಕೆ ಆಗಮಿಸಿದ ಮಾಜಿ ಶಾಸಕ ಪರಣ್ಣ ಮುನವಳ್ಳಿ ಮಾತನಾಡಿ ಭಾರತದ ಭವ್ಯ ಪರಂಪರೆ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಇಂತಹ ಧಾರ್ಮಿಕ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ಜರುಗಬೇಕು.

# ದ್ವಿಚಕ್ರ ವಾಹನಗಳ ಮಾರಾಟಕ್ಕೆ ಬ್ರೇಕ್ ಹಾಕಿದ ಪೊಲೀಸ್ ಇಲಾಖೆ

**ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕು ಭತ್ತದ ಕಣಜವಾಗಿ ಪ್ರಸಿದ್ಧಿ ಹೊಂದಿರುವುದರ ಜೊತೆಗೆ, ಸಂಡೇ ಮಾರ್ಕೆಟ್‌ನ ಹಳೆಯ ವಾಹನಗಳ ಮಾರಾಟಕ್ಕೂ ರಾಜ್ಯ ಮಟ್ಟದಲ್ಲಿ ಖ್ಯಾತಿ ಪಡೆದಿದೆ. “ಗಂಗಾವತಿ” ಎಂದರೆ ಸಾಕು, ಭತ್ತದ ನಾಡು ಹಾಗೂ ಸಂಡೇ ಮಾರ್ಕೆಟ್ ಎಂಬ ಹೆಸರು ಸಹಜವಾಗಿ ನೆನಪಾಗುತ್ತದೆ. ಆದರೆ ಇತ್ತೀಚಿನ ದಿನಗಳಲ್ಲಿ ಸಂಡೇ ಮಾರ್ಕೆಟ್‌ನಲ್ಲಿ ಮಾರಾಟವಾಗುತ್ತಿರುವ ದ್ವಿಚಕ್ರ ವಾಹನಗಳಿಗೆ ಸಂಬಂಧಿಸಿದಂತೆ ಗಂಭೀರ ಅಕ್ರಮಗಳು ಬೆಳಕಿಗೆ ಬಂದಿವೆ. ವಾಹನಗಳನ್ನು ಖರೀದಿ ಮಾಡಿದ ಗ್ರಾಹಕರಿಗೆ ಅಗತ್ಯವಾದ ಕಾನೂನುಬದ್ಧ ದಾಖಲೆಗಳನ್ನು ನೀಡದೇ ಮಾರಾಟಗಾರರು ಸತಾಯಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ. ಉತ್ತರ ಕರ್ನಾಟಕದ ವಿವಿಧ ಭಾಗಗಳಿಂದ ಹಾಗೂ ಗ್ರಾಮೀಣ ಪ್ರದೇಶಗಳಿಂದ ಜನರು



ಗಂಗಾವತಿಯ ಸಂಡೇ ಮಾರ್ಕೆಟ್‌ಗೆ ಆಗಮಿಸಿ ಹಳೆಯ ವಾಹನಗಳನ್ನು ಖರೀದಿಸುತ್ತಾರೆ. ಆದರೆ ಖರೀದಿಯ ನಂತರ ವಾಹನಗಳ ಖಅ, ಇನ್ಸುರನ್ಸ್ ಸೇರಿದಂತೆ ಪ್ರಮುಖ ದಾಖಲೆಗಳನ್ನು ನೀಡದೇ ಇರುವುದರಿಂದ ಗ್ರಾಹಕರು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಈ ಸಂಬಂಧ ಗಂಗಾವತಿ ನಗರ ಪೊಲೀಸ್ ಠಾಣೆಗೆ ಅನೇಕ ದೂರುಗಳು ದಾಖಲಾಗಿವೆ.

ದಾಖಲೆಗಳಿಲ್ಲದ ವಾಹನ ಮಾರಾಟದ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ. ದೂರುಗಳ ಪರಿಶೀಲನೆ ನಡೆಸಿದ ಪೊಲೀಸ್ ಇಲಾಖೆ ಅಧಿಕಾರಿಗಳು, ನಿಯಮ ಉಲ್ಲಂಘನೆ ಕಂಡುಬಂದ ಹಿನ್ನೆಲೆಯಲ್ಲಿ ಸಂಡೇ ಮಾರ್ಕೆಟ್‌ನಲ್ಲಿ ನಡೆಯುತ್ತಿದ್ದ ದ್ವಿಚಕ್ರ ವಾಹನಗಳ ಮಾರಾಟಕ್ಕೆ ತಾತ್ಕಾಲಿಕ ಬ್ರೇಕ್ ಹಾಕಿದ್ದಾರೆ. ಜೊತೆಗೆ, ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ನೀಡಲಾಗಿದೆ. ಪೊಲೀಸರ ಈ ಕ್ರಮಕ್ಕೆ ಸಾರ್ವಜನಿಕರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕೆಲವರು ಗ್ರಾಹಕರ ಹಿತಕ್ಕಾಗಿ ಈ ಕ್ರಮ ಅಗತ್ಯ ಎಂದು ಅಭಿಪ್ರಾಯಪಟ್ಟರೆ, ಮತ್ತೊಂದೆಡೆ ವ್ಯಾಪಾರಿಗಳಿಗೆ ತೊಂದರೆ ಉಂಟಾಗಿದೆ ಎಂದು ಕೆಲವರು ಹೇಳಿದ್ದಾರೆ.

# ಬೇಸಿಗೆ ಶಿಬಿರದ ಸಮಾರೋಪ ಕಾರ್ಯಕ್ರಮ




ಮುದಗಲ್ : ಸಮೀಪದ ಜನತಾಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂಡಿಯಾ ಸುಧಾರ್ ಎಜುಕೇಶನ್ ಅಂಡ್ ಚಾರಿಟೇಬಲ್ ಟ್ರಸ್ಟ್ ಬೆಂಗಳೂರು ಇವರ ಸಹಯೋಗದಲ್ಲಿ 15 ದಿನಗಳ ಕಾಲ ನಿರಂತರವಾಗಿ ಹಮ್ಮಿಕೊಂಡಿದ್ದ ಉಚಿತ ಮಕ್ಕಳ ಮನೋಲ್ಲಾಸ ಬೇಸಿಗೆ ಶಿಬಿರದ ಕೊನೆಯ ದಿನದ ಸಮಾರೋಪ ಕಾರ್ಯಕ್ರಮ ಶನಿವಾರ ಜರುಗಿತು.

ಶಿಕ್ಷಣ ಸಂಯೋಜಕ ಮಹಾಂತೇಶ್ ಬಳ್ಳೊಳ್ಳಿ ಸಸಿಗೆ ನೀರುಣಿಸಿ ಕಾರ್ಯಕ್ರಮ ಉದ್ಘಾಟನೆ ಮಾಡಿದರು. ನಂತರ ಮಾತನಾಡಿದ ಅವರು ಸರಕಾರಿ ಶಾಲೆಗಳಲ್ಲಿ ಮಕ್ಕಳಿಗಾಗಿ 15 ದಿನಗಳ ಬೇಸಿಗೆ ಶಿಬಿರ ಆಯೋಜನೆ ಮಾಡಲಾಗಿತ್ತು. ಪ್ರತಿ ದಿನವೂ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಕೌಶಲ, ಜ್ಞಾನ, ಹಾಗೂ ಅನುಭವಾತ್ಮಕ ಕಲಿಕೆಗಳನ್ನು ಆಯೋಜಿಸಲಾಗಿತ್ತು. ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗಳನ್ನು ಹೊರ ತರಲು ಇಂತಹ ಬೇಸಿಗೆ ಶಿಬಿರಗಳು ತುಂಬಾ ಸಹಾಯಕವಾಗಲಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪತ್ರಕರ್ತ ಶರಣಯ್ಯ ಒಡೆಯರ್ ಮಾತನಾಡಿ ಗ್ರಾಮೀಣ ಭಾಗದ ಸರಕಾರಿ ಶಾಲೆಗಳಲ್ಲಿ ಮಕ್ಕಳ ಬೇಸಿಗೆ ಶಿಬಿರವನ್ನು ಜನತಾಪುರ ಶಾಲೆಯಲ್ಲಿ ಏರ್ಪಡಿಸಿರುವುದು ಇಲ್ಲಿನ ಶಿಕ್ಷಕರ ಕ್ರಿಯಾಶೀಲತೆಗೆ ಸಾಕ್ಷಿಯಾಗಿದ್ದು, ಮಕ್ಕಳು ಬೇಸಿಗೆ ಬಿಡುವಿನಲ್ಲಿ ಸುಮ್ಮನೆ ಕಾಲಹರಣ ಮಾಡುತ್ತಿದ್ದೂ, ಮಕ್ಕಳು ಬೇಸಿಗೆ ಶಿಬಿರಗಳಲ್ಲಿ ಭಾಗವಹಿಸುವುದರಿಂದ ಕಲೆ, ಚಿತ್ರಕಲೆ, ಕ್ರಾಫ್ಟ್ ವರ್ಕ್, ಸಂಗೀತ, ಡ್ಯಾನ್ಸ್ ಹಾಗೂ ವಚನ ಗಾಯನ ಇತ್ಯಾದಿ ಹಲವು ಕಲೆ ಕೌಶಲಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಈ ಶಿಬಿರಗಳು ಮಹತ್ತರ ಪಾತ್ರ ವಹಿಸುತ್ತವೆಂದು ತಿಳಿಸಿದರು.

ಶಾಲಾ ಸಹಶಿಕ್ಷಕ ಮೌನೇಶ್ ಎಂ. ವಿಶ್ವಕರ್ಮ ಪ್ರಾಸ್ತವಿಕ ನುಡಿಯಲ್ಲಿ ಮಾತನಾಡಿ ಅವರು ಬೇಸಿಗೆ ಶಿಬಿರ ಏರ್ಪಡಿಸಲು ಇಂಡಿಯಾ ಸುಧಾರ್ ಎಜುಕೇಶನ್ & ಚಾರಿಟೇಬಲ್ ಟ್ರಸ್ಟ್, ಸಂಪನ್ಮೂಲ ವ್ಯಕ್ತಿಗಳ, ಗ್ರಾಮಸ್ಥರ, ಎಸ್ಡಿಎಂಸಿ ಹಾಗೂ ಮುಖ್ಯ ಶಿಕ್ಷಕರ, ಹಾಗೂ ಸಹ ಶಿಕ್ಷಕರ ಸಹಕಾರ ಮತ್ತು ಮುದ್ದು ಮಕ್ಕಳ ಭಾಗವಹಿಸುವಿಕೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಬನ್ನಿಗೋಳ ಸಮೂಹ ಸಂಪನ್ಮೂಲ ವ್ಯಕ್ತಿ ಮಂಜುನಾಥ ಹೂಗಾರ, ಶಾಲೆಯ ಮುಖ್ಯ ಗುರುಗಳು ಗುರುಬಸಪ್ಪ, ಸಹಶಿಕ್ಷಕ ರವಿಕುಮಾರ, ಅತಿಥಿ ಶಿಕ್ಷಕಿಯರು ಕುಮಾರಿ ಗೀತಾ, ಜ್ಯೋತಿ ಯರದಿಹಾಳ, ಹುಸೇನ್ ನದಾಫ್, ಸ್ಥಳೀಯ ಅಂಗನವಾಡಿ ಕಾರ್ಯಕರ್ತೆ ಹೇಮಾವತಿ ಸೇರಿದಂತೆ ಶಾಲಾ ಮಕ್ಕಳು ಇದ್ದರು.

# ಕಂಚಗಾರಹಳ್ಳಿಯಲ್ಲಿ ಅಕ್ಷರ ಫೌಂಡೇಶನ್ ಉಚಿತ ಬೇಸಿಗೆ ಶಿಬಿರ




ಮಲ್ಲಮ್ಮನುಡಿವಾರ್ತೆ ಯಾದಗಿರಿ

ಯಾದಗಿರಿ ತಾಲ್ಲೂಕಿನ ಕಂಚಗಾರಹಳ್ಳಿ ಗ್ರಾಮದಲ್ಲಿ ಅಕ್ಷರ ಫೌಂಡೇಶನ್ ವತಿಯಿಂದ ಉಚಿತ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ 42ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದು, ಚಟುವಟಿಕೆ ಆಧಾರಿತ ಕಲಿಕೆಯ ಮೂಲಕ ವಿದ್ಯಾರ್ಥಿಗಳ ಸೃಜನಶೀಲತೆ ಮತ್ತು ಜ್ಞಾನ ವೃದ್ಧಿಗೆ ವಿಶೇಷ ಒತ್ತು ನೀಡಲಾಗಿದೆ.

ಅಕ್ಷರ ಫೌಂಡೇಶನ್ ಕ್ಲಸ್ಟರ್ ಸಂಯೋಜಕರಾದ ಮಂಜುನಾಥ ಗುರುಸುಣಿಗಿ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಗ್ರಾಮದ ನಕ್ಷೆ ರಚನೆ, ಮನೆಗಳ ಮತ್ತು ಸದಸ್ಯರ ಮಾಹಿತಿ ಸಂಗ್ರಹ, ಗ್ರಾಮದಲ್ಲಿರುವ ಗಿಡ–ಮರಗಳ ಪಟ್ಟಿ ತಯಾರಿಕೆ, ಕನ್ನಡ ಮತ್ತು ಇಂಗ್ಲಿಷ್ ಪದಗಳ ಬರವಣಿಗೆ ಸೇರಿದಂತೆ ಹಲವು ಪ್ರಾಯೋಗಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳು ತಮ್ಮ ಗ್ರಾಮದ ಹಾಗೂ ಸುತ್ತಮುತ್ತಲಿನ ಪರಿಸರದ ಕುರಿತು ಅರಿವು ಮೂಡಿಸಿಕೊಳ್ಳುವುದರ ಜೊತೆಗೆ, ಸ್ವಯಂ ಅಧ್ಯಯನದ ಮೂಲಕ ಜ್ಞಾನವನ್ನು ವೃದ್ಧಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಶಿಬಿರದಲ್ಲಿ ಶೈಕ್ಷಣಿಕ ಸೇವಕರಾದ ಶಾಂತರಾಜು, ಮುಹಮ್ಮದ್ ಅಲಿ, ಅತಿಥಿ ಶಿಕ್ಷಕರಾದ ದೇವು ಸರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೇ 1 ರಂದು ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಮೂರ್ತಿ ಪ್ರತಿಷ್ಠಾಪನೆ; ಸಪ್ತ ದಿನಗಳ ಧಾರ್ಮಿಕ ಮಹೋತ್ಸವಕ್ಕೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಜಹೀರಾಬಾದ್:**

ತೆಲಂಗಾಣ ರಾಜ್ಯದ ಜಹೀರಾಬಾದ್ ತಾಲ್ಲೂಕಿನ ಗಣೇಶಪುರದಲ್ಲಿ ನೂತನವಾಗಿ ನಿರ್ಮಿಸಲಾದ ಶ್ರೀ ಆನಂದ ವನಾಶ್ರಮ ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದ ಲೋಕಾರ್ಪಣೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಸಪ್ತ ದಿನಗಳ ಸಂಭ್ರಮಕ್ಕೆ ಸೋಮವಾರ ಚಾಲನೆ ದೊರೆತಿದೆ.





ಏಪ್ರಿಲ್ 27ರಿಂದ ಆರಂಭವಾಗಿರುವ ಈ ದೈವಿಕ ಕಾರ್ಯಕ್ರಮವು ಮೇ 3 ರವರೆಗೆ ಜರುಗಲಿದೆ. ಏಪ್ರಿಲ್ 29 ಮತ್ತು 30 ರಂದು ದೇವತಾ ಪ್ರಾಣ ಪ್ರತಿಷ್ಠಾಪನಾ ವಿಧಿವಿಧಾನಗಳು ನಡೆಯಲಿದ್ದು, ಮೇ 1 ರಂದು ಅತ್ಯಂತ ವೈಭವದಿಂದ ಮೂರ್ತಿ ಪ್ರತಿಷ್ಠಾಪನೆ ನೆರವೇರಲಿದೆ. ಈ ಸಂದರ್ಭದಲ್ಲಿ ಭಜನಾ ಮಂಡಳಿಗಳಿಂದ ನಿರಂತರ ಭಜನೆ ಹಾಗೂ ಧಾರ್ಮಿಕ ಪ್ರವಚನಗಳು ನಡೆಯಲಿವೆ.

ಸಮಾರಂಭದ ವಿಶೇಷ ಆಕರ್ಷಣೆಯಾಗಿ ಓಂ ನಮಃ ಶಿವಾಯ ಸ್ವಾಮೀಜಿಯವರಿಗೆ ಭಕ್ತರಿಂದ ನಾಣ್ಯಳಿಂದ "ತುಲಾಭಾರ ಸೇವೆ" ಹಮ್ಮಿಕೊಳ್ಳಲಾಗಿದೆ. ದೇವಸ್ಥಾನದ ಆವರಣದಲ್ಲಿ ಭಕ್ತರಿಗಾಗಿ ಅನ್ನದಾಸೋಹದ ವ್ಯವಸ್ಥೆಯನ್ನೂ ಮಾಡಲಾಗಿದೆ.

ಕಾರ್ಯಕ್ರಮದಲ್ಲಿ ಶ್ರೀ ರಾಜಮುಲ್ಲಯ್ಯ ಬೋರಂಜಿ ಸ್ವಾಮೀಜಿ ಹಾಗೂ ಶ್ರೀ ಸಿದ್ದಲಿಂಗೇಶ್ವರ ಬೋರಂಜಿ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯವಿರಲಿದೆ. ಬೀದರ ಮತ್ತು ಜಹೀರಾಬಾದ್ ವಿಧಾನಸಭಾ ಕ್ಷೇತ್ರದ ಶಾಸಕರು, ಸಂಸದರು ಹಾಗೂ ಕರ್ನಾಟಕ ಮತ್ತು ತೆಲಂಗಾಣ ರಾಜ್ಯದ ಪ್ರಮುಖ ರಾಜಕೀಯ ಧುರೀಣರು, ಮಠಾಧೀಶರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಬೀದರ್–ಜಹೀರಾಬಾದ್ ರಸ್ತೆಯ ಸ್ವಾಮಿ ನಾರಾಯಣ ಗುರುಕುಲ ಶಾಲೆಯ ಹತ್ತಿರವಿರುವ ಗಣೇಶಪುರದಲ್ಲಿ ಈ ಭವ್ಯ ಕಾರ್ಯಕ್ರಮ ಆಯೋಜಿತವಾಗಿದೆ. ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ದರುಶನ ಪಡೆದು ಪುನೀತರಾಗಬೇಕು, ಧನಸಹಾಯ ಮಾಡಲು ಬಯಸುವ ಭಕ್ತರು ಕ್ಯೂಆರ್ ಕೋಡ್ ಬಳಸು ಧನಸಹಾಯ ಮಾಡಬಹುದು ಎಂದು ದೇವಸ್ಥಾನದ ಸಮಿತಿ ಹಾಗೂ ಭೂದಾನಿಗಳಾದ ಜಗದೇವಿ ಮತ್ತು ಡಾ. ಶರಣಪ್ಪ ಬಾಲೋಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕಕರಿಗೆ ಸನ್ಮಾನ

**ಮಲ್ಲಮ್ಮ ನುಡಿ ವಾರ್ತೆ**
**ಹುಣಸೂರು:**

ರೋಟರಿ ಕ್ಲಬ್ ವಿಶ್ವ ಮಟ್ಟದಲ್ಲಿ ಉದ್ಯಮಿಗಳು, ವೃತ್ತಿಪರರ ಒಂದು ತಂಡ ಅಂತರಾಷ್ಟ್ರೀಯ ಸೇವಾ ಸಂಸ್ಥೆಯಾಗಿ.ರೂಪಗೊಂಡು.ಯಶಸ್ವಿ 121ವಸಂತಗಳನ್ನು ಕಳೆದಿರುವುದು ಹೆಮ್ಮೆಯ ವಿಷಯವೆಂದು 3181 ಗವರ್ನರ್ ಪಿ.ಕೆ.ರಾಮಕೃಷ್ಣ ತಿಳಿಸಿದರು.

ನಗರದ ರೋಟರಿ ಭವನದಲ್ಲಿ 25_26ರ ಗವರ್ನರ್ ಅಧಿಕೃತ ಬೇಟಿಯಲ್ಲಿ. ರೋಟರಿ ಕ್ಲಬ್ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಿದ ಮಾತನಾಡಿದ ಅವರು, ಪೌಲ್ ಹ್ಯಾರಿಸ್ ಅವರು 23.02.1905ರಲ್ಲಿ ಸ್ಥಾಪಿಸಿದ ರೋಟರಿ ಕ್ಲಬ್.ಸಮಾಜದ ಧ್ಯೇಯ ವಾಕ್ಯದೊಂದಿಗೆ. ಆರೋಗ್ಯ,ಶಿಕ್ಷಣ,ಸ್ವಚ್ಛತೆ ಮತ್ತು ಶಾಂತಿ ಪರಿಸರ ರಕ್ಷಣೆಗಾಗಿ ಕೆಲಸ ಮಾಡುತ್ತ. ನೊಂದವರ ಬದುಕಿಗೆ ಆರ್ಥಿಕ ನೆರವು ಹಾಗೂ ಸಮಾಜ ಸುಧಾರಣೆಗೆ ಶ್ರಮಿಸಿದ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯ ನಿಸ್ವಾರ್ಥದಿಂದ ಕೂಡಿದೆ ಎಂದರು.



ಅಷ್ಟೇ ಅಲ್ಲದೆ ವಿಶ್ವದೆಲ್ಲೆಡೆ ಪ್ರಮುಖ ಯೋಜನೆಯಾಗಿ. ಪೋಲಿಯೊ ನಿರ್ಮೂಲನೆ, ಸಮುದಾಯ ಸೇವೆಯಾಗಿ, ಶುದ್ದ ಕುಡಿಯುವ ನೀರು, ಅಂಗನವಾಡಿ ಉನ್ನತಿಗೆ ಆದ್ಯತೆ. ನೈರ್ಮಲ್ಯ ಮತ್ತು ಪರಿಸರ ರಕ್ಷಣೆಗೆ ರೋಟರಿ ಒತ್ತು ನೀಡಿ. ಸೇವಾ ಮನೋಭವನೆಯಿಂದ ಉಚಿತವಾಗಿ ಕೊಡುಗೆ ನೀಡುವ ಸಂಸ್ಥೆ ಏನಾದರೂ ಇದ್ದರೆ ಅದು ಅಂತರಾಷ್ಟ್ರೀಯ ರೋಟರಿ ಸಂಸ್ಥೆ ಎಂದರು. ಆ ನಿಟ್ಟಿನಲ್ಲಿ ರೋಟರಿ ಸಂಸ್ಥೆ ಹುಣಸೂರು ಅಧ್ಯಕ್ಷರು ವಿವಿಧ ಅಭಿವೃದ್ಧಿ ಕಾರ್ಯದಲ್ಲಿ ಛಾಪುಮೂಡಿಸಿದ್ದಾರೆ ಎಂದರು.

ಸಹಾಯಕ ಗವರ್ನರ್ ರಾಜೇಗೌಡ ತಿರುಮಲಾಪುರ ಮಾತನಾಡಿ, ರೋಟರಿ ಕ್ಲಬ್ ಸೇವಾ ಸಂಸ್ಥೆಯಾಗಿ, ಸಮಾಜದ ಎಲ್ಲಾ ಸಂಘ ಸಂಸ್ಥೆಗಳ ಜೊತೆ ಗೂಡಿ, ಸರಕಾರದ ಭಾಗವಾಗಿ ಅಭಿವೃದ್ಧಿಗೆ ಆದ್ಯತೆ ಮತ್ತು ಮಹಿಳೆಯರ ಸ್ವಾವಲಂಬಿ ಬದುಕಿಗೆ ವೇದಿಕೆಯಾಗಿ ಕೆಲಸ ಮಾಡುತ್ತಿರುವುದು ರೋಟರಿ ಧ್ಯೇಯವಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ರಘುಪತಿ ವಿ.ರಾವ್, ರೋಟರಿ ಸಂಸ್ಥೆ ಅಂತರಾಷ್ಟ್ರೀಯ ಮತ್ತು ಸ್ಥಳೀಯವಾಗಿ, ವಿಷಯಗಳ ವಿನಿಮಯ ಮತ್ತು ಸ್ನೇಹವನ್ನು ಸಮಾಜಮುಖಿಯಾಗಿ, ಜೀವನಪೂರ್ತಿ ಇರಿಸಿಕೊಳ್ಳಬೇಕು ಎಂಬ ಉದ್ದೇಶದೊಂದಿಗೆ ಪ್ರರಂಭಗೊಂಡ ಈ ಸಂಸ್ಥೆ ಸುತ್ತಮುತ್ತಲಿನ ಜಲ್ವಂತ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಮುಂಚೂಣಿಯಲ್ಲಿದೆ. ಹಾಗೆ ಆರೋಗ್ಯ, ಕುಡಿಯುವ ನೂರು, ಪರಿಸರ ಕಾಳಜಿ, ಶೈಕ್ಷಣಿಕ ನೆರವು. ಮತ್ತು ತಾಯಿ ಮತ್ತು ಮಗುವಿನ ಆರೈಕೆಯ ಬದ್ದತೆ ಪ್ರಶಂಸನೀಯವೆಂದರು.

ರೋಟರಿ ಕ್ಲಬ್ ಅಧ್ಯಕ್ಷ ಹೆಚ್. ಆರ್.ಕೃಷ್ಣಕುಮಾರ್ ಮಾತನಾಡಿ, ರೋಟರಿ ಸಂಸ್ಥೆಯಲ್ಲಿ ಸೇವೆ ಮಾಡಲು ಹಣವಿದ್ದರೆ ಸಾಲದು. ಸೇವೆ ಮಾಡುವ ಮನಸ್ಸು ಇದ್ದರೆ ಯಾವ ಸಾಧನೆ ಬೇಕಾದರೂ ಮಾಡಬಹುದು. ಅದಕ್ಕೆ ಉದಾಹರಣೆ ಶುದ್ಧ ಕುಡಿಯುವ ನೀರು ಯೋಜನೆ, ಉಚಿತ ಆರೋಗ್ಯ , ಶಾಲೆಗಳ ಪನಶ್ಚೇತನ, ಅಂಗನವಾಡಿ ಉನ್ನತಿಗೆ ಕ್ರಮ, ನಗರದ ಬಸ್ ನಿಲ್ದಾಣದಲ್ಲಿ ಐಲವ್ ಹುಣಸೂರು, ಸಾವಜನಿಕರಿಗೆ ಕುಡಿಯುವ ನೀರು ಯೋಜನೆಗೆ ಚಾಲನೆ. ಇನ್ನೂ ಹಲವಾರು ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದರು.

**ಕಾರ್ಯಕ್ರಮದಲ್ಲಿ ಸಾಧಕರಿಗೆ ಸನ್ಮಾನ:**

ಹೋಮಿಯೋಪತಿ ವೈದ್ಯ ಡಾ.ರಘುಪತಿ ವಿ.ರಾವ್, ದಾಸನಪುರ ಸರಕಾರಿ ಶಾಲೆಯ ಶಿಕ್ಷಕಿ ಸುಮಾ, ವಿವೇಕಾನಂದ ಯೂತ್ ಮೂವ್ಮೆಂಟ್ ಡಿಸೈನಿಂಗ್ ಶಿಕ್ಷಕಿ ಗೀತಾ, ಅವರನ್ನು ಗೌರವಿಸಲಾಯಿತು.


ರೋಟರಿ ಸದಸ್ಯರಾದ ಧರ್ಮಾಪುರ ನಾರಾಯಣ್ ,ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು.

ಶಿವಕುನಾರ್ ವಿ.ರಾವ್, ಪತ್ರಿಕೋದ್ಯಮ ಪ್ರಶಸ್ತಿ ಪುರಸ್ಕೃತರು.

ರೊ.ಡಾ.ಸರೋಜಿನಿ ಜಿಲ್ಲಾ ಮಹಿಳಾ ಪ್ರಶಸ್ತಿ ಪುರಸ್ಕೃತರು.

ಕಾರ್ಯಕ್ರಮದಲ್ಲಿ ವಲಯ ಸೇನಾನಿ ರಮೇಶ್, ಕೆ.ಕಾರ್ಯದರ್ಶಿ ಧರ್ಮಾಪುರ ಶ್ಯಾಮಣ್ಣ, ಉಪಾಧ್ಯಕ್ಷ ಸ್ವಾಮೀಗೌಡ, ಸಾರ್ಜೆಂಟ್ ಲೂಯಿಸ್ ಪೆರೇರಾ, ರೊ. ಧರ್ಮಾಪುರ ನಾರಾಯಣ್, ರೊ. ರಾಜಶೇಖರ್, ರೊ.ಆರ್.ಆನಂದ್, ರೊ.ತಂಗಮರಿಯಪ್ಪನ್, ರೊ. ಡಾ.ರವಿಕುಮಾರ್, ರೊ. ಡಾ.ವೃಷಬೇಂದ್ರಸ್ವಾಮಿ, ರೊ. ಡಾ.ಚಂದ್ರನಂನ್, ರೊ..ಗಿರೀಶ, ರೊ.ಚನ್ನಕೇಶವ್, ರೊ.ಥಾಮಸ್ ಚೆರಿಯನ್, ರೊ.ಪಾಂಡುಕುಮಾರ್, ರೊ.ವೀರಭದ್ರಪ್ಪ, ರೊ.ರವೀಶ್ ,ರೊ.ಲಕ್ಷ್ಮಿಕಾಂತ್, ರೊ.ಚಂದ್ರೇಗೌಡ ಉಂಡವಾಡಿ, ಇದ್ದರು.

# ಗೋಮಾತೆಗೆ ರಾಷ್ಟ್ರಮಾತೆ ಸ್ಥಾನಮಾನಕ್ಕೆ ಆಗ್ರಹಿಸಿ ರಾಷ್ಟ್ರಪತಿಗೆ ಮನವಿ



• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಅಂತರ ರಾಷ್ಟ್ರೀಯ ಬಜರಂಗದಳ ಬೀದರ್ ಜಿಲ್ಲಾ ಘಟಕದ ವತಿಯಿಂದ ಗೋಮಾತೆಗೆ ರಾಷ್ಟ್ರಮಾತೆ ಸ್ಥಾನಮಾನ ನೀಡಬೇಕು ಹಾಗೂ ಗೋಹತ್ಯೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂಬ ಆಗ್ರಹದೊಂದಿಗೆ ಸೋಮವಾರ ನಗರದ ಅಂಬೇಡ್ಕರ್ ವೃತ್ತದಿಂದ ತಹಸೀಲ್ದಾರ್ ಕಚೇರಿವರೆಗೆ ಪ್ರತಿಭಟನೆ ನಡೆಸಿ, ತಹಸೀಲ್ದಾರ್ ಅವರ ಮೂಲಕ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡ ಈಶ್ವರ ಸಿಂಗ್ ಠಾಕೂರ್ ಅವರು, ಗೋಮಾತೆಯನ್ನು ರಾಷ್ಟ್ರಮಾತೆ ಎಂದು ಅಧಿಕೃತವಾಗಿ ಘೋಷಿಸುವವರೆಗೆ ಹೋರಾಟ ನಿಲ್ಲುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಮುಂದಿನ ದಿನಗಳಲ್ಲಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ದೊಡ್ಡಮಟ್ಟದ ಹೋರಾಟವನ್ನು ರೂಪಿಸಲಾಗುವುದು. ಅಗತ್ಯವಿದ್ದಲ್ಲಿ ಪ್ರತಿ ಮೂರು ತಿಂಗಳಿಗೆ ಒಂದು ಬಾರಿ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಇದೇ ವೇಳೆ ಆಗಸ್ಟ್ 16ರಂದು ದೆಹಲಿಯಲ್ಲಿ ಸುಮಾರು ಒಂದು ಕೋಟಿ ಗೋಭಕ್ತರನ್ನು ಸೇರಿಸಿ ಮಹಾ ಪ್ರತಿಭಟನೆ ನಡೆಸುವ ಕುರಿತು ಎಚ್ಚರಿಕೆ ನೀಡಿದರು. ಮನವಿಯಲ್ಲಿ ಗೋಸಂರಕ್ಷಣೆಗೆ ಕಠಿಣ ಕಾನೂನು ಜಾರಿಗೆ ತರಬೇಕು ಹಾಗೂ ಗೋಹತ್ಯೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಬಜರಂಗದಳದ ಜಿಲ್ಲಾಧ್ಯಕ್ಷ ವೆಂಕಟೇಶ್ ಶಾಲಿ ಚಿದ್ರಿ, ಪ್ರಧಾನ ಕಾರ್ಯದರ್ಶಿ ಸಂದೀಪ್ ಪಾಟೀಲ, ಜಿಲ್ಲಾ ಉಪಾಧ್ಯಕ್ಷ ವಸಂತ್, ಶ್ರೀಕಾಂತ್ ಮೋದಿ, ಸಿ.ಬಿ ರೆಡ್ಡಿ, ದೀಪಕ್ ತೆಲಗಣಿ, ನರಸಿಂಗರಾವ್, ಅಮರ್ ಸಿಂಗ್ ಠಾಕೂರ್, ರಾಜಕುಮಾರ್ ಆರ್ಯ, ಭರತ್ ಮಾಲೆಗಾಂವ್, ಆಕಾಶ್, ಬಾಬುಗಿರಿ, ಸಾಯಿನಾಥ್, ಸಿದ್ದು, ವಿಷ್ಣು, ನಾರಾಯಣ್ ಹಾಗೂ ಶಾಂತು ಹಡಪದ್ ಸೇರಿದಂತೆ ವಿವಿಧ ತಾಲೂಕುಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಭಾರತದಲ್ಲಿ ಗೋಹತ್ಯೆ ಸಂಪೂರ್ಣ ನಿಷೇಧಕ್ಕೆ ಆಗ್ರಹಿಸಿ ರಾಷ್ಟ್ರಪತಿಗಳಿಗೆ ಮನವಿ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**

ಪಟ್ಟಣದಲ್ಲಿ ಗೋ ರಕ್ಷಕ ಮತ್ತು ಸೇವಾ ಸಮಿತಿಯ ವತಿಯಿಂದ 'ಗೋಮಾತೆ ಗೌರವ ಅಭಿಯಾನ'ದ ಅಂಗವಾಗಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸೋಮವಾರ ಕಮಲನಗರ ತಹಸೀಲ್ದಾರರ ಮೂಲಕ ಭಾರತದ ಗೌರವಾನ್ವಿತ ರಾಷ್ಟ್ರಪತಿಗಳು, ಪ್ರಧಾನ ಮಂತ್ರಿಗಳು, ಕರ್ನಾಟಕದ ರಾಜ್ಯಪಾಲರು ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

**ಗೌರವ ದಿನದ ಕರೆ:**

ಈ ಅಭಿಯಾನದ ಭಾಗವಾಗಿ ಏಪ್ರಿಲ್ 27 ಅನ್ನು **'ಗೋಮಾತಾ ಗೌರವ ದಿನ'**ವನ್ನಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಈ ದಿನದಂದು ದೇಶಾದ್ಯಂತ ಗೋಪ್ರೇಮಿಗಳು ತಹಸಿಲ್ ಅಥವಾ ಬ್ಲಾಕ್ ಮಟ್ಟದಲ್ಲಿ ಮನವಿ ಸಲ್ಲಿಸುವ ಮೂಲಕ ಜಾಗೃತಿ ಮೂಡಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಕಮಲನಗರದ ಹತ್ತಾರು ಗೋರಕ್ಷಕರು, ಸಂಘಟನೆಯ ಪದಾಧಿಕಾರಿಗಳು ಹಾಗೂ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು. ಗೋವಂಶದ ರಕ್ಷಣೆ ಕೇವಲ ಧಾರ್ಮಿಕ ಕಾರ್ಯವಲ್ಲ, ಇದು ದೇಶದ ಸಂಸ್ಕೃತಿ ಮತ್ತು ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿದೆ ಎಂದು ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರು ಅಭಿಪ್ರಾಯಪಟ್ಟರು.

**ಪ್ರಮುಖ ಬೇಡಿಕೆಗಳು:**

ಸಾವಿರಾರು ಗೋರಕ್ಷಕರ ಸಹಿ ಒಳಗೊಂಡ ಈ ಮನವಿ ಪತ್ರದಲ್ಲಿ ಈ ಕೆಳಗಿನ ಪ್ರಮುಖ ಅಂಶಗಳನ್ನು ಒತ್ತಾಯಿಸಲಾಗಿದೆ:

- **ಗೋಹತ್ಯೆ ನಿಷೇಧ:** ಭಾರತದಾದ್ಯಂತ ಗೋಹತ್ಯೆಯನ್ನು ಸಂಪೂರ್ಣವಾಗಿ ಕಾನೂನುಬದ್ಧವಾಗಿ ನಿಷೇಧಿಸಬೇಕು.
  **ರಾಷ್ಟ್ರಮಾತೆ ಸ್ಥಾನ:** ಹಸುವಿಗೆ 'ರಾಷ್ಟ್ರಮಾತೆ' ಎಂಬ ಸಾಂವಿಧಾನಿಕ ಗೌರವದ ಸ್ಥಾನಮಾನ ನೀಡಬೇಕು.
- **ಕೇಂದ್ರೀಯ ಕಾನೂನು:** ಗೋಸೇವೆ ಮತ್ತು ಸಂರಕ್ಷಣೆಗಾಗಿ ಪ್ರತ್ಯೇಕ ಕೇಂದ್ರೀಯ ಕಾನೂನು ಜಾರಿಗೆ ತರಬೇಕು.
- **ಗೋಚರ ಮಂಡಳಿ:** ಪ್ರತಿ ಜಿಲ್ಲೆಗಳಲ್ಲಿ ಗೋಚರ ಮಂಡಳಿಗಳನ್ನು ರಚಿಸಿ, ಮೇವಿನ ಭದ್ರತೆಯನ್ನು ಖಚಿತಪಡಿಸಬೇಕು.
- **ಪಂಚಗವ್ಯ ಉತ್ತೇಜನ:** ಪಂಚಗವ್ಯ ಉತ್ಪನ್ನಗಳ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡಿ, ಅದಕ್ಕೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಬೇಕು.

# ಜಾತ್ರೆಯ ಗದ್ದಲದಲ್ಲಿ ಆದ್ಯಾತ್ಮದ ಗುಂಗು ಪ್ರವಚನ



• **ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ**

ಪಟ್ಟಣದ ಮೊಗ್ಗಿ ಬಸವೇಶ್ವರ ದೇವಸ್ಥಾನದ ಜಾತ್ರಾಮಹೋತ್ಸವದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದವರು ಆದ್ಯಾತ್ಮ ಕಾರ್ಯಕ್ರಮ ನಡೆಸಿಕೊಟ್ಟರು. ಭಕ್ತರು ಅತ್ಯಾಕರ್ಷಕವಾದ ಉದ್ಭವ ಲಿಂಗದ ಅದ್ಭುತ ದರ್ಶನವನ್ನು ಪಡೆದರು.

ಹುಲಕೋಟಿ ಈಶ್ವರೀಯ ವಿಶ್ವ ವಿದ್ಯಾಲಯದ ಸಂಚಾಲಕರಾದ ಬ್ರಹ್ಮಕುಮಾರಿ ಉಮಾದೇವಿ ಅಕ್ಕನವರು ಭಗವಂತನ ಸತ್ಯ ಪರಿಚಯವನ್ನು ಸರ್ವರಿಗೆ ಮನಮುಟ್ಟುವಂತೆ ತಿಳಿಸಿದರು ಹಾಗೂ ಒತ್ತಡ ಮುಕ್ತ ಜೀವನ ನಿರ್ವಹಿಸುವುದು ಹೇಗೆ ಅನ್ನೋದರ ಬಗ್ಗೆ ಮಾತನಾಡಿದರು.

ಗದುಗಿನ ಬ್ರಹ್ಮಕುಮಾರಿ ಜೋಶ್ನ ಅಕ್ಕನವರು ನಾನು ಎಂದರೆ ಯಾರು, ಈ ದೇಹವನ್ನು ನಡೆಸುವ ಶಕ್ತಿ ಯಾವುದು ಅನ್ನುವುದರ ಬಗ್ಗೆ ಪ್ರವಚನ ನಿಡಿದರು.

ಪುಟ್ಟ ಪುಟ್ಟ ಮಕ್ಕಳು ತಮ್ಮ ನೃತ್ಯದ ಮೂಲಕ ಸರ್ವರ ಮನ ಸೆಳೆದರು. ಯಲಬುರ್ಗಾದ ಸಂಚಾಲಕರಾದ ಬ್ರಹ್ಮಕುಮಾರಿ ಗೀತಾ ಅಕ್ಕನವರು

ಮಕ್ಕಳಿಗೆ ಉಡುಗೊರೆ ನೀಡಿದರು. ಗದುಗಿನ ನಿ.ಶಿಕ್ಷಕಿ ರಮಾದೇವಿ ಮ್ಯಾಗೇರಿ ಅವರು ತಮ್ಮ ಸ್ವರಚಿತ ಹಾಡುಗಳನ್ನಾಡಿದರು.

ಕೊನೆಗೆ ಸರ್ವರಿಗೂ ಧ್ಯಾನ ಮಾಡಿಸಿ ನಂತರ ಡಾ. ಬಸವರಾಜ ರಾಜ ಋಷಿಗಳ ನಿರ್ದೇಶನದ 'ಶಿವಯೋಗಿ ಅಕ್ಕಮಹಾದೇವಿ ' ಚಲನಚಿತ್ರವನ್ನು ಪ್ರೊಜೆಕ್ಟರ್ ಮೂಲಕ ತೋರಿಸಲಾಯಿತು.

# ವಾಸವಿ ಆಂಗ್ಲ ಮಾಧ್ಯಮ ಶಾಲೆಗೆ ಭರ್ಜರಿ ಫಲಿತಾಂಶ.



• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**

ಪಟ್ಟಣದ ವಾಸವಿ ಆಂಗ್ಲ ಮಾಧ್ಯಮ ಶಾಲೆಯ ಮೊದಲ ಎಸ್ ಎಸ್ ಎಲ್ ಸಿ ಬ್ಯಾಚ್ (2025–26) ಪರೀಕ್ಷೆಯಲ್ಲಿ ಗಮನಾರ್ಹ ಸಾಧನೆ ಮಾಡಿದೆ. ಒಟ್ಟು 18 ವಿದ್ಯಾರ್ಥಿಗಳಲ್ಲಿ 17 ಮಂದಿ ಅಗ್ರ ಶ್ರೇಣಿಯೊಂದಿಗೆ ಶೇಕಡ 94.4 ಪ್ರತಿಶತದೊಂದಿಗೆ ಉತ್ತೀರ್ಣರಾಗಿದ್ದು, ಶಾಲೆಯ ಶಿಕ್ಷಣ ಗುಣಮಟ್ಟಕ್ಕೆ ಸಾಕ್ಷಿಯಾಗಿದೆ.ಈ ಫಲಿತಾಂಶದ ಮೂಲಕ ಶಾಲೆಯ ವಿದ್ಯಾರ್ಥಿನಿ ಕುಮಾರಿ ಪಾವನಿ 625/618 ಅಂಕ ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದು, ತಾಲೂಕಿನಲ್ಲಿ ದ್ವಿತೀಯ, ಜಿಲ್ಲೆಯಲ್ಲಿ ನಾಲ್ಕನೇ ಹಾಗೂ ರಾಜ್ಯದಲ್ಲಿ ಎಂಟನೇ ಸ್ಥಾನ ಗಳಿಸಿ ವಿಶೇಷ ಸಾಧನೆ ಮಾಡಿದ್ದಾರೆ. ಈ ಸಾಧನೆಯನ್ನು ಆಚರಿಸುವ ನಿಟ್ಟಿನಲ್ಲಿ ಶಾಲೆಯಲ್ಲಿ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದ್ದು, ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು. ಶಾಲೆಯ ಅಧ್ಯಕ್ಷರಾದ ಆದರ್ಶ ಗುಮಡಾಲ್ ಅವರು ಪಾವನಿ ಅವರಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ –11,000 ನೆರವು ನೀಡಿದರು.ಗಣಿತ ವಿಷಯಗಳಲ್ಲಿ ಶತಪ್ರತಿಶತ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ವೆಂಕಟೇಶ್ ಅವರು –5,000 ಬಹುಮಾನ ನೀಡಿದರು. ಕನ್ನಡದಲ್ಲಿ ಅತಿ ಹೆಚ್ಚು ಅಂಕ ಹಾಗೂ ಇಂಗ್ಲಿಷ್‌ನಲ್ಲಿ ಹೆಚ್ಚು ಅಂಕ ಗಳಿಸಿದವರಿಗೆ ಪ್ರೋತ್ಸಾಹಧನ ನೀಡಿ ಗೌರವಿಸಲಾಯಿತು.ಶಾಲೆಯ ಯಶಸ್ಸಿಗೆ ಶಿಕ್ಷಕರ ಪರಿಶ್ರಮ ಪ್ರಮುಖ ಕಾರಣವಾಗಿದ್ದು, ವಿಶೇಷ ತರಗತಿಗಳು, ರಾತ್ರಿ ಪಾಠಗಳು ಮತ್ತು ಮೌಲ್ಯಮಾಪನ ತರಬೇತಿಗಳ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ನೀಡಲಾಗಿದೆ ಎಂದು ಮುಖ್ಯೋಪಧ್ಯಾಯ ಶ್ರೀಮತಿ ಶ್ವೇತಾ ಬೂದಿ ಅಭಿಪ್ರಾಯ ಪಟ್ಟರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಶಿಕ್ಷಣ ಸಂಯೋಜಕ ಹಾಗೂ ತಾಲೂಕ ಎಸ್ ಎಸ್ ಎಲ್ ಸಿ ನೂಡಲ್ ಅಧಿಕಾರಿ ರವೀಂದ್ರ ಚೌಹಾಣ್ ಅವರು, "ಶಿಕ್ಷಕರ ಸಮರ್ಪಣೆ ಹಾಗೂ ವಿದ್ಯಾರ್ಥಿಗಳ ಪರಿಶ್ರಮದಿಂದ ಈ ಸಾಧನೆ ಸಾಧ್ಯವಾಗಿದೆ" ಎಂದು ಅಭಿಪ್ರಾಯಪಟ್ಟರು.

ಇನ್ನೊಬ್ಬ ಅತಿಥಿ ಬಾಲಪ್ಪ ಸಿರಿಗೆಮ್ ಮಾತನಾಡಿ, "ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪ್ರತಿಭಾಕಾರಂಜಿ ಹಾಗೂ ಕ್ರೀಡಾಕೂಟಗಳಲ್ಲಿ ಭಾಗವಹಿಸಿರುವುದು ಅವರ ಸರ್ವಾಂಗೀಣ ಬೆಳವಣಿಗೆಗೆ ಕಾರಣವಾಗಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪೋಷಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ, ಎಲ್ಲಾ ವಿದ್ಯಾರ್ಥಿಗಳನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು

# ಹಸುವಿನ ಮೇಲೆ ಹುಲಿ ಏಕಾಏಕಿ ದಾಳಿ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ತಾಲೂಕಿನ ಮುತ್ತುರಾಯನ ಹೊಸಹಳ್ಳಿ ಗ್ರಾಮದಲ್ಲ ಹಸುವಿನ ಮೇಲೆ ಹುಲಿ ದಾಳಿ ನಡೆಸಿ ಕೊಂದು ಹಾಕಿದ್ದು, ರೈತರಾದ ರವಿ ನೇತೃತ್ವದಲ್ಲಿ ಜನರು ಸೇರಿ

ಸತ್ತ ಹಸುವಿನ ಮೃತದೇಹವನ್ನು ಗ್ರಾಮದ ನಡು ರಸ್ತೆಯಲ್ಲಿಟ್ಟು ಬೆಂಕಿ ಹಚ್ಚಿ ರೈತರು ಪ್ರತಿಭಟನೆ ನಡೆಸಿರುತ್ತಾರೆ.



ಮುತ್ತುರಾಯನ ಹೊಸಹಳ್ಳಿ ಗ್ರಾಮದ ರೈತ ರವಿ ಎಂಬುವವರಿಗೆ ಸೇರಿದ ಹಸುವಿನ ಮೇಲೆ ಹುಲಿ ಏಕಾಏಕಿ ದಾಳಿ ನಡೆಸಿದೆ. ದಾಳಿಯಲ್ಲಿ ಹಸು ಸ್ಥಳದಲ್ಲೇ ಮೃತಪಟ್ಟಿದೆ. ಆಕ್ರೋಶಗೊಂಡ ರೈತರು, ಗೋಣಿಕೊಪ್ಪ–ವಿರಾಜಪೇಟೆ–ಹುಣಸೂರು ಮಾರ್ಗವಾಗಿ ಸಾಗುವ ಮುತ್ತುರಾಯನ ಹೊಸಹಳ್ಳಿಯ ಮುಖ್ಯ ರಸ್ತೆಯಲ್ಲಿ ಹಸುವಿನ ಮೃತದೇಹವಿಟ್ಟು, ಟೈರ್‌ಗೆ ಬೆಂಕಿ ಹಚ್ಚಿ ರಸ್ತೆ ತಡೆ ನಡೆಸಿರುತ್ತಾರೆ.

ಹುಣಸೂರು ಅರಣ್ಯ ಇಲಾಖೆ ಅಧಿಕಾರಿಗಳ ಸಂಪೂರ್ಣ ನಿರ್ಲಕ್ಷ್ಯದಿಂದ ಕಳೆದ ಕೆಲವು ತಿಂಗಳಲ್ಲಿ 25ಕ್ಕೂ ಹೆಚ್ಚು ಹಸು, ಕರು, ಮೇಕೆಗಳು ಹುಲಿ ದಾಳಿಗೆ ಬಲಿಯಾಗಿವೆ ಎಂದು ಆಕ್ರೋಶ ವ್ಯಕ್ತಪಡಿಸಿರುತ್ತಾರೆ.

**ಷರಾ:–** ಪದೇಪದೇ ದೂರು ನೀಡಿದರೂ ಅರಣ್ಯ ಇಲಾಖೆ ಕ್ರಮ ಕೈಗೊಂಡಿಲ್ಲ. ಬೋನು ಇಡುವುದಾಗಿ ಹೇಳಿ ಸುಮ್ಮನಾಗಿದ್ದಾರ ಎಂದು ಸ್ಥಳೀಯ ರೈತರು ಆರೋಪಿಸಿದ್ದಾರೆ.

ನಮ್ಮ ಜೀವನಾಧಾರವೇ ಜಾನುವಾರು. ಒಂದೊಂದೇ ದನ ಕಳೆದುಕೊಂಡರೆ ನಾವು ಬದುಕೋದು ಹೇಗೆ? ಪರಿಹಾರ ಕೊಟ್ಟರೆ ಸಾಕಾ? ಹುಲಿಯನ್ನು ಹಿಡಿದು ಕಾಡಿಗೆ ಬಿಡಿ, ಇಲ್ಲವೇ ನಮ್ಮನ್ನು ಕಾಡಿಗೆ ಕಳುಹಿಸಿ" ಎಂದು ರೈತ ಮಹಿಳೆಯರು ಅಕ್ರೋಶ ವ್ಯಕ್ತಪಡಿಸಿರುತ್ತಾರೆ.

ರಸ್ತೆ ತಡೆ ಪ್ರತಿಭಟನೆಯಿಂದ ಗೋಣಿಕೊಪ್ಪ–ಹುಣಸೂರು ಮಾರ್ಗದಲ್ಲಿ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತವಾಗಿರುತ್ತದೆ.

# ಐ.ಟಿ.ಐ ತರಬೇತಿ ಪ್ರವೇಶ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಾರವಾರ**

ಪ್ರಸ್ತಕ ಸಾಲಿನ ಐ.ಟಿ.ಐ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಇಲಾಖೆ ವೆಬ್‌ಸೈಟ್ ತಿತಿತಿ.ಛಿಣಜ.ಞಚಿಡಿಟಿಚಿಣಚಿಞಚಿ.ರಿಠತ.ಎಟಿ ಮೂಲಕ ಮೇ.8 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಮಹಿಳಾ ಅಭ್ಯರ್ಥಿಗಳಿಗೆ ವಾರ್ಷಿಕ ಬೋಧನಾ ಶುಲ್ಕ ವಿನಾಯತಿ ನೀಡಲಾಗಿದ್ದು, ವೆಲ್ಡರ್ ವೃತ್ತಿಗೆ 8ನೇ ತರಗತಿ ಪಾಸ್ ಅಥವಾ 10ನೇ ತರಗತಿ ಅನುತ್ತೀರ್ಣ ಆದವರು ಕೂಡಾ ಅರ್ಜಿ ಸಲ್ಲಿಸಬಹುದು.ಪ್ರವೇಶ ಪಡೆಯಬಯಸುವ ಅಭ್ಯರ್ಥಿಗಳು ಇಲೆಕ್ಟ್ರಿಕಲ್, ಫೀಟರ್, ಟ್ರ್ಯಾಕ್, ಟರ್ನರ್, ವೆಲ್ಡರ್ ವಿಷಯಗಳಿಗೆ ಹಾಗೂ ಮೆಕಾನಿಕಲ್ ಎಲೇಕ್ಟ್ರೀಕಲ್ ವೆಹಿಕಲ್, ಇಂಡಸ್ಟ್ರೀಯಲ್ ರೋಬೋಟಿಕ್ ಅಂಡ್ ಡಿಜಿಟಲ್ ಮ್ಯಾನಿಪ್ಯಾಕ್ಚರಿಂಗ್, ಟೇಕ್ನಿಶಿಯನ್, ಮ್ಯಾನಿ ಪ್ಯಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ ಅಂಡ್ ಅಟೋಮಷಿನ್, ಸಿಎನ್‌ಸಿ ಮಷಿನ್ ಟೆಕ್ನಿಷಿನ್, ವರ್ಚಲ್ ಅನಾಲಿಸಸ್ ಅಂಡ್ ಡಿಸೈನರ್, ಇಂಜಿನೀಯರಿಂಗ್ ಡಿಸೈನ್ ಟೆಕ್ನಿಷಿಯನ್ ಉದ್ಯೋಗ ಯೋಜನೆಯಲ್ಲಿನ ವೃತ್ತಿಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

# ಬಳ್ಳಾರಿ ಜಿಲ್ಲೆಯನ್ನು ಮಲೇರಿಯಾ ಮುಕ್ತವಾಗಿಸಲು ಸಂಕಲ್ಪ ಮಾಡೋಣ: ಡಾ.ಮರಿಯಂಬಿ ವಿ.ಕೆ



• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

"ಮಲೇರಿಯಾ ಅಂತ್ಯಗೊಳಿಸಲು ಸಂಕಲ್ಪ ಮಾಡೋಣ; ಇದು ನಮ್ಮಿಂದ ಸಾಧ್ಯವಿದೆ" ಎಂಬ ಘೋಷವಾಕ್ಯದೊಂದಿಗೆ ಜಿಲ್ಲೆಯನ್ನು 2027ರ ವೇಳೆಗೆ ಮಲೇರಿಯಾ ಮುಕ್ತಗೊಳಿಸಲು ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಜಿಲ್ಲಾ ವಿಬಿಡಿಸಿ ಅಧಿಕಾರಿಗಳಾದ ಡಾ.ಮರಿಯಂಬಿ ವಿ.ಕೆ ಅವರು ಹೇಳಿದರು.

ವಿಶ್ವಮಲೇರಿಯಾ ದಿನಾಚರಣೆ-2026ರ ಅಂಗವಾಗಿ ಸೋಮವಾರ ನಗರದ ಬಂಡಿಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಉದ್ಘಾಟನಾ ಕಾರ್ಯಕ್ರಮ ಹಾಗೂ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮಲೇರಿಯಾ ಪ್ಲಾಸ್ಮೋಡಿಯಂ ಎಂಬ ಪರಾವಲಂಬಿ ಸೂಕ್ಷ □□ ಜೀವಿಯಿಂದ ಉಂಟಾಗುತ್ತದೆ. ಇದು ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಹರಡುತ್ತದೆ. ಚಳಿ, ನಡುಕ, ಬಿಟ್ಟು ಬಿಟ್ಟು ಬರುವ ಜ್ವರ, ವಾಕರಿಕೆ ಮತ್ತು ಮೈ ಬೆವರುವುದು ಈ ರೋಗದ ಪ್ರಮುಖ ಲಕ್ಷಣಗಳಾಗಿವೆ. ಹಾಗಾಗಿ ಯಾವುದೇ ರೀತಿಯ ಜ್ವರವಿದ್ದರೂ ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ರಕ್ತ ಪರೀಕ್ಷೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ಮನೆಯ ಸುತ್ತಮುತ್ತ ಇಲಾಖೆ ವತಿಯಿಂದ ನಡೆಸುವ ಕೀಟನಾಶಕ ಸಿಂಪರಣೆಗೆ ಸಹಕರಿಸುವುದು. ಮಲಗುವಾಗ ಕಡ್ಡಾಯವಾಗಿ ಸೊಳ್ಳೆ ಪರದೆ ಬಳಸುವುದು ಮತ್ತು ಕಿಟಕಿಗಳಿಗೆ ಜಾಲರಿ ಅಳವಡಿಸುವುದು. ನೀರು ನಿಲ್ಲುವ ಸ್ಥಳಗಳಲ್ಲಿ ಲಾರ್ವಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಬಿಡುವ ಮೂಲಕ ಸೊಳ್ಳೆಗಳ ಉತ್ಪತ್ತಿ ತಡೆಯುವುದು ಸೇರಿದಂತೆ ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕಾರ್ಯಗಳಿಗೆ ಸಹಕರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಿಬಿಡಿಸಿ ಸಮಾಲೋಚಕ ಪ್ರತಾಪ್.ಹೆಚ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.


ವೇದಿಕೆಯಲ್ಲಿ ಬಂಡಿಹಟ್ಟಿ ವೈದ್ಯಾಧಿಕಾರಿಗಳಾದ ಡಾ.ಯಾಸ್ಮಿನ್, ಡಾ.ಫಾಮಿದಾ ಭಾನು, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾಗೇಂದ್ರಪ್ಪ, ಮರಿಬಸವನಗೌಡ, ನಾಗರಾಜ್, ಬಾಬುರಾವ್ ಹಾಗೂ ಬಳ್ಳಾರಿ ತಾಲ್ಲೂಕಿನ ಆರೋಗ್ಯ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು ಜಾಗೃತಿ ಜಾಥಾದಲ್ಲಿ ಪಾಲ್ಗೊಂಡು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

# ಶ್ರೀ ಮದ್ವಿರಾಟ ಪೋತಲೂರು ವೀರ ಬ್ರಹ್ಮೇಂದ್ರ ಸ್ವಾಮಿಗಳ ೩೩೩ನೇ ಆರಾಧನಾ ಮಹೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಸಮೀಪದ ಶ್ರೀರಾಮನಗರದ ಶ್ರೀ ವೀರ ಬ್ರಹ್ಮೇಂದ್ರ ಸ್ವಾಮಿಗಳ ದೇವಸ್ಥಾನದಲ್ಲಿ ಕಾಲಜ್ಞಾನಿ ಶ್ರೀ ಮದ್ವಿರಾಟ ಪೋತಲೂರು ವೀರ ಬ್ರಹ್ಮೇಂದ್ರ ಸ್ವಾಮಿಗಳವರ 333ನೇ ವಾರ್ಷಿಕ ಆರಾಧನಾ ಮಹೋತ್ಸವವು ಅಪಾರ ಭಕ್ತಾದಿಗಳ ನಡುವೆ ಅತ್ಯಂತ ಶ್ರದ್ಧೆ ಹಾಗೂ ಭಕ್ತಿಯಿಂದ ಜರುಗಿ-ತು. ಕಲಿಯುಗದಲ್ಲಿ ಶ್ರೀ ಮಹಾವಿಷ್ಣುವಿನ ಅಂಶವಾಗಿ ಅವತರಿಸಿದ ಶ್ರೀ ವೀರ ಬ್ರಹ್ಮೇಂದ್ರ ಸ್ವಾಮಿಗಳು ಭೂತ, ಭವಿಷ್ಯತ್ ಮತ್ತು ವರ್ತಮಾನ ಕಾಲದ ಜ್ಞಾನವನ್ನು ಭಕ್ತರಿಗೆ ಉಣಬಡಿಸಿ ಸನ್ಮಾರ್ಗದಲ್ಲಿ ನಡೆಸುತ್ತಿದ್ದಾರೆ ಎಂದು ದೇವಸ್ಥಾನ ಸಮಿತಿಯ ಅಧ್ಯಕ್ಷರಾದ ರಾಮ ಬ್ರಹ್ಮಂ ಈ ಸಂದರ್ಭದಲ್ಲಿ ತಿಳಿಸಿದರು. ರಾಭವ ನಾಮ ಸಂವತ್ಸರದ ವೈಶಾಖ ಶುದ್ಧ ದಶಮಿಯಂದು ಸ್ವಾಮಿಗಳು ಸಜೀವ ಸಮಾಧಿ ಹೊಂದಿದ ಸ್ಮರಣಾರ್ಥ ಈ ಉತ್ಸವವನ್ನು ಆಚರಿಸಲಾಗುತ್ತಿದ್ದು, ಸ್ವಾಮಿಗಳ ದ್ವಾದಶ ಮಂತ್ರ ಪಾರಾಯಣ ಮಾಡುವುದರಿಂದ ಸಕಲ ಕಷ್ಟಗಳು ದೂರವಾಗಿ ಸುಖ, ಶಾಂತಿ ಮತ್ತು ಸಮೃದ್ಧಿ ಪ್ರಾಪ್ತವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಧಾರ್ಮಿಕ ಕಾರ್ಯಕ್ರಮಗಳ ಅಂಗವಾಗಿ ವೇದಮೂರ್ತಿ ಅಶೋಕ್ ಹಾಗೂ ಪ್ರಧಾನ ಅರ್ಚಕರಾದ ನರಸಿಂಹಾಚಾರ್ ಅವರ ನೇತೃತ್ವದಲ್ಲಿ ಶ್ರೀ ವೀರ ಬ್ರಹ್ಮೇಂದ್ರ ಸ್ವಾಮಿಯವರ ಮೂಲ ವಿಗ್ರಹ ಹಾಗೂ ಪರಿವಾರ ದೇವರುಗಳಿಗೆ ಪಂಚಾಮೃತ ಅಭಿಷೇಕ ಮತ್ತು ವಿಶೇಷ ಪೂಜೆಗಳು ನಡೆದವು. ಶ್ರದ್ಧಾಳುಗಳ ಸಮ್ಮುಖದಲ್ಲಿ ಮಹಾ ಗಣಪತಿ ಹೋಮ ಹಾಗೂ ನವಗ್ರಹ ಹೋಮಗಳ ಪೂರ್ಣಾಹುತಿಯನ್ನು ಸಂಕಲ್ಪಿತ ದಂಪತಿಗಳು ನೆರವೇರಿಸಿದರು. ಧಾರ್ಮಿಕ ವಿಧಿವಿಧಾನಗಳ ನಂತರ ಭಕ್ತಾದಿಗಳಿಗೆ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು. ಈ ಭವ್ಯ ಆರಾಧನಾ ಮಹೋತ್ಸವದಲ್ಲಿ ವಿಶ್ವಕರ್ಮ ಸಮಾಜದ ಬಾಂಧವರು ಹಾಗೂ ನೂರಾರು ಭಕ್ತಾದಿಗಳು ಪಾಲ್ಗೊಂಡು ಗುರುಗಳ ಕೃಪೆಗೆ ಪಾತ್ರರಾದರು. ದೇವಸ್ಥಾನ ಸಮಿತಿ ಹಾಗೂ ಸದ್ಭಕ್ತ ಮಂಡಳಿಯ ವತಿಯಿಂದ ಕಾರ್ಯಕ್ರಮವು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಸಂಪನ್ನಗೊಂಡಿತು.



# ಐಪಿಎಸ್ ಅಧಿಕಾರಿ ಹರ್ಷ.ಪಿ.ಎಸ್ ಅವರಿಗೆ ಪಿಎಚ್.ಡಿ ಪದವಿ ಘೋಷಣೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ಕುವೆಂಪು ವಿಶ್ವವಿದ್ಯಾಲಯವು ವನ್ಯಜೀವಿ ಮತ್ತು ನಿರ್ವಹಣೆ ವಿಭಾಗದಲ್ಲಿ ನಡೆಸಿದ ಸಂಶೋಧನೆಗಾಗಿ ಬಳ್ಳಾರಿ ವಲಯ ಉಪಮಹಾನಿರೀಕ್ಷಕರು ಹಾಗೂ ಐಪಿಎಸ್ ಅಧಿಕಾರಿ ಹರ್ಷ.ಪಿ.ಎಸ್ ಅವರಿಗೆ ಡಾಕ್ಟರ್ ಆಫ್ ಫಿಲಾಸಫಿ (ಪಿಎಚ್.ಡಿ.) ಪದವಿಯನ್ನು ಘೋಷಿಸಿದೆ.

ಪಿ.ಎಸ್. ಹರ್ಷ ಅವರು, ಕುವೆಂಪು ವಿಶ್ವವಿದ್ಯಾಲಯದ ವನ್ಯಜೀವಿ ಮತ್ತು ನಿರ್ವಹಣಾ ವಿಭಾಗದ ಪ್ರಾಧ್ಯಾಪಕರಾದ ಡಾ.ವಿಜಯ ಕುಮಾರ ಅವರ ಮಾರ್ಗದರ್ಶನದಲ್ಲಿ "ನಾಗರಹೊಳೆ, ಬಂಡೀಪುರ ಮತ್ತು ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಹುಲಿಗಳ ಸಂಖ್ಯೆಯ ಸ್ಥಿರತೆ ಹಾಗೂ ಮಾನವ-ಹುಲಿ ಸಂಘರ್ಷ ಮತ್ತು ಅದರ ಪ್ರಭಾವಗಳ ಕುರಿತಾದ ಒಂದು ಅಧ್ಯಯನ" (A Study on Stability of Tiger Population in Nagarahole, Bandipur and BRT Tiger Reserves with special reference to Human-Tiger Conflicts and its impact) ಎಂಬ ಸಂಶೋಧನಾ ಪ್ರಬಂಧವನ್ನು ಮಂಡಿಸಿದ್ದರು.

ವಿಶ್ವವಿದ್ಯಾಲಯದ ಶೈಕ್ಷಣಿಕ ಮಂಡಳಿ ಮತ್ತು ಸಿಂಡಿಕೇಟ್ ಈ ಶಿಫಾರಸನ್ನು ಅಂಗೀಕರಿಸಿದ್ದು, ಮುಂಬರುವ ಘಟಿಕೋತ್ಸವದಲ್ಲಿ ಹರ್ಷ.ಪಿ.ಎಸ್ ಅವರು ಅಧಿಕೃತವಾಗಿ ಪದವಿ ಸ್ವೀಕರಿಸಲು ಅರ್ಹರಾಗಿದ್ದಾರೆ ಎಂದು ಕುವೆಂಪು ವಿಶ್ವವಿದ್ಯಾಲಯದ ಕುಲಸಚಿವರು (ಮೌಲ್ಯಮಾಪನ) ತಿಳಿಸಿದ್ದಾರೆ.

# ವಸತಿ ಶಾಲೆ ಹಾಗೂ ಪಿಯು ವಿಜ್ಞಾನ ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಸಂಡೂರು ತಾಲ್ಲೂಕಿನ ವಡ್ಡಿನಕಟ್ಟೆ ಗ್ರಾಮದಲ್ಲಿರುವ ಪರಿಶಿಷ್ಟ ವರ್ಗದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಹಾಗೂ ಉನ್ನತೀಕರಿಸಿದ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ 2026-27ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿಯುಸಿ (ವಿಜ್ಞಾನ ವಿಭಾಗ) ಪ್ರವೇಶ ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅಧಿಕೃತ ವೆಬ್‌ಸೈಟ್ ಃಣಣಠಿ://ಇಡಿಜು.ಇಚಿಡಿ-ಟಿಚಿಣಚಿಇಚಿ.ರಠಿತ.ಟಿ ಗೆ ಭೇಟಿ ನೀಡಬಹುದು. ಅರ್ಜಿ ಸಲ್ಲಿಸಲು ಏ.29 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಸಕ್ತ ವಿದ್ಯಾರ್ಥಿಗಳು ಹಾಗೂ ಪೋಷಕರು ಪ್ರಾಂಶುಪಾಲರಾದ ಶಂಕ್ರಪ್ಪ ಚಲವಾದಿ (ಮೊ.9611279510) ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದ್ದಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ-2 ಕಾರ್ಯಕ್ರಮದಲ್ಲಿ ಸಂತೋಷ್ ಲಾಡ್

# ಭವಿಷ್ಯದಲ್ಲಿ ಹೊಸ ಕನಿಷ್ಠ ವೇತನ ಜಾರಿಗೆ ಪ್ರಯತ್ನ: ಭರವಸೆ

**ಮಲ್ಲಮ್ಮ ನುಡಿ ವಾರ್ತೆ**

**ಬಳ್ಳಾರಿ,** ಸುಪ್ರೀಂಕೋರ್ಟ್ ಮಾರ್ಗಸೂಚಿಯಂತೆ, ಕಾರ್ಮಿಕರ ಆಹಾರ, ಬಟ್ಟೆ ಮತ್ತು ವಸತಿ ಅಗತ್ಯತೆಗಳನ್ನು ಪರಿಗಣಿಸಿ, ಚರ್ಚಿಸಿ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಹೊಸ ಕನಿಷ್ಠ ವೇತನ ಜಾರಿಗೆ ತರಲು ಪ್ರಯತ್ನಿಸಲಾಗುವುದು ಎಂದು ಕಾರ್ಮಿಕ ಸಚಿವ ಸಂತೋಷ್ ಎಸ್.ಲಾಡ್ ಅವರು ಹೇಳಿದರು.

ಸಂಡೂರು ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಂಡೂರು ತಾಲ್ಲೂಕಿನ ತಾಳೂರು ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಭಾನುವಾರ ಏರ್ಪಡಿಸಿದ್ದ ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ-2 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವಲಯದ ಕಾರ್ಮಿಕರ ಏಳಿಗೆಗೆ ಬದ್ಧವಾಗಿದ್ದು, ಅಂಬೇಡ್ಕರ್ ಸಹಾಯಹಸ್ತ ಕಾರ್ಯಕ್ರಮದ ಮೂಲಕ ವಿವಿಧ ಅಸಂಘಟಿತ ವಲಯಗಳ ಜನರನ್ನು ಮುಖ್ಯವಾಹಿನಿಗೆ ತರಲಾಗುತ್ತಿದೆ ಎಂದರು.

ಅಮೆಜಾನ್, ಜೊಮ್ಯಾಟೊ, ಸ್ವಿಗ್ಗಿ ಮುಂತಾದ ಆನ್‌ಲೈನ್ ಕಂಪನಿಗಳಲ್ಲಿ ಕೆಲಸ ಮಾಡುವ ಡೆಲಿವರಿ ಬಾಯ್‌ಗಳ ಹಿತರಕ್ಷಣೆಗಾಗಿ ಭಾರತದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಗಿಗ್ ವರ್ಕರ್ಸ್ ಬಿಲ್ ಕಾನೂನು ತರಲಾಗಿದೆ. ಚಾಲಕರು ಮತ್ತು ಕ್ಲೀನರ್‌ಗಳ ಹಿತದೃಷ್ಟಿಯಿಂದ ಸ್ಮಾರ್ಟ್ ಕಾರ್ಡ್ ವಿತರಿಸುವ ಟ್ರಾನ್ಸ್‌ಪೋರ್ಟ್ ಬಿಲ್ ಯೋಜನೆ ಜಾರಿಯಲ್ಲಿದೆ. ಅದರಂತೆ ಚಿತ್ರರಂಗದ ಕಾರ್ಮಿಕರು ಹಾಗೂ ಮನೆಗೆಲಸ ಮಾಡುವ ಮಹಿಳೆಯರ ಸಾಮಾಜಿಕ ಭದ್ರತೆಗಾಗಿ ಸಿನಿ ಬಿಲ್ ಮತ್ತು ಡೊಮೆಸ್ಟಿಕ್ ಬಿಲ್ ನಂತಹ ಹೊಸ ಕಾನೂನುಗಳನ್ನು ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

ಇಡೀ ದೇಶದಲ್ಲೇ ಇಂತಹ ಬೃಹತ್ ಜನಪರ ಯೋಜನೆಗಳು ಎಲ್ಲಿಯೂ ಇಲ್ಲ. ಗ್ಯಾರಂಟಿ ಯೋಜನೆಗಳಿಗಾಗಿ ವರ್ಷಕ್ಕೆ ಸುಮಾರು 60,000 ಕೋಟಿ ರೂಪಾಯಿಗಳನ್ನು ವ್ಯಯಿಸಲಾಗುತ್ತಿದೆ. ಐದು ವರ್ಷಕ್ಕೆ ಇದು ಸುಮಾರು 3 ಲಕ್ಷ ಕೋಟಿ ರೂಪಾಯಿಗಳಾಗುತ್ತದೆ ಎಂದು ತಿಳಿಸಿದರು.



ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಡಿ ಸಂಡೂರು ತಾಲೂಕಿಗೆ ಮಾತ್ರ ಸುಮಾರು 660 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಇದು ಜನರ ಆರ್ಥಿಕ ಸ್ಥಿತಿಯನ್ನು ಸುಧಾರಿಸುತ್ತಿದೆ. ನಂಜುಂಡಪ್ಪ ವರದಿ ಮತ್ತು ಗೋಪಾಲ್ ಗೌಡರ ಸಮಿತಿಯ ಆಶಯದಂತೆ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕವಾಗಿ ಸಂಡೂರನ್ನು ಮೊದಲ ಸ್ಥಾನಕ್ಕೆ ತರುವ ಸಂಕಲ್ಪ ಮಾಡಲಾಗಿದೆ ಎಂದರು.

ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ.ವೆಂಕಟೇಶ್ ಅ.ಶಿಂಧಿಹಟ್ಟಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಅಸಂಘಟಿತ ವಲಯದ ಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ ಸರ್ಕಾರವು ಹತ್ತು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಕಾರ್ಮಿಕ ಸಚಿವರ ನೇತೃತ್ವದಲ್ಲಿ ಅಸಂಘಟಿತ ಕಾರ್ಮಿಕ ಕಲ್ಯಾಣ ಮಂಡಳಿಯು ಕಾರ್ಮಿಕರ ಕನಸುಗಳಿಗೆ ಆಸರೆಯಾಗಿ ನಿಂತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮೋಟಾರ್ ಸಾರಿಗೆ ಮತ್ತು ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಯಿತು ಹಾಗೂ ಸಂಡೂರು ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆಗೊಳಿಸಲಾಯಿತು. ಫಲಾನುಭವಿಗಳಿಗೆ ಸೌಲಭ್ಯ ಹಂಚಿಕೆ ಮತ್ತು ವಿವಿಧ ಸಾಧಕರಿಗೆ ಸನ್ಮಾನಿಸಲಾಯಿತು.

*ಆಕರ್ಷಿಸಿದ ಮಾಹಿತಿ ಮಳಿಗೆಗಳು:*

ಕಾರ್ಯಕ್ರಮದ ಆವರಣದಲ್ಲಿ ವಿವಿಧ ಇಲಾಖೆಗಳ ಯೋಜನೆಗಳು ಹಾಗೂ ಸರ್ಕಾರಿ ಕಾರ್ಯಕ್ರಮಗಳ ಕುರಿತ ಮಾಹಿತಿ ನೀಡುವ ಮಳಿಗೆಗಳನ್ನು ಹಾಕಲಾಗಿತ್ತು. ವೇದಿಕೆಯಲ್ಲಿ ಸಂಡೂರು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ಬಹುಗ್ರಾಮ ಕುಡಿಯುವ ನೀರು, ಶಿಕ್ಷಣ, ವಸತಿ, ರಸ್ತೆ ಸೇರಿದಂತೆ ಹಲವು ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ, ಕೈಗೊಂಡ ಯೋಜನೆಗಳ ಅಭಿವೃದ್ಧಿ ಕಾಮಗಾರಿಗಳ ಸಮಗ್ರ ಚಿತ್ರಣ ಒಳಗೊಂಡ ವಿಡಿಯೋ ತುಣುಕು ಪ್ರದರ್ಶಿಸಲಾಯಿತು. ಬಳಿಕ ಸಂವಿಧಾನ ಪ್ರಸ್ತಾವನೆ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ □□ಣ್, ಮಾಜಿ ವಿಧಾನಪರಿಷತ್ ಸದಸ್ಯ ಕೆ.ಎಸ್.ಎಲ್. ಸ್ವಾಮಿ, ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಷಯ ಲಾಡ್, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಉಪಾಧ್ಯಕ್ಷೆ ಆಶಾಲತಾ ಸೋಮಪ್ಪ, ಸಂಡೂರು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ನೂರುದ್ದೀನ್.ಎಸ್., ಸಂಡೂರು ತಹಶೀಲ್ದಾರ ಅನಿಲ್ ಕುಮಾರ್.ಜಿ, ಸಂಡೂರು ತಾಪಂ ಇಓ ಮಡಗಿನ ಬಸಪ್ಪ, ಬಳ್ಳಾರಿ ಉಪವಿಭಾಗದ ಕಾರ್ಮಿಕ ಅಧಿಕಾರಿ ಎಸ್.ಜಿ.ಖೈನೂರು ಸೇರಿದಂತೆ ಜನಪ್ರತಿನಿಧಿಗಳು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಅಪರಿಚಿತ ವ್ಯಕ್ತಿಯ ಶವ ಪತ್ತೆ ಗುರುತು ಪತ್ತೆಗೆ ಪೊಲೀಸರ ಮನವಿ

ಬಳ್ಳಾರಿ,ಏ.27(ಕರ್ನಾಟಕ ವಾರ್ತೆ):

ಬಳ್ಳಾರಿ ತಾಲ್ಲೂಕಿನ ಮೋಕಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅನಾಮಧೇಯ ವ್ಯಕ್ತಿಯೊಬ್ಬರ ಶವ ಪತ್ತೆಯಾಗಿದ್ದು, ವಾರಸುದಾರರ ಪತ್ತೆಗಾಗಿ ಪೊಲೀಸರು ಸಾರ್ವಜನಿಕರ ನೆರವು ಕೋರಿದ್ದಾರೆ.

**ಘಟನೆಯ ವಿವರ:**

ಏ.21 ರಂದು ಸಂಜೆ ಸುಮಾರು 4:30 ಗಂಟೆಯ ವೇಳೆಗೆ, ಶಿವಪುರ ಗ್ರಾಮದ ಹತ್ತಿರವಿರುವ ಎಸ್‌ಹೆಚ್ 132 ಬಳ್ಳಾರಿ-ಆಲೂರು ರಸ್ತೆಯ ಎಲ್‌ಎಲ್‌ಸಿ ಕಾಲುವೆಯ ಸೇತುವೆ ಪಕ್ಕದಲ್ಲಿ ಈ ಶವ ತೇಲುತ್ತಿರುವುದು ಕಂಡುಬಂದಿದೆ. ಮೃತದೇಹವು ನೀರಿನಲ್ಲಿ ಬೋರಲಾಗಿ ಬಿದ್ದಿದ್ದು, ಪೊಲೀಸರು ಸ್ಥಳಕ್ಕೆ ಧಾವಿಸಿ ಮೃತದೇಹವನ್ನು ಪರಿಶೀಲನೆ ನಡೆಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ವ್ಯಕ್ತಿಯು ಆಕಸ್ಮಿಕವಾಗಿ ಕಾಲುವೆ ನೀರಿಗೆ ಬಿದ್ದು ಮೃತಪಟ್ಟಿರಬಹುದು ಎಂದು ಅಂದಾಜಿಸಲಾಗಿದೆ.

**ಮೃತನ ಚಹರೆ ಮಾಹಿತಿ:**

ವಯಸ್ಸು ಅಂದಾಜು 30 ರಿಂದ 35 ವರ್ಷ, ಎತ್ತರ ಸುಮಾರು 5.5 ಅಡಿ, ಸದೃಢ ಮೈಕಟ್ಟು, ತಿಳಿ-ಬಿಳಿ ಬಣ್ಣದ ದಪ್ಪ ಗೆರೆಗಳುಳ್ಳ ಪೂರ್ಣ ತೋಳಿನ ಅಂಗಿ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿದ್ದಾರೆ.

ಮೃತನ ಮೂಗು, ತುಟಿ ಹಾಗೂ ಎರಡು ಕಾಲುಗಳ ಚರ್ಮವನ್ನು ಜಲಚರ ಪ್ರಾಣಿಗಳು ತಿಂದಿರುವ ಗುರುತುಗಳಿವೆ. ಇನ್ನುಳಿದಂತೆ ದೇಹದ ಮೇಲೆ ಯಾವುದೇ ಗುರುತುಗಳು ಮೇಲ್ನೋಟಕ್ಕೆ ಕಂಡುಬಂದಿಲ್ಲ.

ಮೃತನ ಹೆಸರು ಅಥವಾ ವಿಳಾಸದ ಬಗ್ಗೆ ಯಾವುದೇ ಮಾಹಿತಿ ಲಭ್ಯವಾದಲ್ಲಿ ಬಳ್ಳಾರಿ ಜಿಲ್ಲಾ ಪೊಲೀಸ್ ಅಧೀಕ್ಷಕರು-08392-258100, ಸಿರುಗುಪ್ಪ ಪೊಲೀಸ್ ಉಪ ಅಧೀಕ್ಷಕರು-ಮೊ.9480803021, ಪಿ.ಡಿ ಹಳ್ಳಿ ವೃತ್ತದ ವೃತ್ತ ನಿರೀಕ್ಷಕರು-ಮೊ.9480803031, ಮೋಕಾ ಪೊಲೀಸ್ ಠಾಣೆ-0892293228, 9480803050 ಗೆ ಸಂಪರ್ಕಿಸಬಹುದಾಗಿದೆ.

# ಹಜ್ ಯಾತ್ರಿಗಳಿಗೆ ಶಾಲು ಗುಲಾಬಿ ಹೂವಿನ ಹಾರ ಹೊದಿಸಿ ಸನ್ಮಾನ



**ಮಲ್ಲಮ್ಮ ನುಡಿವಾರ್ತೆ ಹುಣಸೂರು**


ಹಜ್ ಯಾತ್ರಿಗಳಿಗೆ ನಿಮ್ಮ ಪುಣ್ಯದ ದಿವಸಗಳನ್ನು ಯಾವ ರೀತಿ ಪ್ರಾರ್ಥನೆ ಮಾಡಬೇಕು ಹಾಗೂ ಸಮಯವನ್ನು ಇತ್ಯಾದಿ ಮಾಡದೆ ನೀವು ಸೂಕ್ಷ್ಮವಾದ ಸಮಯ ನೀಡಿ ಅಲಹಾನಲ್ಲಿ ವಿಶೇಷ ಪ್ರಾರ್ಥನೆಯಲ್ಲಿ ಸಲ್ಲಿಸಬೇಕೆಂದು ದಾವತೆ ಇಸ್ಲಾಮಿ ರಾಜ್ಯದ ಮುಖ್ಯಸ್ಥರಾದ ಸಲೀಂ ಅತ್ತಾರಿ ತಿಳಿಸಿದ್ದಾರೆ

ನಗರ ಬಜಾರ್ ರಸ್ತೆಯಲ್ಲಿರುವ ಜಾಮಿಯಾ ಮಸೀದಿಯಲ್ಲಿ ಸಮಿತಿ ವತಿಯಿಂದ ತಾಲೂಕಿನ ಹಜ್ ಯಾತ್ರಿಗಳಿಗೆ ಏರ್ಪಡಿಸಲಾಗಿದ್ದ ಹಜ್ ಯಾತ್ರಿಗಳಿಗೆ ತೆರಳುತ್ತಿರುವ ಯಾತ್ರಿಗಳಿಗೆ ಶಾಲು ಗುಲಾಬಿ ಹೂವಿನ ಹಾರ ಹೊದಿಸಿ ಹಾಗೂ ಯಾತ್ರಿಗಳಿಗೆ ವಿಶೇಷ ಧಾರ್ಮಿಕ ಪುಸ್ತಕವನ್ನು ನೀಡಿ ಸನ್ಮಾನಿಸಿ ಗೌರವಿಸಿಲಾಯಿತು ನಂತರ ಕಾರ್ಯಕ್ರಮದಲ್ಲಿ ಮಾತನಾಡಿ ಪ್ರತಿಯೊಬ್ಬರಿಗೂ ಕೂಡ ಅಲ್ಲಾನಲ್ಲಿ ಧ್ರುವ ಮಾಡಬೇಕು ನೀವು ತೆರಳುತ್ತಿರುವ ಪುಣ್ಯದ ಸ್ಥಳ ಈ ತಿಂಗಳು ಅತಿ ಹೆಚ್ಚು ತಾಪಮಾನ ಇಲ್ಲೇ ಇರುವುದರಿಂದ ಅಲ್ಲಿ ಅಲ್ಲಿ ಇನ್ನೂ ಅತಿ ಹೆಚ್ಚು ತಾಪಮಾನ ಇರುತ್ತದೆ ಯಾರೂ ಕೂಡ ಹೆದರದೆ ತಮ್ಮ ಭಕ್ತಿ ಧೇಯಿಂದ ಅಲ್ಲ ನಲ್ಲಿ ಪ್ರತಿಯೊಬ್ಬರಿಗೂ ನಾಗರಿಕರಿಗೆ ದುವಾ ಮಾಡಿ ನೀವು ಹೋಗಿರುವ ಧಾರ್ಮಿಕ ಸ್ಥಳಕ್ಕೆ ಅಲ್ಲಾನು ನಿಮಗೆ ಒಂದು ಉನ್ನತ ಮಟ್ಟ ಸೂಕ್ಷ್ಮವಾದ ಅವಕಾಶವನ್ನು ನೀಡಿದ್ದಾನೆ ಆದ್ದರಿಂದ ಪುಣ್ಯದ ಕೆಲಸಗಳನ್ನು ದಯೆ ಭಕ್ತಿ ಪೂರ್ವಕವಾಗಿ ಹೃದಯವಂತಿಕೆಯಿಂದ ಸಂಪೂರ್ಣವಾಗಿ ಹಜ್ ಯಾತ್ರೆ ಸಂಪೂರ್ಣ ಯಶಸ್ವಿಯಾಗಲಿ ಎಂದು ನಾನು ಆಶಿಸುತ್ತೇನೆ ಎಂದರು ತಾಲೂಕಿನ ಹಜ್ ಯಾತ್ರಿಗಳಿಗೆ ತರಡುತ್ತಿರುವ ರವರಿಗೆ ಮಕ್ಕ ಮದೀನ ಚಿತ್ರೀಕರಣ ಪರದೆಯ ಮೂಲಕ ತೋರಿಸಿ ಯಾವ ಸ್ಥಳದಲ್ಲಿ ಇಲ್ಲಿ ಬರುತ್ತದೆ ದರ್ಶನ ಹೇಗೆ ಮಾಡಬೇಕು ನಾವು ಹೇಗಿರಬೇಕು ಹೋಗೆ ಸೂಕ್ಷತಿ ಸೂಕ್ಷ್ಮ ರೀತಿಯಲ್ಲಿ ಅರಿವು ಮೂಡಿಸಿದ್ದಾರೆ ಯಾತ್ರಿಗಳು ನೀವು ಇಲ್ಲಿಂದ ಹೊರಡುವ ಮುಂಚೆ ನಿಮ್ಮ ಸಕಲ ಸಿದ್ಧತೆಗಳನ್ನು ಮಾಡಿಕೊಂಡು ತಯಾರಾಗಬೇಕು ಹಾಗೂ ಹಜ್ ಯಾತ್ರಿಗಳಿಗೆ ವಿಶೇಷ ಶಿಬಿರವನ್ನು ಮಾರ್ಗದರ್ಶನ ನೀಡಲಾಯಿತು

ಈ ಸಂದರ್ಭದಲ್ಲಿ ಜಾಮಿಯಾ ಮಸೀದಿಯ ಅಧ್ಯಕ್ಷರಾದ ಹಜರತ್ ಜಾನ್ ಮಾತನಾಡಿದ್ದಾರೆ ಉಪಾಧ್ಯಕ್ಷರಾದ ಮೊಹಮ್ಮದ್ ಅಮರ್ ಕಾರ್ಯದರ್ಶಿ ಶಾಜಮ ಜಂಟಿ ಕಾರ್ಯದರ್ಶಿ ಹೀನಾಯತ್ ಉಲ್ಲಾ ಖಾನ್ ಸದಸ್ಯರಾದ ಮಕಸೂದ್ ಅಲಿ ಖಾನ್ ಅಫ್ರೋಜ್ ಅಹ್ಮದ್ ಬಶೀರ್ ಅಹ್ಮದ್ ಮೊಹಮ್ಮದ್ ಅಲಿ ಫಜಲ್ ಮಹಮ್ಮದ್ ಫಜಲ್ ಜಾಗೀರ್ದಾರ್ ಬಾಬು ಸೈಯದ್ ರಿಜ್ವಾನ್ ಮಸೀದಿಯ ಮುಖ್ಯ ಗುರುಗಳಾದ ಶಾಲಾಂ ಕಿರಿಯ ಗುರುಗಳಾದ ಖಯಾಮ್0 ಮುದ್ದೀನ್ ಮೊಹಮ್ಮದ್ ರಫಿ ಆಝುಮ್ ಅಮ್ಜದ್ ಶರೀಫ್

# ಏ. ೩೦ ರಿಂದ ಎರಡನೇ ಹಂತದ ದ್ವಿತೀಯ ಪಿಯುಸಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

**ಮಲ್ಲಮ್ಮ ನುಡಿವಾರ್ತೆ**



**ಕೊಪ್ಪಳ** : ಎರಡನೇ ಹಂತದ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗಳು ಏಪ್ರಿಲ್ 30 ರಿಂದ ಮೇ 13 ರವರೆಗೆ ಕೊಪ್ಪಳ ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆ-2ರ ಪರೀಕ್ಷೆಗಳು ಏಪ್ರಿಲ್ 30 ರಿಂದ ಮೇ 13 ರವರೆಗೆ ಬೆಳಿಗ್ಗೆ 10 ಗಂಟೆ ಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಜಿಲ್ಲೆಯ ಕೊಪ್ಪಳದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು, ಗಂಗಾವತಿಯ ಬಾಲಕರ ಸರಕಾರಿ ಪದವಿ ಪೂರ್ವ ಕಾಲೇಜು, ಕುಷ್ಟಗಿಯ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು, ಯಲಬುರ್ಗಾದ ಸರಕಾರಿ ಪದವಿ ಪೂರ್ವ ಕಾಲೇಜು ಮತ್ತು ಕಾರಟ-ಗಿಯ ಸರಕಾರಿ ಪದವಿ ಪೂರ್ವ ಕಾಲೇಜು,

ಈ ಐದು ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಪರೀಕ್ಷೆಗಳನ್ನು ಸುಗಮ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ನಿಷೇಧಾಜ್ಞೆ ಜಾರಿಯನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ. ಮೊಬೈಲ್, ಪೇಜರ್, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ನವಲಕಲ್ ಪ್ರೌಢಶಾಲೆ ಸೃಷ್ಟಿ ವಿದ್ಯಾರ್ಥಿ ಪ್ರಥಮ ಸ್ಥಾನ : ಶಿಕ್ಷಕರು ಹರುಷ ವ್ಯಕ್ತಪಡಿಸಿದರು.

**ಮಲ್ಲಮ್ಮ ನುಡಿ ವಾರ್ತೆ ಸಿರವಾರ:**



2025-26ನೇ ಸಾಲಿನ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀ-ಕ್ಷೆಯ ಫಲಿತಾಂಶದಲ್ಲಿ ಸೃಷ್ಟಿ ವಿ ವಿ ತಂದೆ ವೆಂಕಟೇಶ ವಿದ್ಯಾರ್ಥಿನಿಯು ಶೇಕಡಾ 89.12 ಅಂಕಗಳನ್ನು ಗಳಿಸಿ ಉಊಖ ನವಲಕಲ್ ತಾ.ಸಿರವಾರ ಜಿ.ರಾಯಚೂರು ಶಾಲೆಗೆ ಪ್ರಥಮ ಸ್ಥಾನ ಹಾಗೂ ರಾಜ್ಯದ ಡಿಸ್ಟಿಂಕ್ಷನ್ ಪಡೆದುಕೊಂಡಿದ್ದಾರೆ.

ಶಿಕ್ಷಕರ ಮಾರ್ಗದರ್ಶನ, ಕಠಿಣ ಪರಿಶ್ರಮ ಮತ್ತು ಶಿಸ್ತುಬದ್ಧ ಅಧ್ಯಯನದಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ವಿದ್ಯಾರ್ಥಿನಿಯು ತಿಳಿಸಿದ್ದಾರೆ. ಪೋಷಕರು, ಶಿಕ್ಷಕರು ಹಾಗೂ ಶಾಲಾ ಆಡಳಿತ ಮಂಡಳಿ ಈ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದು, ವಿದ್ಯಾರ್ಥಿಗೆ ಭವಿಷ್ಯದ ಶೈಕ್ಷಣಿಕ ಜೀವನ

ಶಾಲಾ ಮುಖ್ಯಶಿಕ್ಷಕರು ಮಾತನಾಡಿ, ಇದು ನಮ್ಮ ಶಾಲೆಗೆ ಹೆಮ್ಮೆಯ ಕ್ಷಣ. ವಿದ್ಯಾರ್ಥಿನಿಯ ಈ ಸಾಧನೆ ಇತರೆ ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಲಿದೆ. ಎಂದು ಶಿಕ್ಷಕರು ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದರು.

# ಮೇ 3ರಂದು ಸಾಮೂಹಿಕ ವಿವಾಹ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಮೇ 03 ತಾರೀಖು ದಿನದಂದು ಬಸನಗೌಡ ಫೌಂಡೇಷನ್ ವತಿಯಿಂದ ಮೇ 03 ರಂದು ತಾರೀಖು ದಿನದಂದು ಸಾಮೂಹಿಕ ವಿವಾಹ ಹಾಗೂ 5001ಮತ್ತೆದವರಿಗೆ (ಹೆಣ್ಣುಮಕ್ಕಳಿಗೆ) ಉಡಿ ತುಂಬುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಎಂದು ಎಂಎಲ್ಸಿ ಬಸನಗೌಡ ಬಾದರ್ಲಿ ತಿಳಿಸಿದರು

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ನಾನು ವಿಧಾನ ಪರಿಷತ್ ಸದಸ್ಯರಾಗಿ ಜನರಿಗೋಸ್ಕರ ಸೇವೆ ಸಲ್ಲಿಸಿರುವ ಕೈಪಿಡಿ ಪುಸ್ತಕವನ್ನು ಬಿಡುಗಡೆ ಮಾಡಲಾಗುತ್ತದೆ. ಎಲ್ಲಾ ಸರ್ವ ಧರ್ಮದ ಹೆಸರಿನಲ್ಲಿ ನಡೆಯುತ್ತಿರುವ ಸಾಮೂಹಿಕ ವಿವಾಹ ಒಂದೇ ವೇದಿಕೆ ಯಲ್ಲಿ ಕಾರ್ಯಕ್ರಮ ನಡೆಯಲಿದ್ದು. ಈ ಕಾರ್ಯಕ್ರಮ ಸಿಂಧನೂರಿನ ಇತಿಹಾಸ ಪ್ರಸಿದ್ಧವಾಗಲಿದೆ ಎಂದು ಹೇಳಿದರು.

ಹುಟ್ಟು ಸಾವಿನ ಮಧ್ಯೆದಲ್ಲಿ ಈ ಇಲ್ಲಿ ಸಾಮಾಜಿಕ ಸೇವೆಯಲ್ಲಿ ನಾವು ಎಲ್ಲಾ ಹಂತದ ಪರಿಸ್ಥಿತಿಯಲ್ಲಿ ಸಾಮಾಜಿಕ ಸೇವೆಯಲ್ಲಿ ಏನೋ ಬದಲಾವಣೆ

**5001 ಹೆಣ್ಣುಮಕ್ಕಳಿಗೆ ಉಡಿ ತುಂಬುವ ಕಾರ್ಯಕ್ರಮ : ಬಸನಗೌಡ**

ಮಾಡಬೇಕು ಅಂದುಕೊಂಡಿದ್ದೇವೆ ಅದನ್ನು ಮಾಡಿಕೊಂಡು ಬರುತ್ತಿದ್ದೇವೆ.ಇವತ್ತು ನಾವು ಕೃಷಿಯನ್ನೆ ನಂಬಿಕೊಂಡು ಬರುತ್ತಿದ್ದೇವೆ ಆದರೆ ಎರಡನೇ ಬೆಳೆ ಇಲ್ಲದೆ ರೈತಾಪಿ ವರ್ಗಳಾದ ನಾವೆಲ್ಲರೂ ಕಷ್ಟದಲ್ಲಿ ಇದ್ದಿದು ಹಾಗಾಗಿ ಯಾರಿಗೂ ಹೊಣೆ ಆಗಬಾರದು ಎಂದು ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಜೊತೆಗೆ ಸಿಂಧನೂರು ತಾಲೂಕು ಶಾಂತಿವಾಗಿದ್ದು. ಸಿಂಧನೂರು ತಾಲೂಕ ಶಾಂತಿಯಿಂದ ಕೂಡಿರಬೇಕು ಎಂದು 5001 ಅಕ್ಕ ತಾಯಂದಿರಿಗೆ ಉಡಿ ತುಂಬುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು ನಮ್ಮ ಸಿಂಧನೂರು ತಾಲ್ಲೂಕಿನ ಅಣ್ಣತಮ್ಮಂದಿರು ಹಾಗೂ ಅಕ್ಕತಂಗಿಯರು ಯುವಕರು ಹಿರಿಯ ನಾಗರಿಕರ ರೈತಾಪಿ ವರ್ಗ ಸೇರಿದಂತೆ ಎಲ್ಲಾ ಧರ್ಮದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ವಿಧಾನ ಪರಿಷತ್ ಸದಸ್ಯರು ಬಸನಗೌಡ ಬಾದರ್ಲಿ ಮನವಿ ಮಾಡಿದರು.ಈ ಸಂದರ್ಭದಲ್ಲಿ . ಶರಣಯ್ಯ ಸ್ವಾಮಿ ಕೋಟೆ. ವೆಂಕಟೇಶ್ ರಾಗಲಪರ್ವಿ. ಅಮರೇಶ ಗಿರಿಜಾಲಿ ವೀರುರಾಜ ಬೂದಿವಾಳ ಕ್ಯಾಂಪ್. ಅಮರೇಶ ಗೋರೆಬಾಳ ಚಂದ್ರ ರೆಡ್ಡಿ ಬಸಾಪುರ ಸೇರಿದಂತೆ ಇತರರು ಸುದ್ದಿಗೋಷ್ಠಿಯಲ್ಲಿ ಇದ್ದರು.

# ಸರ್ಕಾರ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲು ಒತ್ತಾಯ: ಎಂ ಗಂಗಾಧರ್



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಮಹಾನಂದ ಪರ್ನಿಚರ್ ಕರ್ನಾಟಕ ಎಂಟರ್ ಪ್ರೈಸೆಸ್ ಉತ್ಪಾದನೆ ಘಟಕ ಅನಧಿಕೃತ ಸಾಬೀತ ಸರ್ಕಾರ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲು ಪರಿಸರ ರಕ್ಷಣಾ ವೇದಿಕೆ ಸಿಂಧನೂರು ತಾಲೂಕು ಸಮಿತಿ ತಾಲೂಕು ತಹಶೀಲ್ದಾರ್ ಕಛೇರಿ ಮುಂದೆ ಪ್ರತಿಭಟನೆ ನಡೆಸಿದರು. ನಂತರ ತಾಲೂಕು ತಹಶೀಲ್ದಾರ್ ಅವರು ಮೂಲಕ ಜಿಲ್ಲಾಧಿಕಾರಿ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು

ನಂತರ ಪ್ರತಿಭಟನೆ ಕುರಿತು ಮಾತನಾಡಿದ ಪರಿಸರ ರಕ್ಷಣಾ ವೇದಿಕೆ ತಾಲೂಕು ಸಂಚಾಲಕ ಎಂ ಗಂಗಾಧರ್ ಅವರು ನಾವು "ಪರಿಸರ ರಕ್ಷಣಾ ವೇದಿಕೆ, ಸಿಂಧನೂರು" ಹಾಗೂ 4ನೇ ಮೈಲ್ ಕ್ಯಾಂಪ್ ನ ಸ್ಥಳೀಯ ನಿವಾಸಿಗಳು ಈ ಮೂಲಕ ನಿಮ್ಮ ಗಮನಕ್ಕೆ ತರಲು ಒತ್ತಾಯಿಸಿ ಸಿಂಧನೂರು ತಾಲೂಕಿನ ವಿರುಪಾಪುರ ಗ್ರಾಮ ಪಂಚಾಯತ್ ವ್ಯಾಪ್ತಿಯ 4ನೇ ಮೈಲ್ ಕ್ಯಾಂಪ್ ಸರ್ವೆ ನಂ, 38/*17 ಪ್ರದೇಶದಲ್ಲಿ ಸ್ಥಾಪಿಸಲಾಗಿದ್ದ ಮಹಾನಂದ ಪರ್ನಿಚರ್ ಮತ್ತು ಕರ್ನಾಟಕ ಎಂಟರ್ ಪ್ರೈಸೆಸ್ ಎರಡು ಉತ್ಪಾದನಾ ಘಟಕವು ಅನಧಿಕೃತವಾಗಿದೆ ಎಂಬುದು ಈಗಾಗಲೇ ಸಾಬೀತಾಗಿದ್ದು. ಇಷ್ಟು ವರ್ಷಗಳ ಕಾಲ ಸರ್ಕಾರದ ಕಾನೂನು ಗಾಳಿಗೆ ತೂರಿ ಗಅನಧಿಕೃತ ನಡೆಸಿ ಸರ್ಕಾರಕ್ಕೆ ಮೋಸ ಮಾಡಿ ಸುಮಾರು ಕೋಟ್ಯಂತರ ರೂಪಾಯಿ ವಹಿವಾಟು ಮಾಡದಿರುವುದು ಖಂಡಿಸಿ ಸರ್ಕಾರ ಅದನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಪರಿಸರ ರಕ್ಷಣಾ ವೇದಿಕೆ ಒತ್ತಾಯಿಸುತ್ತಿದೆ ಎಂದು ಆಗ್ರಹಿಸಿದರು. ನಂತರ ಯೋಗ ಗುರು ಎಂದು ಹೆಸರುವಾಸಿಯಾಗಿದ್ದ ಭಾಸ್ಕರ್ ರಾವ್ ಅವರು ಮಾತನಾಡಿದ ಅವರು ವಿರೂಪಾಪುರ ಗ್ರಾಮ ಪಂಚಾಯತ್ ಹಾಗೂ ಜೆಸ್ಕಾಂ ವಿದ್ಯುತ್ ಇಲಾಖೆಯ ಅಧಿಕಾರಿಗಳು ಆದೇಶ ಆಗಿ ಕಳೆದ 3 ತಿಂಗಳದ ನಂತರ ದಿ : 23.4.2026 ರಂದು ಘಟಕವನ್ನು ಬಂದ್ ಮಾಡಿರುವುದು ಶ್ಲಾಘನೀಯ ಕ್ರಮವಾಗಿದೆ.

ಆದಾಗ್ಯೂ, ಈ ಎರಡು ಅನಧಿಕೃತ ಪರಿಸರ ವಿರೋಧಿ ಘಟಕದ ಮಾಲೀಕರಾದ, ವಿ. ಲಕ್ಷ್ಮಿಕಾಂತ್ ಹಾಗೂ ಅವರ ಪತ್ನಿ ಮೋನಿಕಾ ಅವರು ಮತ್ತೆ ಅದೇ ಸ್ಥಳದಲ್ಲಿ "ಪರ್ನಿಚರ್ ಮಾರುಕಟ್ಟೆ" ಎಂಬ ಹೆಸರಿನಲ್ಲಿ ಪರವಾನಿಗೆ ಪಡೆಯಲು ಗ್ರಾಮ ಪಂಚಾಯತ್ ಗೆ ಅರ್ಜಿ ಸಲ್ಲಿಸಿರುವುದು ಪರಿಸರ ರಕ್ಷಣಾ ವೇದಿಕೆ ಮತ್ತು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಖರ್ಚಿ ಮಾರುಕಟ್ಟೆ ಹೆಸರಿನಲ್ಲಿ ಈ ಮೂಲಕ ಒಳಗೊಳಗೇ ಮತ್ತೆ ಪರಿಸರ ವಿರೋಧಿ ಉತ್ಪಾದನಾ ಘಟಕವನ್ನು ನಡೆಸುವ ಯತ್ನ ನಡೆಯುತ್ತಿರುವುದು ಸ್ಪಷ್ಟವಾಗಿ ನಮಗೆ ಗೋಚರಿಸುತ್ತಿದೆ.

ಈ ಪ್ರದೇಶವು ಈ ಉತ್ಪಾದನ ಘಟಕಗಳು ಬರುವ ಮುಂಚೆ ಜನವಸತಿ ಪ್ರದೇಶವಾಗಿದ್ದು, ಇಲ್ಲಿ ಯಾವುದೇ ರೀತಿಯ ಮಾಲಿನ್ಯಕಾರಿ ಕೈಗಾರಿಕಾ ಚಟುವಟಿಕೆಗಳು ನಡೆಯುವುದು ಕಾನೂನುಬಾಹಿರ ಹಾಗೂ ಜನರ ಆರೋಗ್ಯಕ್ಕೆ ಅಪಾಯಕಾರಿಯಾಗುತ್ತದೆ ಎಂಬ ಸ್ಪಷ್ಟ ನಿಲುವು ನಮ್ಮದು.

ಹಾಗೆಯೇ ಕಾನೂನು ಬಾಹಿರ ಈ ಘಟಕವನ್ನು ಸ್ಥಗಿತಗೊಳಿಸಿದ ನಂತರ ಲಕ್ಷ್ಮಿಕಾಂತ್ ಹಾಗೂ ಇತರರು ದೂರು ನೀಡಿದವರ ಮೇಲೆ ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಮಾಡಿ, ಅವಾಚ್ಯ ಶಬ್ದಗಳಿಂದ ಬೈಯ್ಯುವುದು, ಹಣ ಕೇಳಲು ಬಂದಿರುವುದಾಗಿ, ರೌಡಿಗಳು ಎಂದು, ಪ್ರವಾಸಿ ಮಂದಿರಕ್ಕೆ ಕರೆಸಿ ಕೊಲೆ ಬೆದರಿಕೆ ಒಡ್ಡಿದ್ದಾರೆ ಎಂದು ಹಸಿ ಸುಳ್ಳು ಆರೋಪ ಮಾಡಿ ವ್ಯಕ್ತಿತ್ವದ ಗೌರವಕ್ಕೆ ದಕ್ಕೆ ತರುವ ಕೆಲಸವನ್ನು ಮಾಡುತ್ತಿದ್ದಾರೆ. ಇದರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಇಲಾಖೆ ಸ್ವಯಂ ಪ್ರಕರಣ ದಾಖಲು ಮಾಡಬೇಕೆಂದು ಒತ್ತಾಯಿಸುತ್ತೇವೆ.

ಇಂದು ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳಿಗೆ ಸಿಂಧನೂರು ತಹಸಿಲ್ದಾರ್ ಕಚೇರಿಯ ಶಿರಸ್ತೇದಾರ್ ವಾಣಿ ಅವರ ಮೂಲಕ ಮನವಿ ನೀಡಲಾಯಿತು. ಈ ಸಂಧರ್ಭದಲ್ಲಿ ಸಂಚಾಲಕರಾದ, ಎಂ ಗಂಗಾಧರ್, ಎಂ ಭಾಸ್ಕರ್ ಹಾಗೂ ಕನಕಪ್ಪ ಮುರಣಿ ಮಾತನಾಡಿದರು. 4ನೇ ಮೈಲ್ ಕ್ಯಾಂಪ್ ನಿವಾಸಿಗಳಾದ, ನೀರುಪಾದಿ, ಹನುಮಂತ, ಧರಗಯ್ಯ, ಶರಣಪ್ಪ, ಹೆಚ್ ಆರ್ ಹೊಸಮನಿ, ನಾಗರಾಜ್, ಮುತ್ತಪ್ಪ, ರಾಯಪ್ಪ, ಮುದಿಯಪ್ಪ, ರಂಗಪ್ಪ, ಸಂಗಮೇಶ, ರಾಜಪ್ಪ, ಆಂಜನೇಯ, ಬಾಲಪ್ಪ ಸೇರಿದಂತೆ ಇತರರು ಇದ್ದರು.

# ಬೇಸಿಗೆಯಲ್ಲಿ ಆರೋಗ್ಯದ ರಕ್ಷಣೆ: ಸಾರ್ವಜನಿಕರಿಗೆ ಇಲಾಖೆಯಿಂದ ಮುಂಜಾಗ್ರತ ಕ್ರಮ

• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ



ಕೊಪ್ಪಳ ಜಿಲ್ಲೆಯಾದ್ಯಂತ ಪ್ರಸ್ತುತ ದಿನಗಳಲ್ಲಿ ಬಿಸಿಲಿನ ಪ್ರಕರತೆ ಮತ್ತು ತೀವ್ರತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ದರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಲು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸಾರ್ವಜನಿಕರಿಗೆ ಆರೋಗ್ಯ ಕುರಿತು ಪ್ರಮುಖ ಸಲಹೆಗಳನ್ನು ನಿ ಿ **ಸಮಯದಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳಲು ಪ್ರಮುಖ ಆರೋಗ್ಯ ಸಲಹೆಗಳನ್ನು ಪಾಲಿಸುವುದು ಅತ್ಯವಶ್ಯಕವಾಗಿದ್ದು, ಅವುಗಳು ಇಂತಿವೆ.**

- **ನೀರಿನ ಸೇವನೆ: ಈ ಸಮಯದಲ್ಲಿ ಹೆಚ್ಚು ನೀರಿನ ಸೇವನೆ ಮಾಡಬೇಕು. ಬಾಯಾರಿಕೆ ಇಲ್ಲದಿದ್ದರೂ ಸಹ ದಿನವಿಡೀ ಸಾಕಷ್ಟು ನೀರು ಕುಡಿಯುತ್ತಿರಬೇಕು.**
- **ತಂಪು ಪಾನೀಯಗಳ ಆಯ್ಕೆ: ಬೇಸಿಗೆ ಸಮಯದಲ್ಲಿ ನಿಂಬೆ ನೀರು, ಮಜ್ಜಿಗೆ, ಎಳೆನೀರು ಮತ್ತು ಮನೆಯಲ್ಲಿ ತಯಾರಿಸಿದ ಪಾನೀಯಗಳನ್ನು ಹೆಚ್ಚಾಗಿ ಬಳಸುವುದು ಸೂಕ್ತವಾಗಿದೆ.**
- **ಆಹಾರ ಕ್ರಮ: ಸೌತೆಕಾಯಿ, ಕಲ್ಲಂಗಡಿ, ಕಿತ್ತಳೆ ಹಾಗೂ ದ್ರಾಕ್ಷಿಯಂತಹ ನೀರಿನ ಅಂಶ ಹೆಚ್ಚಿರುವ ಹಣ್ಣು– ತರಕಾರಿಗಳನ್ನು ಹೆಚ್ಚು ಸೇವಿಸಬೇಕು.**
- **ಬಟ್ಟೆ ಧರಿಸುವುದು: ಹಗುರವಾದ, ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸುವುದು ಸೂಕ್ತ.**
- **ಹೊರಹೋಗುವಾಗ ಜಾಗ್ರತೆ: ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಬಿಸಿಲಿನಲ್ಲಿ ಛತ್ರಿ, ಟೋಪಿ, ಕಪ್ಪು ಕನ್ನಡಕ ಹಾಗೂ ಚಪ್ಪಲಿಗಳನ್ನು ಬಳಸಬೇಕು.**
- **ಪ್ರಥಮ ಚಿಕಿತ್ಸೆ: ಬಿಸಿಲಿನಿಂದ ಯಾರಾದರೂ ಪ್ರಜ್ಞೆತಪ್ಪಿದರೆ, ತಕ್ಷಣ ಅವರಿಗೆ ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು ಮತ್ತು ಒದ್ದೆ ಬಟ್ಟೆಯಿಂದ ಅವರ ಮೈ ಒರೆಸಬೇಕು ಹಾಗೂ ವೈದ್ಯರನ್ನು ಸಂಪರ್ಕಿಬೇಕು.**
- **ಸಭೆ–ಸಮಾರಂಭ: ಹೊರಾಂಗಣ ಕಾರ್ಯಕ್ರಮಗಳನ್ನು ಸಾಧ್ಯವಾದಷ್ಟು ಬೆಳಗ್ಗೆ ಅಥವಾ ಸಂಜೆ ಆಯೋಜಿಸಿ, ಜನರಿಗೆ ನೆರಳು ಮತ್ತು ನೀರಿನ ವ್ಯವಸ್ಥೆ ಕಲ್ಪಿಸಬೇಕು.**
- **ಪ್ರಾಣಿಗಳ ರಕ್ಷಣೆ: ಬೇಸಿಗೆಯಲ್ಲಿ ಸಾಕು ಪ್ರಾಣಿಗಳ ಮೇಲೆಯು ನಿಗಾ ವಹಿಸುವುದು ಅತ್ಯವಶ್ಯಕವಾಗಿದ್ದು, ಅವುಗಳನ್ನು ನೆರಳಿನಲ್ಲಿರಿಸಿ. ಪ್ರಾಣಿಗಳಿಗೆ ಕುಡಿಯಲು ಸಾಕಷ್ಟು ನೀರು ಒದಗಿಸಬೇಕು.**
- **ವಾಹನಗಳ ಜಾಗ್ರತೆ: ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಒಬ್ಬರೇ ಬಿಟ್ಟು ಹೋಗಬೇಡಿ.**
- **ತಪ್ಪಿಸಬೇಕಾದವು: ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಅತಿಯಾದ ಚಹಾ, ಕಾಫಿ ಮತ್ತು ಕಾರ್ಬೊನೇಟೆಡ್ ತಂಪು ಪಾನೀಯಗಳನ್ನು ಸೇವಿಸಬೇಡಿ.**
- **ವಿಶೇಷವಾಗಿ ಕೆರೆ, ಬಾವಿ ಅಥವಾ ಕಾಲುವೆಗಳ ಹತ್ತಿರ ಮಕ್ಕಳು ಹೋಗದಂತೆ ನೋಡಿಕಳ್ಳಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಟಿ. ಲಿಂಗರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ಹಸ್ತಪ್ರತಿ ದಾಖಲೆಗಳ ಸಮೀಕ್ಷೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಭಾರತ ಸರ್ಕಾರದ ಕೇಂದ್ರ ಸಂಸ್ಕೃತಿ ಮಂತ್ರಾಲಯದ ವತಿಯಿಂದ ಜ್ಞಾನ ಭಾರತಮ್ ಮಿಷನ್ ಯೋಜನೆಯಡಿ ದೇಶದಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ರಗಳು, ಹಸ್ತಪ್ರತಿಗಳು ಹಾಗೂ ದಾಖಲೆಗಳ ಸಮಗ್ರ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಇವುಗಳನ್ನು ಇಂದಿನ ತಂತ್ರಜ್ಞಾನ ಬಳಸಿ ಶಾಶ್ವತವಾಗಿ ಸಂರಕ್ಷಿಸುವ ಉದ್ದೇಶದಿಂದ ಹಸ್ತಪ್ರತಿಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುದಾನ ಹಾಗೂ ಪ್ರಕಟಣೆ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಾಗುತ್ತಿದ್ದು, ಭವಿಷ್ಯದ ಪೀಳಿಗೆಗೆ ಜ್ಞಾನಸಂಪತ್ತನ್ನು ಉಳಿಸಿ ಬಳಸಿಕೊಳ್ಳುವ ಅವಕಾಶ ಕಲ್ಪಿಸಲಾಗುತ್ತಿದೆ. ಈ ಮಹತ್ವದ ಜ್ಞಾನ ಭಾರತ ಮಿಷನ್ ಯೋಜನೆಯನ್ನು ರಾಜ್ಯದಲ್ಲಿಯೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರದಿಂದ ನಿರ್ದೇಶನ ನೀಡಲಾಗಿದೆ. ಇದರ ಭಾಗವಾಗಿ ಹಸ್ತಪ್ರತಿಗಳ ಸಮಗ್ರ ಸರ್ವೆ ಕಾರ್ಯವನ್ನು ಯಶಸ್ವಿಯಾಗಿ ಕೈಗೊಳ್ಳುವ ಉದ್ದೇಶ ಹೊಂದಲಾಗಿದೆ.

ಈ ಹಿನ್ನಲೆಯಲ್ಲಿ ಬಾಗಲಕೋಟೆ ಜಿಲ್ಲೆಯ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಲ ಬಳಿ ಹಸ್ತಪ್ರತಿಗಳ ಸಂಗ್ರಹವಿದ್ದಲ್ಲಿ, ಉಪನಿರ್ದೇಶಕರು ಪ್ರವಾಸೋದ್ಯಮ ಇಲಾಖೆ, ಕೊಠಡಿ ಸಂ.137, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಕಚೇರಿಗೆ ಅಥವಾ ದೂರವಾಣಿ ಸಂ.7829538950, 7338628536ಗೆ ಮಾಹಿತಿ ನೀಡುವಂತೆ ಉಪ ನಿರ್ದೇಶಕರಾದ ಜಿ.ಎಸ್.ಹಿತ್ತಲಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾ.ಪಂ ಸದಸ್ಯರ ಸ್ಥಾನ ಕರಡು ಪ್ರಕಟಣೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕರ್ನಾಟಕ ರಾಜ್ಯದ ಗ್ರಾಮ ಪಂಚಾಯತಿಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿರುವ ಕರಡು ಪ್ರಕಟಣೆಗೆ ಸಾರ್ವಜನಿಕರಿಂದ ಆಕ್ಷೇಪಣೆಯನ್ನು ಸಲ್ಲಿಸುವ ಅವಧಿಯನ್ನು ಮೇ 2ರ ಸಂಜೆ 5.30 ವರೆಗೆ ವಿಸ್ತರಿಸಲಾಗಿದೆ. ಮುಂದಿವರೆದು ರಾಜ್ಯ 31 ಜಿಲ್ಲೆಗಳ ಗ್ರಾಮ ಪಂಚಾಯತಿಗಳ ಚುನಾಯಿತ ಸದಸ್ಯರ ಸಂ–ಖ್ಯೆಯ ಕುರಿತಂತೆ ಸ್ವೀಕರಿಸಿದ ಆಕ್ಷೇಪಣೆ, ಅಹವಾಲುಗಳ ಬಗ್ಗೆ ನಿಗದಿಪಡಿಸಿದ ದಿನಾಂಕ ಎಪ್ರೀಲ್ 27ಪರಿಶೀಲನಾ ಅದಾಲತ್‌ನ್ನು ಮುಂದೂಡಲಾಗಿದೆ.

ಮುಂದಿನ ಪರಿಶೀಲನಾ ಅದಾಲತ್‌ನ್ನು ಮೇ 5 ರಂದು ಬೆಳಿಗ್ಗೆ 11 ರಿಂದ ಮದ್ಯಾಹ್ನ 1.30 ವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಗೇಟ್ ನಂ.2, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560001 ಇಲ್ಲಿ ನಡೆಯಲಿದೆ. ಜಿಲ್ಲೆಯಿಂದ ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿದವರು ಅದಾಲತ್‌ನಲ್ಲಿ ಭಾಗವಹಿಸಲು ಇಚ್ಚಿಸಿದಲ್ಲಿ ತಮ್ಮ ಆಧಾರ ಅಥವಾ ಗುರುತಿನ ಚೀಟಿ ಇಲ್ಲವೇ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರತಕ್ಕದ್ದೆಂದು ಕರ್ನಾಟಕ ಪಂಚಾಯತ ರಾಜ್ ಸೀಮಾ ನಿರ್ಣಯ ಆಯೋಗದ ಸದಸ್ಯ ಕಾರ್ಯದರ್ಶಿ ಡಾ.ಎನ್.ನೋಮೇಶ್ ಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬದುಕು ಸೃಜನಾತ್ಮಕವಾಗಿ ರೂಪಿಸಿಕೊಳ್ಳಬೇಕು : ಆನಂದ ಹಲಕುರ್ಕಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ಆಧುನಿಕ ಜಗತ್ತಿನಲ್ಲಿಂದು ವಿದ್ಯಾರ್ಥಿಗಳು ಪುಸ್ತಕದ ಜ್ಞಾನಾರ್ಜನೆಯಿಂದ ದೂರ ಸರಿಯುವ ವಾತಾವರಣ ನಿರ್ಮಾಣವಾಗುತ್ತಿದೆ. ನಮ್ಮ ನೆಲದ ಜನಪದರು ಕಲೆ, ಸಂಸ್ಕೃತಿ ಸಂಪ್ರದಾಯವನ್ನು ಶ್ರೀಮಂತಗೊಳಿಸಿದ್ದು, ಬದುಕು ಸೃಜನಾತ್ಮಕವಾಗಿ ರೂಪಿಸಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಆನಂದ ಹಲಕುರ್ಕಿ ಅವರು ಹೇಳಿದರು.

ಅವರು ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಬಿ.ಎ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ 'ಸೃಜನೋತ್ಸವ' ಕಾರ್ಯಕ್ರಮವನ್ನು ಸಸಿಗೆ ನೀರುಣಿಸಿ ಉದ್ಘಾಟನೆ ಮಾಡಿ, ಮಾತನಾಡಿದರು

ಮುಂದುವರೆದು ಮಾತನಾಡಿ ನಮ್ಮ ಬದುಕು ಸುಂದರಗೊಳ್ಳಬೇಕಾದರೆ ಶಿಕ್ಷಣ, ಸಂಸ್ಕಾರ, ಪರಿಶ್ರಮ ಅಗತ್ಯವಾಗಿದೆ. ಗುರು ಹಿರಿಯರು ಹಾಕಿಕೊಟ್ಟಿರುವ ಮಾರ್ಗವನ್ನು ಜೀವನದಲ್ಲಿ ಅನುಸರಿಸಿಕೊಂಡಾಗ ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಅಧ್ಯಕ್ಷತೆವಹಿಸಿದ್ದ ಪ್ರಾಂಶುಪಾಲರಾದ ಡಾ.ಅರುಣಕುಮಾರ ಗಾಳಿ ಅವರು ಮಾತನಾಡಿ, ವಿದ್ಯಾರ್ಥಿಗಳು ಮೊದಲು ಜ್ಞಾನ ಸಂಪಾದನೆ ಮಾಡಿಕೊಂಡು ತಮ್ಮ ಬದುಕನ್ನು ರೂಪಿಸಿಕೊಳ್ಳಬೇಕು. ಸಮಾಜದಲ್ಲಿ ಆದರ್ಶವಾದ ವ್ಯಕ್ತಿತ್ವ ಕಟ್ಟಿಕೊಳ್ಳಲು ತಾವು ಪಡೆಯುವ ಶಿಕ್ಷಣದ ಮೂಲಕ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಪ್ರೊ.ಪರಸಪ್ಪ ತಳವಾರ, ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು. ಸಾಂಸ್ಕೃತಿಕ ವಿಭಾಗದ ಸಂಚಾಲಕರಾದ ಡಾ.ಸುಮಂಗಲಾ ಮೇಟಿ, ಕ್ರೀಡಾ ನಿರ್ದೇಶಕರಾದ ನೀಲಪ್ಪ ಕುರಿ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಸಂಪತ್ತ ಲಮಾಣಿ, ಇಂಗ್ಲೀಷ್ ವಿಭಾಗ ಮುಖ್ಯಸ್ಥ ಪ್ರೊ.ಶಿವಶಂಕರ ಪ್ರಸಾದ, ಭೂಗೋಳಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಮುಬೀನ್ ಬೆಳಗಾಂ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಸುಮನ್ ಮುಚಖಂಡಿ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಲೇಪಾಕ್ಷಯ್ಯ ಸೇರಿದಂತೆ ಬೋಧಕರು, ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಧೃತಿ ಕುರಬರ ಸ್ವಾಗತಿಸಿದರು, ಸಂಗಮೇಶ ಕಾಂಬಳೆ ಅತಿಥಿಗಳ ಪರಿಚಯ ಮಾಡಿದರು, ವಿಜಯಕುಮಾರ ಕೊಮಾರ ಮತ್ತು ಚಂದ್ರಮತಿ ಪಾಟೀಲ ನಿರೂಪಿಸಿದರು, ಶಿವಕುಮಾರ ಪಿಂಡರಕಿ ವಂದಿಸಿದರು.



ಫೋಟೊ : ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಬಿ.ಎ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ 'ಸೃಜನೋತ್ಸವ' ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಆನಂದ ಹಲಕುರ್ಕಿ ಅವರು ಸಸಿಗೆ ನೀರುಣಿಸಿ ಉದ್ಘಾಟಿಸಿ ಮಾತನಾಡಿದರು. ಪ್ರಾಂಶುಪಾಲರಾದ ಡಾ.ಅರುಣಕುಮಾರ ಗಾಳಿ ಅವರು ಅಧ್ಯಕ್ಷತೆ ವಹಿಸಿದ್ದರು.

## ಡಾ.ರಾಜ್‌ಕುಮಾರ್ ಜನ್ಮದಿನಾಚರಣೆ ಅಂಗವಾಗಿ ಕನ್ನಡ ಚಲನಚಿತ್ರ ಗೀತೆಗಳ ಗಾಯನ ರಸದೌತಣ

# ಸಂತನಂತೆ ಬದುಕಿದ ಮಹಾನ್ ವರನಟ: ಕೆ.ಇ.ಚಿದಾನಂದಪ್ಪ

ಮಲ್ಲಮ್ಮ ನುಚಿಡಿ ವಾರ್ತೆ ಬಳ್ಳಾರಿ:

ಡಾ. ರಾಜ್‌ಕುಮಾರ್ ಅವರು ಕೇವಲ ಒಬ್ಬ ನಟರಾಗಿರದೆ, ಸಂತನಂತೆ ಬದುಕಿದ ಮಹಾನ್ ಚೇತನ. ಸರಳ ಸಜ್ಜನಿಕೆಯ ಸಾಕಾರಮೂರ್ತಿಯಾಗಿದ್ದರು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿಡಾ.ರಾಜ್‌ಕುಮಾರ್ ಜನ್ಮದಿನಾಚರಣೆಯ ಅಂಗವಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕನ್ನಡ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಡಾ.ರಾಜ್ ಕುಮಾರ್ ಅವರಿಗೆ ಹಣ, ಅಧಿಕಾರ, ಯೌವನ ಮತ್ತು ರೂಪದಂತಹ ಎಲ್ಲ 'ಮದ'ಗಳು ಲಭ್ಯವಿದ್ದರೂ, ಅವುಗಳನ್ನು ಧಿಕ್ಕರಿಸಿ ವಿನಯವಂತಿಕೆಯಿಂದ ಬದುಕಿದವರು. ಅವರ ವ್ಯಕ್ತಿತ್ವವು ಎಲ್ಲ ಕಾಲಕ್ಕೂ ಎಲ್ಲ ಕಲಾವಿದರಿಗೂ ಮಾದರಿಯಾಗಿದೆ ಎಂದು ಬಣ್ಣಿಸಿದರು.

ಸಮಾಜದಲ್ಲಿ ಇಂದು ಜಾತಿ ರಾಜಕಾರಣ ಮತ್ತು ಪ್ರತಿಯೊಂದು ಸಾಧನೆಯ ಹಿಂದೆ ಜಾತಿಯನ್ನು ಹುಡುಕುವ ಪ್ರವೃತ್ತಿ ಹೆಚ್ಚಾಗಿದೆ. ಆದರೆ ಡಾ. ರಾಜ್‌ಕುಮಾರ್ ಅವರು ಜಾತಿಯನ್ನು ಮೀರಿ ಬೆಳೆದ 'ಜಾತ್ಯತೀತ ಜ್ಯೋತಿ'ಯಾಗಿದ್ದರು. ಅಧಿಕಾರದ ಆಸೆಗಾಗಿ ಅವರು ಎಂದೂ ರಾಜಕೀಯಕ್ಕೆ ಬರಲಿಲ್ಲ, ಬದಲಾಗಿ ಕನ್ನಡ ನಾಡಿನ ಕಲೆ ಮತ್ತು ಸಂಸ್ಕೃತಿಯ ಪ್ರತಿಬಿಂಬವಾಗಿ ಉಳಿದರು ಎಂದು ಸ್ಮರಿಸಿದರು.

ರಾಜ್‌ಕುಮಾರ್ ಅವರು ತಮ್ಮ ಸಿನಿಮಾಗಳ

ಮೂಲಕ ನಾಡಿಗೆ ಯೋಗದ ಮಹತ್ವವನ್ನು ತಿಳಿಸಿಕೊಟ್ಟವರು. 'ಬಂಗಾರದ ಮನುಷ್ಯ' ಚಿತ್ರದ ಮೂಲಕ ಕೃಷಿಯ ಮಹತ್ವವನ್ನು ಸಾರಿದ್ದರಿಂದ ಅನೇಕ ಯುವಕರು ಕೃಷಿಯತ್ತ ಆಕರ್ಷಿತರಾಗಿದ್ದರು. ಅವರು ಸಿನಿಮಾದಲ್ಲಿ ತೋರಿದ ಆದರ್ಶಗಳನ್ನು ತಮ್ಮ ನಿಜ ಜೀವನದಲ್ಲೂ ಪಾಲಿಸಿಕೊಂಡು ಬಂದವರು ಎಂದು ತಿಳಿಸಿದರು.

ಭಕ್ತ ಕುಂಬಾರ,

ಭಕ್ತ ಕನಕದಾಸ, ಸಂತ ತುಕಾರಾಂ, ಬೇಡರ ಕಣ್ಣಪ್ಪ ಮತ್ತು ರಾಘವೇಂದ್ರ ಸ್ವಾಮಿಗಳ ಪಾತ್ರಗಳಲ್ಲಿ ನಟಿಸುವ ಮೂಲಕ ಆ ವ್ಯಕ್ತಿತ್ವಗಳ ಬಗ್ಗೆ ಸಾಮಾನ್ಯ ಜನರಿಗೂ ತಿಳಿಯುವಂತೆ ಮಾಡಿದರು. ಅವರ ಸರಳ ಸಜ್ಜನಿಕೆಯೇ ಅವರಿಗೆ ಇಂದಿಗೂ ಅಪಾರ ಅಭಿಮಾನಿಗಳನ್ನು ಗಳಿಸಿಕೊಟ್ಟಿದೆ ಎಂದರು.

ಬಳ್ಳಾರಿಯ ಆಕಾಶವಾಣಿ ಎಫ್‌ಎಂ ಕೇಂದ್ರದ ಉದ್ಘೋಷಕರಾದ ಬಸವರಾಜ ಅಮಾತಿ ಅವರು ವಿಶೇಷ ಉಪನ್ಯಾಸ ನೀಡಿ, ಡಾ. ರಾಜ್‌ಕುಮಾರ್ ಅವರು ಏಪ್ರಿಲ್ 24, 1929 ರಂದು ಜನಿಸಿದರು. ಅವರ ತಂದೆ ಸಿಂಗಾನಲ್ಲೂರು ಪುಟ್ಟಸ್ವಾಮಯ್ಯನವರು ಅಪ್ರತಿಮ ರಂಗಭೂಮಿ ಕಲಾವಿದರಾಗಿದ್ದರು. ರಾಜ್ ಕುಮಾರ್ 'ಬೇಡರ ಕಣ್ಣಪ್ಪ' (1954) ಚಿತ್ರದ ಮೂಲಕ ಬೆಳ್ಳಿತೆರೆಗೆ ಪಾದಾರ್ಪಣೆ ಮಾಡಿದರು. ಅಲ್ಲಿಂದ ಆರಂಭವಾದ ಅವರ ಸಿನಿ ಪಯಣ ಸುಮಾರು 200 ರಿಂದ 205 ಚಿತ್ರಗಳಲ್ಲಿ ನಟಿಸಿದ್ದಾರೆ ಎಂದು ತಿಳಿಸಿದರು.

*ಬಳ್ಳಾರಿಯೊಂದಿಗೆ ಸಂಬಂಧ:*

ಡಾ. ರಾಜ್ ಅವರು ಕೇವಲ ನಟ–ರಾಗಿರದೆ ಸಮಾಜ ಸೇವಕರಾಗಿಯೂ ಗುರುತಿಸಿಕೊಂಡಿದ್ದರು. 1995 ರಲ್ಲಿ ಬಳ್ಳಾರಿಯಲ್ಲಿ ರಸಮಂಜರಿ ಕಾರ್ಯಕ್ರಮ ನಡೆಸಿ, ಅದ–ರಿಂದ ಬಂದ ಹಣವನ್ನು ರಂಗಮಂದಿರ ನಿರ್ಮಾಣಕ್ಕೆ ದೇಣಿಗೆ ನೀಡಿದ್ದರು. ಸರ್ಕಾರ ಪ್ರಶಸ್ತಿ ಘೋಷಿಸಿದಾಗ, ತಮಗಿಂತ ಮೊದಲು ಕುವೆಂಪು ಅವರಿಗೆ ಈ ಗೌರವ ಸಿಗಬೇಕು ಎಂದು ಅವರು ಬಯಸಿದ್ದರು. ನಂತರ ಇಬ್ಬರಿಗೂ ಜಂಟಿಯಾಗಿ ಈ ಪ್ರಶಸ್ತಿ ನೀಡಲಾಯಿತು. ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯೊಂದಿಗೆ ಬಂದ ಹಣವನ್ನೆಲ್ಲಾ ಅವರು ಕನ್ನಡ ಸಾಹಿತ್ಯ ಪರಿಷತ್ತಿಗೆ ದತ್ತಿಯಾಗಿ ನೀಡಿದರು ಎಂದರು.

ಡಾ.ರಾಜ್ ಕುಮಾರ್ ಅವರು ಸಹಕಲಾವಿದರಿಗೆ ಗೌರವ ನೀಡುತ್ತಿದ್ದರು. ಚಿತ್ರೀಕರಣದ ಸೆಟ್ ಅನ್ನು ದೇವಸ್ಥಾನವೆಂದು ಭಾವಿಸುತ್ತಿದ್ದ ಅವರು, ಅಲ್ಲಿ ಧೂಮಪಾನ ಅಥವಾ ಮದ್ಯಪಾನಕ್ಕೆ ಅವಕಾಶ ನೀಡುತ್ತಿರಲಿಲ್ಲ. ಸ್ವತಃ ಅವರೂ ಕೂಡ ತೆರೆಯ ಮೇಲೆ ಇಂತಹ ದೃಶ್ಯಗಳಲ್ಲಿ ನಟಿಸಲು ನಿರಾಕರಿಸುತ್ತಿದ್ದರು ಎಂದರು.

*ಅಭಿಮಾನಿಗಳೇ ದೇವರು:*

ತಿರುಪತಿಯಲ್ಲಿ ಸಾಮಾನ್ಯ ಸರತಿಯಲ್ಲಿ ನಿಂತು ದರ್ಶನ ಪಡೆದ ಘಟನೆಯ

ನಂತರ, ಅವರು ತಮ್ಮ ಅಭಿಮಾನಿಗಳನ್ನು 'ಅಭಿಮಾನಿ ದೇವರುಗಳು' ಎಂದು ಕರೆಯಲು ಆರಂಭಿಸಿದರು. ಗೋಕಾಕ್ ಚಳವಳಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕನ್ನಡ ಭಾಷೆಯ ಹಿತಾಸಕ್ತಿಗಾಗಿ ಶ್ರಮಿಸಿದರು. 'ಸಂಪತ್ತಿಗೆ ಸವಾಲ್' ಚಿತ್ರದ ಮೂಲಕ ಪೂರ್ಣ ಪ್ರಮಾಣದ ಗಾಯಕರಾದ ಅವರು, ಶಾಸ್ತ್ರೀಯ ಸಂಗೀತ ಮತ್ತು ಭಕ್ತಿಗೀತೆಗಳಿಗೂ ಧ್ವನಿಯಾದರು. ಅವರ 'ನಾದಮಯ' ಹಾಡು ಇಂದಿಗೂ ಜನಪ್ರಿಯವಾಗಿದೆ. ವಿಶೇಷವೆಂದರೆ, ಭಕ್ತಿಗೀತೆಗಳ ಗಾಯನದಿಂದ ಬಂದ ಹಣವನ್ನು ಅವರು ಎಂದಿಗೂ ಸ್ವಂತಕ್ಕೆ ಬಳಸದೆ ಮಠ–ಮಾನ್ಯಗಳಿಗೆ ನೀಡುತ್ತಿದ್ದರು ಎಂದು ತಿಳಿಸಿದರು.

ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಗೆ ಡಾ. ರಾಜ್‌ಕುಮಾರ್ ಅವರು ನೀಡಿದ ಕೊಡುಗೆ ಅನನ್ಯ. ಅವರ ಸರಳತೆ ಮತ್ತು ಆದರ್ಶಗಳು ಇಂದಿನ ತಲೆಮಾರಿಗೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೊಪ್ಪಳದ ಕ್ಷಿತಿ ಮ್ಯೂಸಿಕಲ್ ಈವೆಂಟ್ಸ್ ನ ತಂಡದವರು ಡಾ.ರಾಜ್ ಕುಮಾರ್ ನಟಿಸಿದ ಕನ್ನಡ ಚಲನಚಿತ್ರ ಗೀತೆಗಳ ಗಾಯನ ರಸದೌತಣವನ್ನು ಕಲಾಭಿಮಾನಿಗಳಿಗೆ ಉಣಬಡಿಸಿದರು. ಸಂವಿಧಾನ ಪ್ರಸ್ತಾವನೆ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ, ಕನ್ನಡಪರ ಹೋರಾಟಗಾರರು ಹಾಗೂ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಸಿರಿಗೇರಿ ಪನ್ನರಾಜ್

, ಕನ್ನಡ ಮತ್ತು ಸಂಸ್ಕೃತಿಯ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಡಾ.ರಾಜ್ ಕುಮಾರ್ ಕಲಾಭಿಮಾನಿಗಳು, ಸಾರ್ವಜನಿಕರು, ಹಾಗೂ ಇತರರು ಉಪಸ್ಥಿತರಿದ್ದರು.



# ಪದ್ಮಶ್ರೀ ಪುರಸ್ಕೃತ ರಘು ರಾಯ್ ನಿಧನ ಕೆಯುಡಬ್ಲ್ಯೂಜೆ ಸಂತಾಪ



**ಬೆಂಗಳೂರು:** ಪದ್ಮಶ್ರೀ ಪುರಸ್ಕೃತ ಹಿರಿಯ ಫೋಟೋ ಜರ್ನಲಿಸ್ಟ್ ರಘು ರಾಯ್ ಅವರ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು (ಕೆಯುಡಬ್ಲ್ಯೂಜೆ) ಸಂತಾಪ ವ್ಯಕ್ತಪಡಿಸುತ್ತದೆ.

ಬಾಂಗ್ಲಾ ವಿಮೋಚನಾ ಯುದ್ಧ, ಭೋಪಾಲ್ ಅನಿಲ ದುರಂತದಂತಹ ಪ್ರಮುಖ ಘಟನೆಗಳನ್ನು ಅವರು ತಮ್ಮ ಕ್ಯಾಮರಾದಲ್ಲಿ ದಾಖಲಿಸಿರುವುದು ಇತಿಹಾಸ ಪುಟದಲ್ಲಿ ಅಚ್ಚಳಿಯದ ಉಳಿದಿದೆ ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಸೇವೆ ಸ್ಮರಿಸಿದ್ದಾರೆ.

ಮದರ್ ತೆರೇಸಾ ಸೇರಿದಂತೆ ಪ್ರಮುಖ ವ್ಯಕ್ತಿಗಳ ಶ್ರೇಷ್ಠ ಚಿತ್ರಗಳನ್ನು ಸೆರೆ ಹಿಡಿದಿರುವುದು ಅವರ ಹೆಗ್ಗಳಿಕೆ. ಪ್ರತಿಷ್ಠಿತ ಮ್ಯಾಗ್ನಮ್ ಸಂಸ್ಥೆಯ ಸದಸ್ಯರಾಗಿದ್ದ ಅವರ ಛಾಯಾ ಚಿತ್ರಗಳನ್ನು ಟೈಮ್ ಮತ್ತು ದಿ ನ್ಯೂಯಾರ್ಕ್ ಟೈಮ್ಸ್ ಸೇರಿದಂತೆ ಅನೇಕ ಅಂತರಾಷ್ಟ್ರೀಯ ಮಾಧ್ಯಮಗಳು ಪ್ರಕಟಿಸಿವೆ ಎಂದು ಅವರು ನೆನಪಿಸಿದ್ದಾರೆ.



**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಎಂಖ ಅಧಿಕಾರಿಗಳ ಸಂಘದ ನವೀಕರಿಸಿದ ಕಟ್ಟಡ ಹಾಗೂ ಹೊಸದಾಗಿ ನಿರ್ಮಿಸಿರುವ ಹೆಚ್ಚುವರಿ ಕೊಠಡಿಗಳನ್ನು ಉದ್ಘಾಟಿಸಿದರು. ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಕೃಷ್ಣಬೈರೇಗೌಡ, ಮುಖ್ಯಮಂತ್ರಿಗಳ ಕಾರ್ಯದರ್ಶಿ ಕಾವೇರಿ, ಎಂಖ ಅಧಿಕಾರಿಗಳ ಸಂಘದ ಅಧ್ಯಕ್ಷರಾದ ಶಿವಸ್ವಾಮಿ, ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿ ಸತ್ಯನಾರಾಯಣ್ ಸೇರಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.**

# ದಂಡಾಧಿಕಾರಿ ವಿರುದ್ಧ ಕೆಂಡಾಮಂಡಲ

**ಚಿಂತಾಮಣಿ:** ನಗರದಲ್ಲಿ ನಡೆದ ಮಹಿಳಾ ಮೀಸಲಾತಿ ವಿರೋಧಿಸಿ ಕಾಂಗ್ರೆಸ್ ವಿರುದ್ಧ ಬಿಜೆಪಿ ಪ್ರತಿಭಟನೆಯ ವೇಳೆ ವಿಧಾನ ಪರಿಷತ್ ಸದಸ್ಯೆ ಎಂ ಎಲ್ ಸಿ ಭಾರತಿ ಶೆಟ್ಟಿ ಅವರು ಅಧಿಕಾರಿಗಳ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ,ತಾಲೂಕು ದಂಡಾಧಿಕಾರಿಗಳ ವಿರುದ್ಧ ಗುಡುಗಿದ್ದಾರೆ.

ಚಿಂತಾಮಣಿಯ ತಾಲೂಕು ಕಚೇರಿ ಮುಂಭಾಗ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಭಾರತಿ ಶೆಟ್ಟಿ ಅವರು ಪಾಲ್ಗೊಂಡಿದ್ದರು.ಈ ವೇಳೆ ಪ್ರತಿಭಟನಾ ನಿರತರಿಂದ ಮನವಿ ಸ್ವೀಕರಿಸಲು ತಾಲೂಕು ದಂಡಾಧಿಕಾರಿಗಳು ಸ್ಥಳಕ್ಕೆ ಬಾರದಿರುವುದು ಭಾರತಿ ಶೆಟ್ಟಿ ಅವರ ಆಕ್ರೋಶಕ್ಕೆ ಕಾರಣವಾಯಿತು.

ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರು ಬೀದಿಯಲ್ಲಿ ನಿಂತು ಪ್ರತಿಭಟನೆ ಮಾಡುತ್ತಿದ್ದರೂ,ಕನಿಷ್ಠ ಸೌಜನ್ಯಕ್ಕಾದರೂ ಬಂದು ಮನವಿ ಸ್ವೀಕರಿಸದ ಅಧಿಕಾರಿಗಳ ನಡೆ ಅಕ್ಷಮ್ಯ ಎಂದು ಅವರು ಕಿಡಿಕಾರಿದರು.

ಫೋನ್ ಮೂಲಕವೇ ತಾಲೂಕು ದಂಡಾಧಿಕಾರಿಗಳನ್ನು ಸಂಪರ್ಕಿಸಿದ ಅವರು,ತಾಲೂಕು ದಂಡಾಧಿಕಾರಿಗಳ ಕಾರ್ಯವೈಖರಿಯನ್ನು ಪ್ರಶ್ನಿಸಿದರು.ನೀವು ಜನಸೇವಕರು ಎಂಬುದು ನೆನಪಿರಲಿ, ಜನರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ತಕ್ಕ ಶಾಸ್ತಿ ಎದುರಿಸಬೇಕಾಗುತ್ತದೆ,"ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಮಾತನಾಡಿದ ಅವರು,ತಾಲೂಕಿನಲ್ಲಿ ಮಹಿಳೆಯರ ಸಮಸ್ಯೆಗಳು ಮತ್ತು ಅಭಿವೃದ್ಧಿ ಕಾರ್ಯಗಳ ಕುರಿತು ಅಧಿಕಾರಿಗಳು ತೋರುತ್ತಿರುವ ನಿರ್ಲಕ್ಷ್ಯವನ್ನು ಕಟುವಾಗಿ ಟೀಕಿಸಿದರು.

ಭಾರತಿ ಶೆಟ್ಟಿ ಅವರ ಭಾಷಣಕ್ಕೆ ಸಾಥ್ ನೀಡಿದ ಪ್ರತಿಭಟನಾಕಾರರು,ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ಅಧಿಕಾರಿಗಳು ಸ್ಥಳಕ್ಕೆ ಬಂದು ಮನವಿ ಸ್ವೀಕರಿಸುವವರೆಗೆ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದ ಘಟನೆ, ಆಡಳಿತ ವರ್ಗ ಮತ್ತು ವಿರೋಧ ಪಕ್ಷದ ನಡುವಿನ ಶೀತಲ ಸಮರಕ್ಕೆ ಸಾಕ್ಷಿಯಾಯಿತು.


# ಚಿಂತಾಮಣಿಗೆ ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಭೇಟಿ: ಬಿಜೆಪಿ ವಿರುದ್ಧ ವಾಗ್ದಾಳಿ

**ಚಿಂತಾಮಣಿ:** ರಾಜ್ಯದ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗ ರೆಡ್ಡಿ ಅವರು ಚಿಂತಾಮಣಿ ತಾಲೂಕಿನ ಯಗು-ಕೋಟೆ ಗ್ರಾಮದ ದೇವಸ್ಥಾನಕ್ಕೆ ಭೇಟಿ ನೀಡಿದ ನಂತರ ವಿವಿಧ ವಿಷಯಗಳ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದರು.ಈ ವೇಳೆ ಅವರು ಕೇಂದ್ರ ಸರ್ಕಾರದ ಮಹಿಳಾ ಮೀಸಲಾತಿ ಮಸೂದೆ ಜಾರಿಯ ವಿಳಂಬದ ಕುರಿತು ಭಾರತೀಯ ಜನತಾ ಪಾರ್ಟಿ(ಬಿಜೆಪಿ) ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

2023ರಲ್ಲಿಯೇ ಪಾರ್ಲಿಮೆಂಟ್ ಮತ್ತು ರಾಜ್ಯಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆಗೆ ಎಲ್ಲಾ ಪಕ್ಷಗಳು ಒಮ್ಮತದ ಅನುಮೋದನೆ ನೀಡಿವೆ.ಹೀಗಿದ್ದರೂ, ಜನಗಣತಿ ಮತ್ತು ಕ್ಷೇತ್ರ ಮರುವಿಂಗಡಣೆಯ ನೆಪವೊಡ್ಡಿ ಇದನ್ನು ಜಾರಿಗೊಳಿಸುವುದನ್ನು ಮುಂದೂಡುತ್ತಿರುವುದು ಸರಿಯಲ್ಲ ಎಂದು ಸಚಿವರು ಕಿಡಿಕಾರಿದರು.

ದೇಶದಲ್ಲಿ ಪ್ರಥಮ ಬಾರಿಗೆ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ತಂದವರು ಮಾಜಿ ಪ್ರಧಾನಿ ರಾಜೀವ್ ಗಾಂಧಿ. ಅಧಿಕಾರ ವಿಕೇಂದ್ರಿಕರಣದ ಮೂಲಕ ಮಹಿಳೆಯರಿಗೆ ರಾಜಕೀಯ ಶಕ್ತಿ ನೀಡಿದ್ದು ಕಾಂಗ್ರೆಸ್ ಪಕ್ಷ ಎಂದು ಅವರು ಪ್ರತಿಪಾದಿಸಿದರು.


ಬಿಜೆಪಿ ನಾಯಕರಿಗೆ "ನಾಚಿಕೆ, ಮಾನ, ಮರ್ಯಾದೆ ಇಲ್ಲ"ಎಂದು ಕಟುವಾಗಿ ಟೀಕಿಸಿದ ಅವರು, ಈಗಾಗಲೇ ಅನುಮೋದನೆಗೊಂಡಿರುವ ಮಸೂದೆಯನ್ನು ಜಾರಿಗೊಳಿಸಲು ಯಾವುದೇ ಅಡೆತಡೆಗಳಿಲ್ಲದಿದ್ದರೂ ವಿಳಂಬ ಧೋರಣೆ ಅನುಸರಿಸಲಾಗುತ್ತಿದೆ ಎಂದು ಆರೋಪಿಸಿದರು.



ಇಲಾಖೆಗೆ ಸಂಬಂಧಿಸಿದ ದೂರುಗಳ ಬಗ್ಗೆ ಪ್ರಸ್ತಾಪಿಸಿದ ಸಚಿವರು,ಕರ್ತವ್ಯ ಲೋಪ ಎಸಗುವ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಮತ್ತು ಅಂತಹವರನ್ನು ಅಮಾನತು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಭೇಟಿಯ ಸಂದರ್ಭದಲ್ಲಿ ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ನಾರಿ ಶಕ್ತಿ ಪ್ರದರ್ಶನ: ಮೀಸಲಾತಿ ಕಸಿದುಕೊಂಡ ಕಾಂಗ್ರೆಸ್





• **ಮಲ್ಲಮ್ಮ ನುಡಿ ವಾರ್ತೆ ಚಿಂತಾಮಣಿ**

ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಐತಿಹಾಸಿಕ 'ನಾರಿಶಕ್ತಿ ವಂದನ್ ಅಧಿನಿಯಮ'(ಮಹಿಳಾ ಮೀಸಲಾತಿ) ಮತ್ತು ಕ್ಷೇತ್ರ ಪುನರ್ ವಿಂಗಡಣೆ ಪ್ರಕ್ರಿಯೆಗೆ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಅಸಹಕಾರ ತೋರುತ್ತಿವೆ ಎಂದು ಆರೋಪಿಸಿ ಚಿಂತಾಮಣಿ ತಾಲ್ಲೂಕು ಬಿಜೆಪಿ ಘಟಕವು ಇಂದು ಪ್ರತಿಭಟನೆ ನಡೆಸಿ,ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ದಶಕಗಳ ಕಾಲ ಮಹಿಳಾ ಮೀಸಲಾತಿಯನ್ನು ಮೂಲೆಗುಂಪು ಮಾಡಿದ್ದ ಕಾಂಗ್ರೆಸ್,ಈಗ ಕೇಂದ್ರ ಸರ್ಕಾರ ಅದನ್ನು ಜಾರಿಗೆ ತರುತ್ತಿದ್ದರೂ ತಾಂತ್ರಿಕ ಅಡೆತಡೆಗಳನ್ನು ಒಡ್ಡುವ ಮೂಲಕ ಮಹಿಳೆಯರಿಗೆ ಸಿಗಬೇಕಾದ ನ್ಯಾಯಯುತ ಹಕ್ಕನ್ನು ವಿಳಂಬ ಮಾಡುತ್ತಿದೆ ಎಂದು ಬಿಜೆಪಿ ಎಂ ಎಲ್ ಸಿ ಭಾರತೀ ಶೆಟ್ಟಿ,ಮತ್ತು ಬಿಜೆಪಿ ಮುಖಂಡ ವೇಣುಗೋಪಾಲ್(ಗೋಪಿ) ಆಕ್ರೋಶ ವ್ಯಕ್ತಪಡಿಸಿದರು.

ಸಾಂವಿಧಾನಿಕವಾಗಿ ನಡೆಯಬೇಕಾದ ಕ್ಷೇತ್ರ ಪುನರ್ ವಿಂಗಡಣೆ ಪ್ರಕ್ರಿಯೆಯನ್ನು ರಾಜಕೀಯ ಲಾಭ-ನಷ್ಟದ ದೃಷ್ಟಿಯಿಂದ ನೋಡುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಯಿತು.



ಮಹಿಳೆಯರ ಸಬಲೀಕರಣಕ್ಕಾಗಿ ತಂದಿರುವ ಈ ಮೈಲಿಗಲ್ಲನ್ನು ಸ್ವಾಗತಿಸುವ ಬದಲು ರಾಜಕೀಯ ಪ್ರೇರಿತ ಅಸಹಕಾರ ತೋರುತ್ತಿರುವುದು ಖಂಡನೀಯ. ಕೂಡಲೇ ಕಾಂಗ್ರೆಸ್ ತನ್ನ ಪಟ್ಟಭದ್ರ ಹಿತಾಸಕ್ತಿಯನ್ನು ಬಿಟ್ಟು ಸಾಂವಿಧಾನಿಕ ಪ್ರಕ್ರಿಯೆಗಳಿಗೆ ಸಹಕರಿಸಬೇಕು" ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷರಾದ ರಾಜಣ್ಣ,ಮಹೇಶ್ ಬೈ, ರೋಹಿಣಿ,ಗೌತಮಿ,ಪೂಜಾ,ದೇವರಾಜ್,ಗಾಜಲು ಶಿವ, ಸೇರಿದಂತೆ ನೂರಾರು ಮಹಿಳಾ ಕಾರ್ಯಕರ್ತರು ಭಾಗವಹಿಸಿದ್ದರು.

# ನಟ ಚೇತನ್ ಹೇಳಿಕೆ, ಖಾದರ್ ಭಾಷಾ ಆಕ್ರೋಶ


• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ನಟ ಚೇತನ್ ಅವರ ವಿವಾದಾತ್ಮಕ ಹೇಳಿಕೆ ಹಿನ್ನೆಲೆಯಲ್ಲಿ ಡಾ.ರಾಜ್ ಕುಮಾರ್ ಅಭಿಮಾನಿಗಳಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಕನ್ನಡದ ಅಪ್ರತಿಮ ನಟರಾದ ಡಾ.ರಾಜ್ ಕುಮಾರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆಗಳನ್ನು ನೀಡಿರುವುದನ್ನು ಖಂಡಿಸಿ ಡಾಟಟ ರಾಜಕುಮಾರ್ ಸಂಘದ ಜಿಲ್ಲಾಧ್ಯಕ್ಷ ಖಾದರ್ ಭಾಷಾ ಪ್ರತಿಭಟನೆ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂಬಂಧವ ಡಾಟಟ ರಾಜಕುಮಾರ್ ಸಂಘದ ಜಿಲ್ಲಾಧ್ಯಕ್ಷರಾದ ಖಾದರ್ ಭಾಷಾ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ನಟ ಚೇತನ್ ಅವರ ಹೇಳಿಕೆಗಳು ಕನ್ನಡಿಗರ ಭಾವನೆಗಳಿಗೆ ಧಕ್ಕೆ ಉಂಟುಮಾಡಿವೆ ಎಂದು ಹೇಳಿದರು. ಡಾ. ರಾಜ್ ಕುಮಾರ್ ಅವರು ಕೇವಲ ನಟರಷ್ಟೇ ಅಲ್ಲ, ಕನ್ನಡ ಸಂಸ್ಕೃತಿ ಮತ್ತು ನಾಡಿನ ಗೌರವದ ಪ್ರತೀಕವಾಗಿದ್ದು, ಅವರ ಬಗ್ಗೆ ಅವಮಾನಕಾರಿಯಾಗಿ ಮಾತನಾಡುವುದು ಸಹಿಸುವುದಿಲ್ಲ ಎಂದು ಕಿಡಿಕಾರಿದರು.

ಮುಂದುವರಿದು ಮಾತನಾಡಿದ ಅವರು, ತಕ್ಷಣವೇ ನಟ ಚೇತನ್ ಸಾರ್ವಜನಿಕವಾಗಿ ಕ್ಷಮೆ ಯಾಚಿಸಬೇಕು, ಇಲ್ಲವಾದರೆ ರಾಜ್ಯದಾದ್ಯಂತ



ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಈ ರೀತಿಯ ಹೇಳಿಕೆಗಳು ಸಮಾಜದಲ್ಲಿ ಅಶಾಂತಿ ಉಂಟುಮಾಡುವ ಸಾಧ್ಯತೆ ಇರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.ಅಭಿಮಾನಿಗಳು ಕೂಡ ಈ ಸಂದರ್ಭದಲ್ಲಿ ತೀವ್ರ ಆಕ್ರೋಶ ವ್ಯಕ್ತಪಡಿಸಿ, ಕನ್ನಡದ ಹೆಮ್ಮೆ ಡಾ.ರಾಜ್ ಕುಮಾರ್ ಅವರ ಗೌರವ ಕಾಪಾಡುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ ಎಂದು ಹೇಳಿದರು. ನಗರದಲ್ಲಿ ಕೆಲವೆಡೆ ಪ್ರತಿಭಟನೆಗಳು ನಡೆದಿದ್ದು, ಪರಿಸ್ಥಿತಿ ಉದ್ವಿಗ್ನವಾಗಿರುವ ಹಿನ್ನೆಲೆಯಲ್ಲಿ ಪೊಲೀಸರು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದಾರೆ.


ಈ ಘಟನೆಗೆ ಸಂಬಂಧಿಸಿದಂತೆ ಮುಂದಿನ ದಿನಗಳಲ್ಲಿ ಇನ್ನಷ್ಟು ಹೋರಾಟಗಳು ನಡೆಯುವ ಸಾಧ್ಯತೆ ಇದೆ ಎಂದು ಜಿಲ್ಲಾಧ್ಯಕ್ಷ ಖಾದರ್ ಭಾಷಾ ಮತ್ತು ಅಭಿಮಾನಿಗಳು ಎಚ್ಚರಿಕೆ ನೀಡಿದ್ದಾರೆ.

# ಕನ್ನಡ ಚಿತ್ರರಂಗದಿಂದ ಓಮರ್ ಅಬ್ದುಲ್ಲಾರ ಭೇಟಿ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಜಮ್ಮು-ಕಾಶ್ಮೀರದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರು ಇತ್ತೀಚೆಗೆ ಬೆಂಗಳೂರಿಗೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಹಿರಿಯ ನಿರ್ಮಾಪಕ ರಾಕ್ಲೈನ್ ವೆಂಕಟೇಶ್, ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷರಾದ ಎಂ.ಜಿ ರಾಮಮೂರ್ತಿ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಉಪಾಧ್ಯಕ್ಷರಾದ ಸುಂದರರಾಜ್, ನಿರ್ಮಾಪಕ ಎನ್ ಎಸ್ ರಾಜಕುಮಾರ್, ಇನ್ನೋವೇಟಿವ್ ಪ್ರಸಾದ್, ನಿರ್ಮಾಪಕರ ಸಂಘದ ಜಂಟಿ ಕಾರ್ಯದರ್ಶಿ ರಮೇಶ್ ಯಾದವ್ ಸೇರಿದಂತೆ ಕನ್ನಡ ಚಿತ್ರರಂಗದ ಗಣ್ಯರು ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರನ್ನು ಭೇಟಿಯಾಗಿ, ಮಾತುಕತೆ ನಡೆಸಿದ್ದಾರೆ. ನಿರ್ಮಾಪಕ ಎನ್ ಎಸ್ ರಾಜಕುಮಾರ್ ಈ ಭೇಟಿಯ ವ್ಯವಸ್ಥೆಯನ್ನು ಮಾಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರು, ಕನ್ನಡ ಚಿತ್ರಗಳ ಚಿತ್ರೀಕರಣಕ್ಕೆ ಜಮ್ಮು-ಕಾಶ್ಮೀರದಲ್ಲಿ ಸೂಕ್ತ ವ್ಯವಸ್ಥೆ ಹಾಗೂ ಭದ್ರತೆ ನೀಡುವುದರ ಜೊತೆಗೆ ಇನ್ಸೆಂಟಿವ್ ಸಹ ನೀಡುವುದಾಗಿ ಹೇಳಿದ್ದಾರೆ. ಜೊತೆಗೆ ಕನ್ನಡ ಚಿತ್ರರಂಗದ ಪ್ರಮುಖರ ತಂಡ ಸದ್ಯದಲ್ಲೇ ಜಮ್ಮು-ಕಾಶ್ಮೀರಕ್ಕೆ ಬನ್ನಿ ಎಂದು ಆಹ್ವಾನ ಕೂಡ ನೀಡಿದ್ದಾರೆ.



# ದುರ್ವಾಸನೆಯಿಂದ ಕೂಡಿದ ಬಂಡಗೇರಿ ವಾರ್ಡ್: ನಿರ್ಲಕ್ಷ್ಯ

• **ವಿಶೇಷ ವರದಿ: ಡಿ.ಕೆ. ದೇವಿಂದ್ರ, ಯಾದಗಿರಿ**

ಶೌಚಾಲಯವು ನೈರ್ಮಲ್ಯ,ಆರೋಗ್ಯ ಮತ್ತು ಮಾನವ ಘನತೆಗೆ ಅತ್ಯಗತ್ಯ. ಬಯಲು ಮಲವಿಸರ್ಜನೆ ತಡೆಗಟ್ಟಿ, ಅತಿಸಾರದಂತಹ ರೋಗಗಳನ್ನು ಕಡಿಮೆ ಮಾಡಲು ಮತ್ತು ಸುರಕ್ಷಿತ ಜೀವನಕ್ಕೆ ಮನೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಮರ್ಪಕ ಶೌಚಾಲಯಗಳ ನಿರ್ಮಾಣ ಮತ್ತು ಬಳಕೆ ಕಡ್ಡಾಯವಾಗಿದೆ. ಶೌಚಾಲಯದ ಸರಿಯಾದ ಬಳಕೆ, ಕೈ ತೊಳೆಯುವಿಕೆ ರೋಗಗಳನ್ನು ತಡೆಗಟ್ಟುತ್ತದೆ.

ಜಾಗತಿಕವಾಗಿ ಜನರು ಇನ್ನೂ ಬಯಲು ಮಲವಿಸರ್ಜನೆ ಮಾಡುತ್ತಾರೆ, ಇದು ಮಾರಕ ರೋಗಗಳಿಗೆ ಕಾರಣವಾಗುತ್ತದೆ, ಯಾದಗಿರಿ ನಗರದ ಬಂಡಗೇರಿ ವಾರ್ಡ್ ಸಂಖ್ಯೆ 7 ರಲ್ಲಿ ಸುಮಾರು ದಿನಗಳಿಂದ ಶೌಚಾಲಯ ಆಳು ಬಿದ್ದು ದುರ್ವಾಸನೆಯಿಂದ ಕೂಡಿ ಹಲವು ರೋಗಗಳಿಗೆ ಎಡೆ ಮಾಡಿಕೊಟ್ಟಿದೆ, ಪುರುಷರಿಗೆ ಮತ್ತು ಮಹಿಳೆಯರಿಗೆ ಎಂದು ಪ್ರತ್ಯೇಕ ಶೌಚಾಲಯಗಳನ್ನು ನಿರ್ಮಾಣ ಮಾಡಿದ್ದು, ಅದನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡದೆ ಉದ್ಘಾಟನೆಗೊಳ್ಳದೆ ಹಸ್ತವ್ಯಸ್ತಗೊಂಡಿಂದೆ, ಬಂಡಿಗೆರೆಯಲ್ಲಿ ಸುಮಾರು ಸಾವಿರಕ್ಕೂ ಹೆಚ್ಚು ಜನ ಶೌಚಾಲಯವಿಲ್ಲದೆ ಹೊರ ವಲಯದಲ್ಲಿ ಹೋಗುತ್ತಿದ್ದು, ಕಡಿವಾಣ ಹಾಕಲು



**ಯಾದಗಿರಿ ನಗರದ ಬಂಡಿಗೇರಾ ವಾರ್ಡ್ 7 ರಲ್ಲಿ ಮಹಿಳೆಯರಿಗೆ, ಪುರುಷರಿಗೆ ಬಾತ್ರೂಮ್ ಕಟ್ಟಲಾಗಿತ್ತು, ನೀರಿಲ್ಲದೆ ದುರ್ವಾಸನೆಯಿಂದ ರೋಗಗಳು ಬರಲು ಶುರು ಮಾಡಿದವೆ, ನನ್ನ ಮಗನಿಗೆ ಡೆಂಗೋ ಮತ್ತು ಮಲೇರಿಯಾ ಬಂದಿತ್ತು ಆ ಸಂದರ್ಭದಲ್ಲಿ ದವಾಖಾನೆಗೆ ಹೋಗಿ ತೋರಿಸಿಕೊಂಡಿದ್ದೇವೆ, ಹೇಳುವವರಿಲ್ಲ ಕೇಳುವವರಿಲ್ಲ, ನಗರ ಸಭೆಗೆ ಪೌರ ಆಯುಕ್ತಕರಿಗೆ ಫೋನ್ ಮಾಡಿದ್ರು ಫೋನ್ ತೆಗೆಯುತ್ತಿಲ್ಲ ವಾಟ್ಸಪ್ಪಲ್ಲಿ ಫೋಟೋ ಮತ್ತು ವಿಷಯವನ್ನು ಬರೆದಾಕಿದರು ಸರಿಯಾದ ರೀತಿಯಲ್ಲಿ ರೆಸ್ಪಾನ್ಸ್ ಮಾಡುತ್ತಿಲ್ಲ.**

**-ನಿಂಗಪ್ಪ ಎಂ ಜಾಲಗರ್, ಮಾಜಿ ನಗರಸಭೆ ಸದಸ್ಯರು ಬಂಡಗೇರಿ ವಾರ್ಡ್ 07 ಯಾದಗಿರಿ**

ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದ್ದು ಆದರೆ ಅದಕ್ಕೆ ಸರಿಯಾದ ರೀತಿಯಲ್ಲಿ ಬಳಕೆ ಮಾಡದೆ ನೀರು ಮತ್ತು ನಿರ್ವಹಣೆ ಮಾಡುವ ಸಿಬ್ಬಂದಿ ಇಲ್ಲದೆ ಶೌಚಾಲಯ ಅಡೆಗೆಟ್ಟು ನಿಂತಿದೆ ಇದರಿಂದ ದುರ್ವಾಸನೆ ಇಂದ ಅನೇಕ ಜನರಿಗೆ ರೋಗಾನುಗಳು ಬರುತ್ತಿದ್ದಾವೆ, ಕೇವಲ ಶೌಚಾಲಯ ನಿರ್ಮಿಸಿದರೆ ಸಾಲದು,ಜನರು ಅದನ್ನು ನಿರಂತರವಾಗಿ ಬಳಸುವಂತೆ ಉತ್ತೇಜಿಸುವುದು ಅವಶ್ಯಕ . ಸ್ವಚ್ಛ ಭಾರತ ಅಭಿಯಾನದ ಮೂಲಕ ಭಾರತದಲ್ಲಿ ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಶೌಚಾಲಯ ನಿರ್ಮಾಣ ಮತ್ತು ಬಳಕೆಯನ್ನು ಕಡ್ಡಾಯಗೊಳಿಸಿದೆ ಆದರೆ ಇಲ್ಲಿ ವ್ಯವಸ್ಥೆ ವಿರುದ್ಧವಾಗಿದೆ.

ಶೌಚಾಲಯದ ಸ್ವಚ್ಛತೆ ಆರೋಗ್ಯವಂತ ಸಮಾಜದ ಬುನಾದಿಯಾಗಿದೆ. ದೈನಂದಿನ ಬಳಕೆಯ ಶೌಚಾಲಯವನ್ನು ಪ್ರತಿದಿನ ನೀರು, ಫಿನೈಲ್ ಅಥವಾ ಸೋಪು ಬಳಸಿ ಸ್ವಚ್ಛಗೊಳಿಸುವುದು, ಶೌಚದ ನಂತರ ಫ್ಲಶ್ ಮಾಡುವುದು ಮತ್ತು ಕೈಗಳನ್ನು ಸೋಪಿನಿಂದ ತೊಳೆಯುವುದು ಅತ್ಯಗತ್ಯ. ಇದು ಕಾಲರಾ, ಅತಿಸಾರ ಮುಂತಾದ ರೋಗಗಳನ್ನು ತಡೆದು, ನೈರ್ಮಲ್ಯ, ಸುರಕ್ಷತೆ ಮತ್ತು ಆತ್ಮಗೌರವವನ್ನು ಕಾಪಾಡುತ್ತದೆ, ವಿಶೇಷವಾಗಿ ಮಹಿಳೆಯರಿಗೆ ಮತ್ತು ಮಕ್ಕಳ ಆರೋಗ್ಯಕ್ಕೆ ಇದು ಅತ್ಯಂತ ಮಹತ್ವದಾಗಿದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಈ ಶೌಚಾಲಯಕ್ಕೆ ನೀರಿನ ವ್ಯವಸ್ಥೆ ಮತ್ತು ನಿರ್ವಹಣೆ ಮಾಡಿಕೊಂಡು ಹೋಗುವ ವ್ಯಕ್ತಿಯನ್ನು ನೇಮಕ ಮಾಡಿ ವ್ಯವಸ್ಥೆಯನ್ನು ಮಾಡ್ತಾರೋ ಇಲ್ಲವೋ ಎಂಬುದು ಕಾದು ನೋಡಬೇಕಾಗಿದೆ.

# ಜನಿ ವಾರ್ ಗಲಾಟೆಯಲ್ಲಿ ಸಂಸ್ಕಾರ ಮರೆಯಿತೆ ಸರ್ಕಾರ?




**ಬಾಳು-ಬೆಳಗು**

**• ಭಾಗ್ಯಶ್ರೀ ಜೋಶಿ**

**ಪತ್ರಕರ್ತರು, ಹುಬ್ಬಳ್ಳಿ**

ಕರ್ನಾಟಕ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಸಂದರ್ಭದಲ್ಲಿ ಮತ್ತೊಮ್ಮೆ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಯ ಜನಿವಾರ ತೆಗೆಸಿದ ಘಟನೆ ತೀವ್ರ ಖಂಡನೆಯಾಗಿದೆ. ಉಪನಯನ ಸಂಸ್ಕಾರದಲ್ಲಿ ಧರಿಸುವ ಈ ಜನಿವಾರವು ಬ್ರಾಹ್ಮಣರ ಧಾರ್ಮಿಕ ಗುರುತು, ಸಂಸ್ಕೃತಿ ಹಾಗೂ ಆತ್ಮ ಗೌರವದ ಪ್ರತೀಕವಾಗಿದೆ.

ಬೆಂಗಳೂರು ನಗರದ ಮಡಿವಾಳ ಪ್ರದೇಶದಲ್ಲಿರುವ ಕೃಪಾ ನಿಧಿ ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗೆ ಜನಿವಾರ ತೆಗೆದುಹಾಕುವಂತೆ ಬಲವಂತ



ಮಾಡಲಾಗಿದೆ. ಇದರ ನಡುವೆಯೇ ಚಿಕ್ಕಬಳ್ಳಾಪುರ ತಾಲೂಕಿನ ನಾಗಾರ್ಜುನ ಕಾಲೇಜಿನಲ್ಲಿ ವಿದ್ಯಾರ್ಥಿಯ ಜನಿವಾರ ಕತ್ತರಿಸಿ ಕಸದ ಬುಟ್ಟಿಗೆ ಎಸೆದ ಘಟನೆ ನಡೆದಿದೆ. ತೆಗೆಯದಿದ್ದರೆ ಪರೀಕ್ಷೆಗೆ ಅವಕಾಶ ನೀಡುವುದಿಲ್ಲ ಎಂದು ಹೇಳಿರುವುದು ಅತ್ಯಂತ

## ಅಪಮಾನ ತಪ್ಪಿಸಲು ಕಾಯ್ದೆ ಜಾರಿಗೊಳಿಸಿ

**ಜನಿವಾರಕ್ಕೆ ಕೈ ಹಾಕಿದ ಅಧಿಕಾರಿಗಳಿಂದ ಸಂವಿಧಾನಾತ್ಮಕ ಹಕ್ಕುಗಳ ಉಲ್ಲಂಘನೆಯಾಗಿದೆ ಪದೇ ಪದೇ ಇಂತಹ ತಪ್ಪುಗಳಾಗುತ್ತಿದ್ದು ಸರ್ಕಾರ ಮುಜುಗರಕ್ಕೆ ಒಳಗಾಗುವಂತಾಗಿದೆ. ಇಂತಹ ಘಟನೆ ಮರುಗೊಳಿಸದಂತೆ ಕಾಯಿದೆ ಮಂಡಿಸಿ ಬ್ರಾಹ್ಮಣ ಸಮುದಾಯಕ್ಕೆ ಶಾಶ್ವತ ಪರಿಹಾರ ನೀಡಬೇಕು.**

ದುಃಖಕರ ಮತ್ತು ಸಂವಿಧಾನಾತ್ಮಕ ಹಕ್ಕುಗಳ ಉಲ್ಲಂಘನೆಯಾಗಿದೆ.

ವಿದ್ಯಾರ್ಥಿಯ ಧಾರ್ಮಿಕ ಆಚರಣೆಗಳಿಗೆ ಗೌರವ ನೀಡದೆ ಈ ರೀತಿಯ ನಿರ್ಬಂಧ ಇರುವುದು ಸಮಂಜಸವಲ್ಲ. ಕಳೆದ ವರ್ಷವೂ ಬೀದರ್ ಜಿಲ್ಲೆಯಲ್ಲಿ ಇದೇ ರೀತಿಯ ಘಟನೆ ನಡೆದಿತ್ತು. ಸರಕಾರ ಹಾಗೂ ಪರೀಕ್ಷಾ ಮಂಡಳಿ ಇಂತಹ ಘಟನೆಗಳನ್ನು ತಡೆಯಲು ಯಾವುದೇ ಕ್ರಮ ಕೈಗೊಂಡಿಲ್ಲವೆಂಬುವುದು ಮತ್ತೆ ಘಟನೆಯಿಂದ ಸ್ಪಷ್ಟವಾಗುತ್ತಿದೆ.

ಪ್ರತಿ ವರ್ಷವೂ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುತ್ತಿರುವುದು ಅತ್ಯಂತ ವಿಷಾದಕರ ವಿಷಯ. ಜನಿವಾರ ತೆಗೆಸಿದ ಕಾರಣದಿಂದ ಪರೀಕ್ಷೆ ಬರೆಯಲು ಅವಕಾಶ ಕಳೆದುಕೊಂಡ ವಿದ್ಯಾರ್ಥಿಗೆ ನ್ಯಾಯ ಒದಗಿಸಬೇಕು ಮತ್ತು ಅಗತ್ಯ ಪರಿಹಾರ ನೀಡಬೇಕು. ಘಟನೆಗೆ ಕಾರಣರಾದ ಕಾಲೇಜಿನ ಮಾನ್ಯತೆ ರದ್ದುಗೊಳಿಸಬೇಕು.

ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸ್ಪಷ್ಟವಾದ ಸೂಚಿಗಳನ್ನು ಜಾರಿಗೊಳಿಸಬೇಕು. ವಿದ್ಯಾರ್ಥಿಗಳ ಧಾರ್ಮಿಕ ಆಚರಣೆಗಳಿಗೆ ಗೌರವ ನೀಡುವಂತೆ ಪರೀಕ್ಷಾ ಕೇಂದ್ರಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)